VOLUME: 16 | 18 APRIL 2026 | ಶನಿವಾರ | RS: 2 | PAGE: 06 ISSUE: 75 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಮಲಯಾಳಂ ಚಿತ್ರರಂಗದ ಸ್ಟಾರ್ ಕಿಡ್‌ಗಳಾದ ಪ್ರಣವ್ ಮೋಹನ್‌ಲಾಲ್ ಮತ್ತು ಕಲ್ಯಾಣಿ ಪ್ರಿಯದರ್ಶನ್ ಜೋಡಿ ಸೂಪರ್. ಅವರ ಬಗ್ಗೆ ಅಭಿಮಾನಿಗಳು ಏನೇನೋ ಊಹಿಸಿಕೊಂಡಿದ್ದಾರೆ. ಅವರಿಬ್ಬರು ಮದುವೆ ಆಗುತ್ತಾರೆ ಎಂಬ ಗಾಸಿಪ್ ಕೂಡ ಹಬ್ಬಿದೆ. ಅದಕ್ಕೆ ಕಲ್ಯಾಣಿ ಅವರ ತಾಯಿ ಅಸ್ಸಿ ಇಲ್ಲ, ಇದು ಸುಳ್ಳು ಸುದ್ದಿ ಎಂದು ಸ್ಪಷ್ಟನೆ ನೀಡಿದ್ದಾರೆ.



## ಮಿತಿ ಮೀರಿದ ತಾಪಮಾನ

ರಾಯಚೂರು: ಬಿಸಿಲನಾಡು ರಾಯಚೂರು ಜಿಲ್ಲೆಯಲ್ಲಿ ಏಪ್ರಿಲ್ ತಿಂಗಳಲ್ಲೆ ಬಿಸಿಲಿನ ಅಬ್ಬರ ಬಲು ಜೋರಾಗಿದೆ. ಗರಿಷ್ಠ ತಾಪಮಾನ ಈಗಲೇ ದಾಖಲಾಗುತ್ತಿದ್ದು ಜನ ತತ್ತರಿಸಿ ಹೋಗಿದ್ದಾರೆ. ರೈತರ ಬಹುತೇಕ ಕೃಷಿ ಉತ್ಪನ್ನಗಳು ಮಾರುಕಟ್ಟೆಗೆ ಬರುತ್ತಿದ್ದು, ಬಿಸಿಲಿನ ಅಬ್ಬರಕ್ಕೆ ಅನ್ನದಾತರು ಹೈರಾಣಾಗಿದ್ದಾರೆ. ರಾಯಚೂರಿನ ಎಪಿಎಂಸಿಯಲ್ಲಿ ಸುಡುಬಿಸಿಲಿನಲ್ಲೇ ತಮ್ಮ ಉತ್ಪನ್ನಗಳ ಮಾರಾಟ ಮಾಡುತ್ತಿದ್ದಾರೆ.

ರಾಯಚೂರು ಅಂದ್ರೆ ಬೇರೆ ಹೇಳಬೇಕಿಲ್ಲಾ ಇಲ್ಲಿ ಇರೋದೇ ಎರಡು ಕಾಲ. ಒಂದು ಬೇಸಿಗೆ ಕಾಲ, ಇನ್ನೊಂದು ಬಿರು ಬೇಸಿಗೆಕಾಲ. ಇಂತಹದ್ರಲ್ಲಿ ಈ ಬಾರಿ ಬಿಸಿಲಿನ ಅಬ್ಬರ ಏಪ್ರಿಲ್ ತಿಂಗಳಲ್ಲೇ ಜೋರಾಗಿದೆ. ಈಗಾಗಲೇ ರಾಯಚೂರಿನಲ್ಲಿ ಗರಿಷ್ಠ ಉಷ್ಣಾಂಶ 44.1 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ತಾಪಮಾನದಲ್ಲಿ ಇನ್ನೂ ಹೆಚ್ಚಳದ ಸಾಧ್ಯತೆಯಿದೆ. ಆದ್ರೆ ಈಗ ರೈತರ ಬೆಳೆಗಳೆಲ್ಲಾ ಕಟಾವಾಗಿ ಮಾರುಕಟ್ಟೆಗೆ ಬರುತ್ತಿರುವ ಸಮಯ. ರಾಯಚೂರಿನ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಕನಿಷ್ಠ ಕುಡಿಯುವ ನೀರಿನ ವ್ಯವಸ್ಥೆಯಿಲ್ಲದೇ ಬಿಸಿಲಿನ ತಾಪಮಾನಕ್ಕೆ ಇಲ್ಲಿಗೆ ಬರುವ ರೈತರು, ಹಮಾಲಿಗಳು, ದಲ್ಲಾಳಿಗಳು ತತ್ತರಿಸಿ ಹೋಗುತ್ತಿದ್ದಾರೆ.

ಈಗಾಗಲೇ ಭತ್ತ, ಈರುಳ್ಳಿ, ಶೇಂಗಾ, ತೊಗರಿ, ಕುಸುಬೆ, ಮೆಕ್ಕೆ ಜೋಳ ಸೇರಿ ವಿವಿಧ ಕೃಷಿ ಉತ್ಪನ್ನಗಳು ಮಾರುಕಟ್ಟೆಗೆ ಬಂದಿದ್ದು ಬೆಲೆ ಬರುವವರೆಗೆ ಕಾದು ಮಾರಾಟ ಮಾಡಲು ರೈತರು ಬಿಸಿಲಲ್ಲಿ ಪರದಾಟ ನಡೆಸಿದ್ದಾರೆ. ರಾಯಚೂರಿನ ಎಪಿಎಂಸಿಯಲ್ಲಿ ನೀರಿನ ಟ್ಯಾಂಕ್ ಗಳಿದ್ದರೂ ನೀರಿನ ಸರಬರಾಜು ವ್ಯವಸ್ಥೆ ಇಲ್ಲಾ.


ಪ್ರಾಂಗಣದ ಶೆಡ್ ಬಿಟ್ರೆ ಬಿಸಿಲಿನಿಂದ ತಪ್ಪಿಸಿಕೊಳ್ಳಲು ರೈತರು, ಹಮಾಲಿಗಳಿಗೆ ಬೇರೆ ವ್ಯವಸ್ಥೆಯಿಲ್ಲಾ.

ಹೀಗಾಗಿ ಬಿಸಿಲಿನಿಂದ ತಪ್ಪಿಸಿಕೊಳ್ಳಲು ರೈತರು ತಲೆಯ ಮೇಲೆ ಟವಲ್ ಹಾಕಿಕೊಂಡು ಓಡಾಡುತ್ತಿದ್ದಾರೆ.

ಇನ್ನೂ ರಾಯಚೂರಿನಲ್ಲಿ ಬೆಳಿಗ್ಗೆ 10 ಗಂಟೆಯಾದ್ರೆ ಸಾಕು ಸುಡು ಬಿಸಿಲಿನ ಅಬ್ಬರ ಜೋರಾಗಿರುತ್ತೆ. ಹೀಗಾಗಿ ಜನ ತೆಂಗಿನಕಾಯಿ ಎಳೆನೀರು, ಮಜ್ಜಿಗೆ, ಹಣ್ಣುಗಳು, ಮಣ್ಣಿನ ಮಡಿಕೆಗಳ ಮೊರೆ ಹೋಗುತ್ತಿದ್ದಾರೆ. ಈಗಾಗಲೇ ಸರ್ಕಾರಿ ಕಚೇರಿಗಳ ಸಮಯದಲ್ಲಿ ಬದಲಾವಣೆಯಾಗಿದ್ದು, ಬೆಳಿಗ್ಗೆ 8:30 ರಿಂದ ಮಧ್ಯಾಹ್ನ 1:30 ರ ವರೆಗೆ ಮಾತ್ರ ಕಚೇರಿಗಳಲ್ಲಿ ಸಿಬ್ಬಂದಿ ಕೆಲಸ ಮಾಡುತ್ತಿದ್ದಾರೆ.

ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಗುರುವಾರ ಸಂಸತ್ತಿನಲ್ಲಿ ಮೂರು ಮಸೂದೆಗಳಾದ ಸಂವಿಧಾನ (131 ನೇ ತಿದ್ದುಪಡಿ) ಮಸೂದೆ, 2026; ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, 2026; ಮತ್ತು ಡಿಲಿಮಿಟೇಶನ್ ಮಸೂದೆ, 2026 ಅನ್ನು ಮಂಡಿಸಿದ್ದರು. ಈ ಮಸೂದೆಗಳು ಲೋಕಸಭೆಯ ಗಾತ್ರವನ್ನು ಹೆಚ್ಚಿಸಲು, 2011ರ ಜನಗಣತಿಯ ಆಧಾರದ ಮೇಲೆ ಸೀಮಾ ನಿರ್ಣಯವನ್ನು ಸಕ್ರಿಯಗೊಳಿಸಲು ಮತ್ತು ಈ ಸೀಮಾ ನಿರ್ಣಯದ ಆಧಾರದ ಮೇಲೆ ಮಹಿಳೆಯರಿಗೆ ಮೀಸಲಾತಿಯನ್ನು ಜಾರಿಗೆ ತರುವ ಉದ್ದೇಶವನ್ನು ಹೊಂದಿತ್ತು. ಕೇಂದ್ರಾಡಳಿತ ಪ್ರದೇಶಗಳ ಕಾನೂನು ಮಸೂದೆಯು ಪುದುಚೇರಿ, ದೆಹಲಿ ಮತ್ತು ಜಮ್ಮು ಮತ್ತು ಕಾಶ್ಮೀರಕ್ಕೆ ಇದೇ ರೀತಿಯ ನಿಬಂಧನೆಗಳನ್ನು ಒದಗಿಸುವುದಾಗಿ ಹೇಳಲಾಗಿತ್ತು.

# ಮಹಿಳಾ ಮೀಸಲಾತಿ ಬಿಲ್‌ಗೆ ಸೋಲು



ನವದೆಹಲಿ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಮಸೂದೆಗಳು ಲೋಕಸಭೆಯಲ್ಲಿ ಸಂಜೆ ನಡೆದ ಬಹುಮತ ಪರೀಕ್ಷೆಯಲ್ಲಿ ವಿಫಲವಾಗಿದೆ. ಕ್ಷೇತ್ರ ಪುನರ್ ವಿಂಗಡಣೆ ಮತ್ತು ಮಹಿಳಾ ಮೀಸಲಾತಿ ಮಸೂದೆಗೆ ಸಾಂವಿಧಾನಿಕ ತಿದ್ದುಪಡಿಗೆ ಅಗತ್ಯವಾದ ಮೂರನೇ ಎರಡರಷ್ಟು ಬಹುಮತ ಸಿಗದ ಹಿನ್ನೆಲೆಯಲ್ಲಿ ಈ ಮಸೂದೆ ಲೋಕಸಭೆಯಲ್ಲಿ ಬಹುಮತ ಪರೀಕ್ಷೆಯಲ್ಲಿ ವಿಫಲವಾಗಿದೆ.

ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ ವಿಂಗಡಣೆ ಮಸೂದೆಗಳು ಸೇರಿದಂತೆ ಸಂಸತ್ತಿನಲ್ಲಿ ಗುರುವಾರ ಪರಿಚಯಿಸಲಾದ 3 ಪ್ರಮುಖ ಮಸೂದೆಗಳ ಮೇಲೆ ಲೋಕಸಭೆಯಲ್ಲಿ ಮತದಾನ ನಡೆದಿದೆ.

ಮಹಿಳಾ ಮೀಸಲಾತಿಯಂತಹ ಸಾಂವಿಧಾನಿಕ ತಿದ್ದುಪಡಿ ಮಸೂದೆಗಳನ್ನು ಲೋಕಸಭೆಯಲ್ಲಿ ಅಂಗೀಕರಿಸಲು ಮೂರನೇ ಎರಡರಷ್ಟು ವಿಶೇಷ ಬಹುಮತದ ಅಗತ್ಯವಿದೆ. 293 ಸಂಸದರನ್ನು ಹೊಂದಿರುವ ಎನ್‌ಡಿಎಗೆ ಸ್ವಂತವಾಗಿ ಅಂಗೀಕಾರ ಪಡೆಯಲು ಅಗತ್ಯವಾದ ಸಂಖ್ಯಾಬಲವಿರಲಿಲ್ಲ.

ಪ್ರಸ್ತುತ, ಲೋಕಸಭೆಯಲ್ಲಿ 540 ಸಂಸದರಿದ್ದಾರೆ. ಮೂರು ಸ್ಥಾನಗಳು ಖಾಲಿ ಇವೆ. ಈ ಮಸೂದೆಯು ಲೋಕಸಭೆಯಲ್ಲಿ ಅನುಮೋದನೆ ಪಡೆಯಲು 360 ಸಂಸದರು ಅದರ ಪರವಾಗಿ ಮತ ಚಲಾಯಿಸಬೇಕಾಗಿತ್ತು. ಆದರೆ, ಎನ್ ಡಿಎಗೆ ಅಗತ್ಯವಾದ ಸಂಖ್ಯಾಬಲವಿಲ್ಲದ ಕಾರಣದಿಂದ ಈ ಮಸೂದೆಯನ್ನು ಅಂಗೀಕರಿಸಲು ಕಾಂಗ್ರೆಸ್ ಅಥವಾ ಇತರ ಇಂಡಿಯ ಬ್ಲಾಕ್ ಪಕ್ಷಗಳ ಸಹಾಯದ ಅಗತ್ಯವಿತ್ತು. ಹೀಗಾಗಿಯೇ ಪ್ರಧಾನಿ ಮೋದಿ ಈ ಮಸೂದೆಗಳನ್ನು ಒಗ್ಗಟ್ಟಾಗಿ ಅಂಗೀಕರಿಸಲು ಮತ ಚಲಾಯಿಸಲು ಮನವಿ ಮಾಡಿದ್ದರು.

ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಗುರುವಾರ ಸಂಸತ್ತಿನಲ್ಲಿ ಮೂರು ಮಸೂದೆಗಳಾದ ಸಂವಿಧಾನ (131 ನೇ ತಿದ್ದುಪಡಿ) ಮಸೂದೆ, 2026; ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, 2026; ಮತ್ತು ಡಿಲಿಮಿಟೇಶನ್ ಮಸೂದೆ, 2026 ಅನ್ನು ಮಂಡಿಸಿದ್ದರು. ಈ ಮಸೂದೆಗಳು ಲೋಕಸಭೆಯ ಗಾತ್ರವನ್ನು ಹೆಚ್ಚಿಸಲು, 2011ರ ಜನಗಣತಿಯ ಆಧಾರದ ಮೇಲೆ ಸೀಮಾ ನಿರ್ಣಯವನ್ನು ಸಕ್ರಿಯಗೊಳಿಸಲು ಮತ್ತು ಈ ಸೀಮಾ ನಿರ್ಣಯದ ಆಧಾರದ ಮೇಲೆ ಮಹಿಳೆಯರಿಗೆ ಮೀಸಲಾತಿಯನ್ನು ಜಾರಿಗೆ ತರುವ ಉದ್ದೇಶವನ್ನು ಹೊಂದಿತ್ತು. ಕೇಂದ್ರಾಡಳಿತ ಪ್ರದೇಶಗಳ ಕಾನೂನು ಮಸೂದೆಯು ಪುದುಚೇರಿ, ದೆಹಲಿ ಮತ್ತು ಜಮ್ಮು ಮತ್ತು ಕಾಶ್ಮೀರಕ್ಕೆ ಇದೇ ರೀತಿಯ ನಿಬಂಧನೆಗಳನ್ನು ಒದಗಿಸುವುದಾಗಿ ಹೇಳಲಾಗಿತ್ತು.

ಮಹಿಳಾ ಮೀಸಲಾತಿ ಮಸೂದೆಗೆ ತಿದ್ದುಪಡಿಗಳನ್ನು ಚರ್ಚಿಸಲು ಲೋಕಸಭೆಯು 12 ಗಂಟೆಗಳ ಕಾಲ ಮ್ಯಾರಥಾನ್ ಅಧಿವೇಶನವನ್ನು ನಡೆಸಿತು.

ಇದರಲ್ಲಿ ಹೊಸ ಜನಗಣತಿ ನಡೆಸಿದ ನಂತರವೇ ಕಾನೂನನ್ನು ಜಾರಿಗೆ ತರುವ ಅವಶ್ಯಕತೆಯನ್ನು ತೆಗೆದುಹಾಕಲಾಯಿತು. ಅಂತಿಮ ವಿಭಾಗದ ಪ್ರಕಾರ, ಒಟ್ಟು 333 ಮತಗಳಲ್ಲಿ 251 ಸದಸ್ಯರು ಪರವಾಗಿ ಮತ್ತು 185 ವಿರುದ್ಧವಾಗಿ ಮತ ಚಲಾಯಿಸಿದರು. ಈ ಬಹುಮತದೊಂದಿಗೆ, ಸಂವಿಧಾನ (ನೂರ ಮೂವತ್ತೊಂದನೇ ತಿದ್ದುಪಡಿ) ಮಸೂದೆ, 2026 ಮತ್ತು ಕ್ಷೇತ್ರ ಮರು ವಿಂಗಡಣೆ ಮಸೂದೆ, 2026 ಸೇರಿದಂತೆ ಮೂರು ಮಸೂದೆಗಳನ್ನು ಲೋಕಸಭೆಯಲ್ಲಿ ಪರಿಚಯಿಸಲಾಯಿತು. ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಗುರುವಾರ ಸಂಸತ್ತಿನಲ್ಲಿ ಮೂರು ಮಸೂದೆಗಳಾದ ಸಂವಿಧಾನ (131 ನೇ ತಿದ್ದುಪಡಿ) ಮಸೂದೆ, 2026; ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, 2026; ಮತ್ತು ಡಿಲಿಮಿಟೇಶನ್ ಮಸೂದೆ, 2026 ಅನ್ನು ಮಂಡಿಸಿದ್ದರು. ಈ ಮಸೂದೆಗಳು ಲೋಕಸಭೆಯ ಗಾತ್ರವನ್ನು ಹೆಚ್ಚಿಸಲು, 2011ರ ಜನಗಣತಿಯ ಆಧಾರದ ಮೇಲೆ ಸೀಮಾ ನಿರ್ಣಯವನ್ನು ಸಕ್ರಿಯಗೊಳಿಸಲು ಮತ್ತು ಈ ಸೀಮಾ ನಿರ್ಣಯದ ಆಧಾರದ ಮೇಲೆ ಮಹಿಳೆಯರಿಗೆ ಮೀಸಲಾತಿಯನ್ನು ಜಾರಿಗೆ ತರುವ ಉದ್ದೇಶವನ್ನು ಹೊಂದಿತ್ತು. ಕೇಂದ್ರಾಡಳಿತ ಪ್ರದೇಶಗಳ ಕಾನೂನು ಮಸೂದೆಯು ಪುದುಚೇರಿ, ದೆಹಲಿ ಮತ್ತು ಜಮ್ಮು ಮತ್ತು ಕಾಶ್ಮೀರಕ್ಕೆ ಇದೇ ರೀತಿಯ ನಿಬಂಧನೆಗಳನ್ನು ಒದಗಿಸುವುದಾಗಿ ಹೇಳಲಾಗಿತ್ತು.

ಮಹಿಳಾ ಮೀಸಲಾತಿ ಮಸೂದೆಗೆ ತಿದ್ದುಪಡಿಗಳನ್ನು ಚರ್ಚಿಸಲು ಲೋಕಸಭೆಯು 12 ಗಂಟೆಗಳ ಕಾಲ ಮ್ಯಾರಥಾನ್ ಅಧಿವೇಶನವನ್ನು ನಡೆಸಿತು.

ಇದರಲ್ಲಿ ಹೊಸ ಜನಗಣತಿ ನಡೆಸಿದ ನಂತರವೇ ಕಾನೂನನ್ನು ಜಾರಿಗೆ ತರುವ ಅವಶ್ಯಕತೆಯನ್ನು ತೆಗೆದುಹಾಕಲಾಯಿತು. ಅಂತಿಮ ವಿಭಾಗದ ಪ್ರಕಾರ, ಒಟ್ಟು 333 ಮತಗಳಲ್ಲಿ 251 ಸದಸ್ಯರು ಪರವಾಗಿ ಮತ್ತು 185 ವಿರುದ್ಧವಾಗಿ ಮತ ಚಲಾಯಿಸಿದರು. ಈ ಬಹುಮತದೊಂದಿಗೆ, ಸಂವಿಧಾನ (ನೂರ ಮೂವತ್ತೊಂದನೇ ತಿದ್ದುಪಡಿ) ಮಸೂದೆ, 2026 ಮತ್ತು ಕ್ಷೇತ್ರ ಮರು ವಿಂಗಡಣೆ ಮಸೂದೆ, 2026 ಸೇರಿದಂತೆ ಮೂರು ಮಸೂದೆಗಳನ್ನು ಲೋಕಸಭೆಯಲ್ಲಿ ಪರಿಚಯಿಸಲಾಯಿತು.

ಈ ಕ್ಷೇತ್ರ ಮರು ವಿಂಗಡಣೆ ಮಸೂದೆಯನ್ನು ಅದರ ಪ್ರಸ್ತುತ ರೂಪದಲ್ಲಿ ಅಂಗೀಕರಿಸಿದರೆ ದಕ್ಷಿಣ ರಾಜ್ಯಗಳಿಗೆ ಅನ್ಯಾಯವಾಗುತ್ತದೆ ಎಂದು ಹಲವಾರು ಡಿಎಂಕೆ ಮತ್ತು ಕಾಂಗ್ರೆಸ್ ಸಂಸದರು ಆರೋಪಿಸಿದ್ದರು. ಉತ್ತರ ರಾಜ್ಯಗಳಿಗೆ ಹೋಲಿಸಿದರೆ ತೆಲಂಗಾಣ, ತಮಿಳುನಾಡು ಮತ್ತು ಕೇರಳದಂತಹ ರಾಜ್ಯಗಳು ಸೀಟುಗಳಲ್ಲಿ ಪ್ರಮಾಣಾನುಗುಣ ಹೆಚ್ಚಳವನ್ನು ಕಾಣದಿರಬಹುದು ಎಂದು ಮಾಣಿಕ್ಕಂ ಟ್ಯಾಗೋರ್ ಮತ್ತು ಎ ರಾಜಾ ಅವರಂತಹ ನಾಯಕರು ವಾದಿಸಿದ್ದರು. ಆ ರೀತಿಯ ಯಾವುದೇ ಅನ್ಯಾಯವಾಗುವುದಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಪ್ರಧಾನಿ ಮೋದಿ ಸ್ಪಷ್ಟನೆ ನೀಡಿದ್ದರು.

## ಪ್ರತಿಪಕ್ಷಗಳ ವಿರುದ್ಧ ಅಮಿತ್ ಶಾ ವಾಗ್ದಾಳಿ

ನವದೆಹಲಿ: ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ನೀಡುವ ಮಸೂದೆಯನ್ನು ತಿರಸ್ಕರಿಸುವುದು, ಅದನ್ನು ಸಂಭ್ರಮಿಸಿ, ವಿಜಯೋತ್ಸವ ಕೂಗುವುದು ನಿಜಕ್ಕೂ ಖಂಡನೀಯ ಮತ್ತು ಕಲ್ಪನೆಗೂ ಮೀರಿದ ಕೃತ್ಯ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿಪಕ್ಷಗಳ ವಿರುದ್ಧ ಕಿಡಿಕಾರಿದ್ದಾರೆ.

ಮಹಿಳಾ ಮೀಸಲಾತಿ ವಿಧೇಯಕಕ್ಕೆ ಲೋಕಸಭೆಯಲ್ಲಿ ಹಿನ್ನಡೆಯಾದ ಬೆನ್ನಲ್ಲೇ ಈ ಕುರಿತು ಟ್ವೀಟ್ ಮಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, 'ಮಹಿಳೆಯರಿಗೆ 33% ಮೀಸಲಾತಿ ನೀಡುವ ಮಸೂದೆಯನ್ನು ತಿರಸ್ಕರಿಸುವುದು, ಅದನ್ನು ಆಚರಿಸುವುದು ಮತ್ತು ಅದರ ಮೇಲೆ ವಿಜಯೋತ್ಸವ ಕೂಗುವುದು ನಿಜಕ್ಕೂ ಖಂಡನೀಯ' ಎಂದು ಹೇಳಿದ್ದಾರೆ.

"ಇಂದು, ಲೋಕಸಭೆಯಲ್ಲಿ ಬಹಳ ವಿಚಿತ್ರ ದೃಶ್ಯವೊಂದು ಬಯಲಾಯಿತು. ಕಾಂಗ್ರೆಸ್, ಟಿಎಂಸಿ, ಡಿಎಂಕೆ ಮತ್ತು ಸಮಾಜವಾದಿ ಪಕ್ಷಗಳು ನಾರಿ ಶಕ್ತಿ ವಂದನ ಆಡಳಿತಕ್ಕಾಗಿ ಅಗತ್ಯವಾದ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಲು ಅವಕಾಶ ನೀಡಲಿಲ್ಲ. ಮಹಿಳೆಯರಿಗೆ 33% ಮೀಸಲಾತಿ ನೀಡುವ ಮಸೂದೆಯನ್ನು ತಿರಸ್ಕರಿಸುವುದು, ಅದನ್ನು ಆಚರಿಸುವುದು ಮತ್ತು ಅದರ ಮೇಲೆ ವಿಜಯೋತ್ಸವ ಕೂಗುವುದು ನಿಜಕ್ಕೂ ಖಂಡನೀಯ ಮತ್ತು ಕಲ್ಪನೆಗೂ ಮೀರಿದ ಸಂಗತಿ ಎಂದಿದ್ದಾರೆ.

ಅಂತೆಯೇ 'ಈಗ, ದೇಶದ ಮಹಿಳೆಯರಿಗೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ 33% ಮೀಸಲಾತಿ ಸಿಗುವುದಿಲ್ಲ, ಅದು ಅವರ ಹಕ್ಕಾಗಿದೆ. ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಇದನ್ನು ಮೊದಲ ಬಾರಿಗೆ ಅಲ್ಲ, ಪದೇ ಪದೇ ಮಾಡಿವೆ. ಅವರ ಮನಸ್ಥಿತಿ ಮಹಿಳೆಯರ ಹಿತಾಸಕ್ತಿಗಾಗಿ ಅಥವಾ ದೇಶದ ಹಿತಾಸಕ್ತಿಗಾಗಿ ಅಲ್ಲ. ನಾರಿ ಶಕ್ತಿಗೆ ಈ ಅವಮಾನ ಇಲ್ಲಿಗೆ ನಿಲ್ಲುವುದಿಲ್ಲ ಎಂದು ನಾನು ಅವರಿಗೆ ಹೇಳಲು ಬಯಸುತ್ತೇನೆ ಎಂದರು.

ಅಲ್ಲದೆ ಅದು ಬಹಳ ದೂರ ಪ್ರಯಾಣಿಸುತ್ತದೆ. ವಿರೋಧ ಪಕ್ಷವು 2029 ರ ಲೋಕಸಭಾ ಚುನಾವಣೆಯಲ್ಲಿ ಮಾತ್ರವಲ್ಲದೆ, ಪ್ರತಿಯೊಂದು ಹಂತದಲ್ಲೂ, ಪ್ರತಿ ಚುನಾವಣೆಯಲ್ಲೂ ಮತ್ತು ಪ್ರತಿಯೊಂದು ಸ್ಥಳದಲ್ಲೂ 'ಮಹಿಳೆಯರ ಕೋಪ'ವನ್ನು ಎದುರಿಸಬೇಕಾಗುತ್ತದೆ." ಎಂದು ಅಮಿತ್ ಶಾ ಟ್ವೀಟ್ ಮಾಡಿದ್ದಾರೆ.

ಇನ್ನು ಕೇಂದ್ರ ಸರ್ಕಾರ ಇಂದು ಲೋಕಸಭೆಯಲ್ಲಿ ಮಂಡಿಸಿದ್ದ ಮಹಿಳಾ ಮೀಸಲಾತಿ ಮಸೂದೆಗೆ ಸೋಲಾಗಿದ್ದು, 2026ರ ಸಂವಿಧಾನ (131 ನೇ ತಿದ್ದುಪಡಿ) ಮಸೂದೆಯನ್ನು ಅಂಗೀಕರಿಸಲು ಕೇಂದ್ರಕ್ಕೆ ಮೂರನೇ ಎರಡರಷ್ಟು ಬಹುಮತದ ಅಗತ್ಯವಿತ್ತು. ಆದರೆ 489 ಮತಗಳಲ್ಲಿ 278

## ಅಪಘಾತ: 6 ಜನರು ಸಾವು



ಬೆಂಗಳೂರು/ಯಾದಗಿರಿ: ಮುಖಾಮುಖಿ ಡಿಕ್ಕಿಯಾಗಿ ಕಾರು ಮತ್ತು ಖಾಸಗಿ ಬಸ್ ಹೊತ್ತಿಯುರಿದಿದ್ದು, 6 ಮಂದಿ ಸಜೀವ ದಹನವಾಗಿರುವ ಘಟನೆ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ದೇವಾಪುರ ಬಳಿ ನಡೆದಿದೆ.

ಕಾರಿನಲ್ಲಿದ್ದ ಆರು ಜನ ಬೆಂಕಿಯಲ್ಲಿ ಸುಟ್ಟುಹೋಗಿದ್ದಾರೆ ಎನ್ನಲಾಗಿದೆ.

ಕಾರು ಯಾದಗಿರಿಯಿಂದ ರಾಯಚೂರು ಕಡೆ ಹೊರಟಿತ್ತು. ಇದೇ ವೇಳೆ ಖಾಸಗಿ ಬಸ್ ಬೆಂಗಳೂರಿನಿಂದ ಕಲಬುರಗಿ ಕಡೆ ಬರುತ್ತಿತ್ತು. ಈ ವೇಳೆ ಮುಖಾಮುಖಿ ಡಿಕ್ಕಿಯಾಗಿದ್ದು, ಕಾರು ಹಾಗೂ ಬಸ್ಸಿಗೆ ಬೆಂಕಿ ಹೊತ್ತಿಕೊಂಡಿದೆ. ಪರಿಣಾಮ ಕಾರು ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ದೌಡಾಯಿಸಿ ಬೆಂಕಿ ನಂದಿಸಲು ಹರಸಾಹಸಪಟ್ಟರು.

ಸದ್ಯ ಸ್ಥಳಕ್ಕೆ ಸುರಪುರ ಪೊಲೀಸರು ಪರಿಶೀಲನೆ ನಡೆಸಿದ್ದಾರೆ.

## ದೆಹಲಿಯಲ್ಲಿ ರಾಜತಾಂತ್ರಿಕರೊಂದಿಗಿನ ಸಂವಾದ ಯಶಸ್ವಿ




ನವದೆಹಲಿ: ತಂತ್ರಜ್ಞಾನದ ಜೊತೆಗೆ ವ್ಯಾಪಾರ, ನಾವೀನ್ಯತೆ, ಜನರ ಸಹಯೋಗ ಹಾಗೂ ವಿಶ್ವದೊಂದಿಗಿನ ಪಾಲುದಾರಿಕೆಯತ್ತ ಕರ್ನಾಟಕ ಆಸಕ್ತಿ ಹೊಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿವಿಧ ದೇಶಗಳ ರಾಯಭಾರಿಗಳು ಹಾಗೂ ರಾಜತಾಂತ್ರಿಕರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಕರ್ನಾಟಕವು ಜಾಗತಿಕ ನಾವೀನ್ಯತಾ ಕೇಂದ್ರ ಮತ್ತು ಹೂಡಿಕೆಯ ಆದ್ಯತಾ ತಾಣವಾಗಿರುವುದನ್ನು ಪ್ರಮುಖವಾಗಿ ಪ್ರಸ್ತಾಪಿಸಿದ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು, ಬೆಂಗಳೂರು ಕೇವಲ ಭೇಟಿ ನೀಡುವ ನಗರವಲ್ಲ.

ಕನಸುಗಳನ್ನು ಕಟ್ಟಿಕೊಳ್ಳುವ, ಭವಿಷ್ಯ ರೂಪಿಸುವ ನಗರವಾಗಿದೆ. ಎಲ್ಲರನ್ನೂ, ಎಲ್ಲದನ್ನೂ ಸ್ವಾಗತಿಸುವ ಅದರ ಮುಕ್ತ ಧೋರಣೆ, ಸದೃಢ ಪರಿಸರ ವ್ಯವಸ್ಥೆ ಮತ್ತು ಉತ್ತಮ ಜೀವನಮಟ್ಟದಿಂದ ಜಾಗತಿಕ ಪ್ರತಿಭೆ, ನಾವೀನ್ಯತೆ ಹಾಗೂ ಹೂಡಿಕೆಗಳನ್ನು ನಿರಂತರವಾಗಿ ಸೆಳೆಯುತ್ತಾ, ಅವಕಾಶಗಳ ನಗರವಾಗಿ ಮುಂದುವರಿಯುತ್ತಿದೆ ಎಂದರು.

ನಾವೀನ್ಯತೆ ನೇತೃತ್ವದಲ್ಲಿನ ಬೆಳವಣಿಗೆ ಮತ್ತು ಅಂತರರಾಷ್ಟ್ರೀಯ ಪಾಲುದಾರಿಕೆ ಕುರಿತು ಮಾತನಾಡಿದ ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು, "ಕರ್ನಾಟಕವು ಬಂಡವಾಳ ಹೂಡಿಕೆಗಷ್ಟೇ ಸೀಮಿತವಾದ ಸುಪ್ತ ಪಾಲುದಾರಿಕೆಯಲ್ಲಿ ಆಸಕ್ತಿ ಹೊಂದಿರದೆ, ದೀರ್ಘಾವಧಿಯ, ನಿರ್ದಿಷ್ಟ ಫಲಿತಾಂಶ ಆಧಾರಿತ ನಾವೀನ್ಯತೆಯ ಸಹಯೋಗಗಳನ್ನು ಕಾರ್ಯಗತಗೊಳಿಸಲು ನೆರವಾಗುವ ಪಾಲುದಾರರ ಹುಡುಕಾಟದಲ್ಲಿ ಇದೆ" ಎಂದರು.

ಕರ್ನಾಟಕವು ತಂತ್ರಜ್ಞಾನ ಕೇಂದ್ರದಿಂದ ಜಾಗತಿಕ ನಾವೀನ್ಯತೆಯ ಪ್ರಮುಖ ಪಾಲುದಾರ ತಾಣವಾಗಿ ಅಭಿವೃದ್ಧಿಗೊಂಡಿದ್ದು, ನೀತಿ–ನಿರೂಪವಣೆಯ ನೆರವು, ನವೋದ್ಯಮಗಳನ್ನು ಜಾಗತಿಕ ಮಟ್ಟಕ್ಕೆ ಬೆಳೆಸಲು ಅಗತ್ಯ ಬೆಂಬಲ, ಸಂಶೋಧನಾ ಸಹಯೋಗ ಮತ್ತು ಮಾರುಕಟ್ಟೆ ಲಭ್ಯತೆ ಅವಕಾಶಗಳನ್ನು ಒದಗಿಸುವ ಮೂಲಕ, ಹೂಡಿಕೆದಾರರು ಮತ್ತು ಉದ್ಯಮಿಗಳಿಗೆ ಆಕರ್ಷಕ ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ವಿವಿಧ ದೇಶಗಳ ರಾಜತಾಂತ್ರಿಕರು ಬಣ್ಣಿಸಿದ್ದಾರೆ.

ಇದು ತಂತ್ರಜ್ಞಾನ, ನಾವೀನ್ಯತೆ ಮತ್ತು ಜಾಗತಿಕ ಸಹಭಾಗಿತ್ವಗಳ ಮೇಲೆ ಕೇಂದ್ರೀಕೃತವಾಗಿದ್ದ, ರಾಜ್ಯ ಸರ್ಕಾರದ ನೇತೃತ್ವದಲ್ಲಿ ನಡೆದ ಭಾರತದ ಅತ್ಯಂತ ಪ್ರಮುಖ ರಾಜತಾಂತ್ರಿಕ ಕಾರ್ಯಕ್ರಮಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಂವಾದ ಕಾರ್ಯಕ್ರಮದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂ.ಬಿ ಪಾಟೀಲ ಮತ್ತು ಎಲೆಕ್ಟ್ರಾನಿಕ್ಸ್, ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು ಮತ್ತು ಜಾಗತಿಕ ಉದ್ಯಮ ದಿಗ್ಗಜರು ಭಾಗವಹಿಸಿದ್ದರು.

45ಕ್ಕೂ ಹೆಚ್ಚು ರಾಯಭಾರಿಗಳು ಮತ್ತು ಹೈಕಮಿಷನರ್‌ಗಳು ಸೇರಿದಂತೆ 80ಕ್ಕೂ ಹೆಚ್ಚು ದೇಶಗಳ ಹಿರಿಯ ರಾಜತಾಂತ್ರಿಕ ಪ್ರತಿನಿಧಿಗಳೂ ಕಾರ್ಯಕ್ರಮದಲ್ಲಿ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.


ಜಾಗತಿಕ ಸಂಸ್ಥೆಗಳು ಮತ್ತು ಕೈಗಾರಿಕೆ ಮತ್ತು ಸರ್ಕಾರದ ಹಿರಿಯ ಪಾಲುದಾರರನ್ನು ಒಳಗೊಂಡ 140ಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು.

ಅಂತರರಾಷ್ಟ್ರೀಯ ಪ್ರಮುಖ ವ್ಯಾಪಾರ ಮತ್ತು ಹೂಡಿಕೆ ಸಂಸ್ಥೆಗಳ ಭಾಗವಹಿಸುವಿಕೆಯೂ ಗಮನ ಸೆಳೆಯಿತು. ಇದು ಸರ್ಕಾರದಿಂದ ಸರ್ಕಾರಕ್ಕೆ ಮತ್ತು ವಾಣಿಜ್ಯ ವಹಿವಾಟಿನಿಂದ ಸರ್ಕಾರದ ಜೊತೆಗಿನ ಸಹಯೋಗವನ್ನು ಕಾರ್ಯಗತಗೊಳಿಸುವ ಪ್ರಕ್ರಿಯೆಯನ್ನು ಮತ್ತಷ್ಟು ಬಲಪಡಿಸುವತ್ತ ಮಹತ್ವದ ಹೆಜ್ಜೆಯಾಗಿದೆ.

ಸ್ವಿಟ್ಜರ್ಲೆಂಡ್, ಸೌದಿ ಅರೇಬಿಯಾ, ಡೆನ್ಮಾರ್ಕ್, ಫ್ರಾನ್ಸ್, ಈಜಿಪ್ಟ್, ಮಲೇಷ್ಯಾ, ಜಪಾನ್, ಜರ್ಮನಿ ಹಾಗೂ ಭೂತಾನ್ ಸೇರಿದಂತೆ ಪ್ರಮುಖ ಪಾಲುದಾರ ರಾಷ್ಟ್ರಗಳ ರಾಜತಾಂತ್ರಿಕ ಪ್ರತಿನಿಧಿಗಳು ಸಂವಾದದಲ್ಲಿ ಭಾಗವಹಿಸಿದ್ದರು. ಹಲವಾರು ರಾಯಭಾರಿಗಳು ಮತ್ತು ಪ್ರತಿನಿಧಿಗಳು ಮಾತನಾಡಿ ಕರ್ನಾಟಕದ ಜೊತೆಗಿನ ವಿವಿಧ ದೇಶಗಳ ಗಾಢವಾದ ಮತ್ತು ಬೆಳೆಯುತ್ತಿರುವ ಪಾಲುದಾರಿಕೆಯ ಮೇಲೆ ಬೆಳಕು ಚೆಲ್ಲಿದರು.

ಜಾಗತಿಕ ನಾವೀನ್ಯತಾ ಮೈತ್ರಿಕೂಟ (ಜಿಐಎ) –ದಂತಹ ರಚನಾತ್ಮಕ ವೇದಿಕೆಗಳ ಮೂಲಕ ಭಾರತದ ನಾವೀನ್ಯತೆ ವ್ಯವಸ್ಥೆಯ ಜೊತೆ ಗಾಢ ಸಂಬಂಧವನ್ನು ಕಾರ್ಯಗತಗೊಳಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳನ್ನು ಶ್ಲಾಘಿಸಿದರು.

# ಸರ್ಕಾರದ ಚೆಲ್ಲಾಟ: ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಕುಸಿತದ ಭೀತಿ..!




ಬೆಂಗಳೂರು: ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಶಿಕ್ಷಣ ಇಲಾಖೆಯ ಗೊಂದಲದ ನಿರ್ಧಾರಗಳಿಗೆ ಹೈಕೋರ್ಟ್ ಬ್ರೇಕ್ ಹಾಕಿದೆ. ಹಿಂದಿ ಸೇರಿದಂತೆ ತೃತೀಯ ಭಾಷಾ ವಿಷಯಗಳಿಗೆ ಗ್ರೇಡ್ ನೀಡುವ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ, ವಿದ್ಯಾರ್ಥಿಗಳಿಗೆ ಅಂಕಗಳನ್ನೇ ನೀಡುವಂತೆ ರಾಜ್ಯ ಸರ್ಕಾರಕ್ಕೆ ಸ್ಪಷ್ಟ ನಿರ್ದೇಶನ ನೀಡಿದೆ. ಆದರೆ, ಇದುವೇ ಈಗ ವಿದ್ಯಾರ್ಥಿಗಳ ಸಂಕಷ್ಟಕ್ಕೆ ಕಾರಣವಾಗಿದೆ. ಶಿಕ್ಷಣ ಇಲಾಖೆ ಪರೀಕ್ಷೆಗೆ ಕೆಲವೇ ದಿನಗಳಿರುವಾಗ ಇಂಥ ಗೊಂದಲದ ನಿರ್ಧಾರ ಪ್ರಕಟಿಸಿದ್ದರಿಂದ ವಿದ್ಯಾರ್ಥಿಗಳು ಆ ಪರೀಕ್ಷೆಯನ್ನು ಹಗುರವಾಗಿ ಪರಿಗಣಿಸಿದ್ದಾರೆ. ಈಗ ಕೋರ್ಟ್ ಅಂಕ ನೀಡಲು ಆದೇಶಿಸಿದ್ದರಿಂದ ಫಲಿತಾಂಶದಲ್ಲಿ ಕುಸಿತ ಆಗಬಹುದು ಎಂದು ಪೋಷಕರು ಆತಂಕ ವ್ಯಕ್ತಪಡಿಸಿದ್ದಾರೆ.

ಪರೀಕ್ಷೆ ಆರಂಭವಾಗುವ ಕೇವಲ ಎರಡು ದಿನಗಳ ಮೊದಲು ಶಿಕ್ಷಣ ಸಚಿವರು ಪತ್ರಿಕಾಗೋಷ್ಠಿ ನಡೆಸಿ, ತೃತೀಯ ಭಾಷೆಗೆ ಅಂಕಗಳ ಬದಲಾಗಿ ಗ್ರೇಡ್ ವ್ಯವಸ್ಥೆ ಜಾರಿಗೆ ತರುವುದಾಗಿ ಘೋಷಿಸಿದ್ದರು.

ಸರ್ಕಾರದ ಈ ಆಕಸ್ಮಿಕ ನಿರ್ಧಾರ ದಿಂದಾಗಿ ವಿದ್ಯಾರ್ಥಿಗಳು ಪರೀಕ್ಷೆಯನ್ನು ಗಂಭೀರವಾಗಿ ಪರಿಗಣಿಸಿರಲಿಲ್ಲ.

'ಗ್ರೇಡ್ ತಾನೇ ಬರುವುದು' ಎಂಬ ಉದಾಸೀನತೆಯಿಂದ ಅನೇಕರು ಪರೀಕ್ಷೆ ಬರೆದಿದ್ದರು.

ಆದರೆ ಈಗ ಕೋರ್ಟ್ ಅಂಕ ನೀಡುವಂತೆ ಆದೇಶಿಸಿರುವುದು ಪೋಷಕರು ಮತ್ತು ವಿದ್ಯಾರ್ಥಿಗಳಲ್ಲಿ ಫಲಿತಾಂಶ ಕುಸಿತದ ಆತಂಕ ಮೂಡಿಸಿದೆ.

ಶಿಕ್ಷಣ ಇಲಾಖೆಯ ಈ ಚೆಲ್ಲಾಟದ ವಿರುದ್ಧ ಖಾಸಗಿ ಶಾಲೆಗಳ ಒಕ್ಕೂಟ ಮತ್ತು ಪೋಷಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಶೈಕ್ಷಣಿಕ ವರ್ಷ ಮುಗಿಯುವ ಹಂತದಲ್ಲಿ ಇಂತಹ ನಿಯಮಗಳನ್ನು ಜಾರಿಗೆ ತರುವುದು ಎಷ್ಟು ಸರಿ? ಎಂದು ಪ್ರಶ್ನಿಸಿದ್ದಾರೆ. ರಾಜ್ಯ ಪಠ್ಯಕ್ರಮದ ವಿದ್ಯಾರ್ಥಿಗಳನ್ನು ಪದೇ ಪದೇ ಗೊಂದಲಕ್ಕೆ ದೂಡುತ್ತಿರುವುದಕ್ಕೆ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ಸರ್ಕಾರವು ವಿದ್ಯಾರ್ಥಿಗಳ ಮೇಲಿನ ಪರೀಕ್ಷಾ ಒತ್ತಡ ಕಡಿಮೆ ಮಾಡುವ ಉದ್ದೇಶದಿಂದ ಎಸ್‌ಎಸ್‌ಎಲ್‌ಸಿ ಹಿಂದಿ ಹಾಗೂ ಇತರೆ ತೃತೀಯ ಭಾಷಾ ವಿಷಯಗಳಿಗೆ ಅಂಕಗಳ ಬದಲಾಗಿ ಗ್ರೇಡ್ ನೀಡುವ ಬಗ್ಗೆ ಘೋಷಣೆ ಮಾಡಿತ್ತು. ಅಂತಿಮ ಕ್ಷಣದಲ್ಲಿ ತಂದ ಈ ಬದಲಾವಣೆ ಬಗ್ಗೆ ಆಕ್ಷೇಪ ವ್ಯಕ್ತವಾಗಿತ್ತು.

ಪರೀಕ್ಷೆಯ ಮಧ್ಯದಲ್ಲಿ ಅಥವಾ ಫಲಿತಾಂಶದ ಹಂತದಲ್ಲಿ ಇಂತಹ ಪ್ರಮುಖ ನೀತಿ ಬದಲಾವಣೆಗಳನ್ನು ಮಾಡುವುದು ಕಾನೂನುಬಾಹಿರ ಎಂದು ಕೆಲವರು ನ್ಯಾಯಾಲಯದ ಮೊರೆ ಹೋಗಿದ್ದರು. ನ್ಯಾಯಾಲಯವು ಈ ವಾದವನ್ನು ಎತ್ತಿಹಿಡಿದಿದ್ದು, ಶೈಕ್ಷಣಿಕ ವರ್ಷದ ಆರಂಭದಲ್ಲೇ ಇಂತಹ ಬದಲಾವಣೆಗಳನ್ನು ತಿಳಿಸಬೇಕೆಂದು ಸರ್ಕಾರಕ್ಕೆ ಕಿವಿಮಾತು ಹೇಳಿದೆ.

18/04/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಸೇವಾವಧಿ ವಿಸ್ತರಣೆ

ಬೆಂಗಳೂರು

ರಾಜ್ಯ ಪೊಲೀಸ್ ಮಹಾನಿರ್ದೇಶಕ 1993ರ ಬ್ಯಾಚ್ ಐಪಿಎಸ್ ಅಧಿಕಾರಿ ಡಾ.ಎಂ.ಎ.ಸಲೀಂ ಅವರ ಸೇವಾವಧಿಯನ್ನು ರಾಜ್ಯ ಸರ್ಕಾರ ವಿಸ್ತರಿಸಿದೆ.

ಈ ವರ್ಷದ ಜೂನ್‌ನಲ್ಲಿ ಸಲೀಂ ಅವರು ನಿವೃತ್ತರಾಗಬೇಕಿತ್ತು. ಆದರೆ ರಾಜ್ಯ ಸರ್ಕಾರ 2027ರ ಅಕ್ಟೋಬರ್ 29ರವರೆಗೆ ಸೇವಾ ಅವಧಿ ವಿಸ್ತರಣೆ ಮಾಡಿದೆ. 2025ರ ಮೇನಲ್ಲಿ ಪ್ರಭಾರ ಡಿಜಿ ಐಜಿಪಿಯಾಗಿ ನೇಮಕವಾಗಿದ್ದ ಸಲೀಂ ಅವರನ್ನು 2025ರ ಆಗಸ್ಟ್‌ನಲ್ಲಿ ಪೂರ್ಣಾವಧಿಗೆ ನೇಮಕ ಮಾಡಲಾಗಿತ್ತು. ರಾಜ್ಯದ 43ನೇ ಡಿಜಿ–ಐಜಿಪಿಯಾಗಿ ಕಾರ್ಯನಿರ್ವಹಿ ಸುತ್ತಿದ್ದಾರೆ.

## ಚಿತ್ರಕಲಾ ಪರಿಷತ್‌ನಲ್ಲಿ ಬೆಂಗಳೂರು ಉತ್ಸವ ಕರಕುಶಲ ವಸ್ತುಗಳ ಪ್ರದರ್ಶನ

ಬೆಂಗಳೂರು

ಭಾರತೀಯ ಸಂಪ್ರದಾಯಿಕ ಮತ್ತು ಆಧುನಿಕ ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಚಿತ್ರಕಲಾ ಪರಿಷತ್‌ನಲ್ಲಿ ಶುಕ್ರವಾರದಿಂದ ಆರಂಭವಾಗಿದೆ.



ಗ್ರಾಂಡ್ ಫಿಲಾ ಮಾರ್ಕೆಟ್ ಮತ್ತು ಇಂಡಿಯನ್ ಆರ್ಟಿಸನ್ಸ್ ಬಜಾರ್ ಸಹಯೋಗದಲ್ಲಿ ಆಯೋಜಿಸಿರುವ ಈ ವಸ್ತು ಪ್ರದರ್ಶನದಲ್ಲಿ ಒಂದೇ ಸೂರಿನಡಿ ಗೃಹ ಅಲಂಕಾರ ವಸ್ತುಗಳು, ವಿವಿಧ ರಾಜ್ಯಗಳ ಸಾಂಪ್ರದಾಯಿಕ ಶೈಲಿಯ ಉಡುಗೆ – ತೊಡುಗೆಗಳು ದೊರೆಯಲಿವೆ. ಈ ಪ್ರದರ್ಶನಕ್ಕೆ ಖ್ಯಾತ ನಟಿ ಮತ್ತು ರೂಪದರ್ಶಿ ವೈಭವಿ ದ್ವಿವೇದಿ ಚಾಲನೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ವೈಭವಿ ದ್ವಿವೇದಿ, "ರಾಜ್ಯದಲ್ಲಿ ಹೆಚ್ಚು ಜನಪ್ರಿಯವಾಗಿರುವ ವಸ್ತುಗಳನ್ನು ಖರೀದಿಸಿ ತಮ್ಮ ಮನೆಯನ್ನು ಮತ್ತಷ್ಟು ಅಲಂಕಾರಿಕವಾಗಿಸುವ ಕನಸು ಎಲ್ಲರಲ್ಲೂ ಇರುತ್ತದೆ. ಇದಕ್ಕಾಗಿ ನೀವು ರಾಜ್ಯದ ವಿವಿಧ ಮೂಲಗಳಿಗೆ ಹೋಗುವ ಅವಶ್ಯಕತೆ ಇಲ್ಲ. ಏಕೆಂದರೆ, ಎಲ್ಲವೂ ಇಲ್ಲೇ ಸಿಗಲಿದೆ. ಇದಕ್ಕಾಗಿಯೇ ಬೆಂಗಳೂರು ಉತ್ಸವ ಆಯೋಜಿಸಲಾಗಿದೆ. ಕುಶಲಕರ್ಮಿಗಳಿಂದ ನೇರವಾಗಿ ಗ್ರಾಹಕರನ್ನು ತಲುಪುವುದರಿಂದ ವಸ್ತುಗಳ ಬೆಲೆಯೂ ಕಡಿಮೆ ಇದೆ. ಬಳೆಗಳು, ಫ್ಯಾನ್ಸಿ ಆಭರಣಗಳು, ಪಾದರಕ್ಷೆ, ದಿನ ಬಳಕೆ ವಸ್ತುಗಳು, ಸಿಹಿತಿನಿಸುಗಳು, ಮಕ್ಕಳ ಆಟಿಕೆಗಳು, ಸುಗಂಧ ದ್ರವ್ಯಗಳು ಸೇರಿದಂತೆ ನೂರಾರು ಉತ್ಪನ್ನಗಳು ಈ ಪ್ರದರ್ಶನದಲ್ಲಿ ದೊರೆಯುತ್ತಿವೆ" ಎಂದರು.

ಗೃಹ ಅಲಂಕಾರಕ್ಕೆ ಬೇಕಾದಂತಹ ವಿವಿಧ ಬಗೆಯ ವಿದ್ಯುತ್ ದೀಪ, ಕರ್ಟನ್, ಪೀಠೋಪಕರಣ, ಪುರಾತನ ವಿಗ್ರಹಗಳು, ದೇವರ ಮೂರ್ತಿಗಳು ಹೀಗೆ ಹತ್ತು ಹಲವು ವಸ್ತುಗಳು ಸಿಕ್ಕರೆ, ಇನ್ನೂ ಮನಮುಟ್ಟುವ ರಾಜಸ್ಥಾನಿ ಶೈಲಿಯ ಉಡುಗೆಗಳು, ಕಿವಿಯೋಲೆ, ಕರಕುಶಲ ವಸ್ತುಗಳು ಜನರ ಮನ ಸೆಳೆಯಲಿವೆ. ಈ ಪ್ರದರ್ಶನವು ಮೇ 3ರವರೆಗೆ ನಡೆಯಲಿದೆ.

## ಬ್ರಾಂಡ್ ಅಂಬಾಸಿಡರ್ ಆಗಿ ತೃಪ್ತಿ ಡಿಮ್ರಿ ನೇಮಕ

ಬೆಂಗಳೂರು

ಪ್ರಮುಖ ಜಾಗತಿಕ ಫ್ಯಾಷನ್ ಮತ್ತು ಲೈಫ್‌ಸ್ಟೈಲ್ ರಿಟೇಲ್ ಸಂಸ್ಥೆಯಾಗಿರುವ ಅಪ್ಪಾರಲ್ ಗ್ರೂಪ್, ವಿಕ್ಟೋರಿಯಾಸ್ ಸೀಕ್ರೆಟ್ ಇಂಡಿಯಾದ ಮೊದಲ ಬ್ರಾಂಡ್ ಅಂಬಾಸಿಡರ್ ಆಗಿ ನಟಿ ತೃಪ್ತಿ ಡಿಮ್ರಿ ಅವರನ್ನು ನೇಮಿಸಿರುವುದಾಗಿ ಘೋಷಿಸಿದೆ.



ಇದೇ ಸಂದರ್ಭದಲ್ಲಿ, ವಿಕ್ಟೋರಿಯಾಸ್ ಸೀಕ್ರೆಟ್ ತನ್ನ "ಸಮ್ಮರ್ ಸಿಗ್ನೇಚರ್" ಕ್ಯಾಂಪೇನ್ ಅನ್ನು ಭಾರತದಲ್ಲಿ ಬಿಡುಗಡೆ ಮಾಡಿದ್ದು, ವಿಶ್ವಾಸವನ್ನು ಉತ್ತೇಜಿಸುವುದು, ಸಂತೋಷವನ್ನು ಹಂಚುವುದು ಮತ್ತು ಆಕರ್ಷಕತೆಯನ್ನು ಆಚರಿಸುವುದು ಇದರ ಉದ್ದೇಶವಾಗಿದೆ. ಈ ಕ್ಯಾಂಪೇನ್‌ನಲ್ಲಿ ತೃಪ್ತಿ ಡಿಮ್ರಿ ಪ್ರಮುಖ ಪಾತ್ರವಹಿಸಿದ್ದಾರೆ.

ಹೊಸ "ಸಮ್ಮರ್ ಸಿಗ್ನೇಚರ್ ಕಲೆಕ್ಷನ್" ಆರಾಮದಾಯಕ ಮತ್ತು ದಿನನಿತ್ಯ ಬಳಕೆಗೆ ಸೂಕ್ತವಾದ ಒಳಉಡುಪುಗಳು ಹಾಗೂ ಸ್ಲೀಪ್‌ವೇರ್‌ಗಳನ್ನು ಒಳಗೊಂಡಿದೆ. ಬ್ರಾಂಡ್‌ನ ಐಕಾನಿಕ್ ಸ್ಟ್ರೈಪ್ ಡಿಸೈನ್ ಈ ಸಂಗ್ರಹದ ವಿಶೇಷತೆ ಆಗಿದೆ. ತೃಪ್ತಿ ಅವರ ಆತ್ಮವಿಶ್ವಾಸದಿಂದ ಪ್ರೇರಿತವಾದ ಈ ಕ್ಯಾಂಪೇನ್, ಸ್ಟೈಲ್ ಮತ್ತು ಆರಾಮವನ್ನು ಒಟ್ಟುಗೂಡಿಸುವ ಪ್ರಯತ್ನವಾಗಿದೆ.

# ಯುವ ಪತ್ರಕರ್ತರು ತನಿಖಾ ವರದಿಗೆ ಆದ್ಯತೆ ನೀಡಬೇಕು: ಮಹೇಶ್‌ಹೆಗಡೆ

ಬೆಂಗಳೂರು

ಪತ್ರಿಕೋದ್ಯಮ ಎನ್ನುವುದು ಅನುಮಾನಕ್ಕೆಡೆ ಮಾಡಿಕೊಡುತ್ತಿದೆ. ಇದರಿಂದ ಆಚೆ ಬರಲು ಯುವ ಪತ್ರಕರ್ತರು ಮತ್ತು ಸಕ್ರಿಯವಾಗಿರುವ ಎಲ್ಲ ವರದಿಗಾರರು ತನಿಖಾ ವರದಿಗಳನ್ನು ಮಾಡುವ ಮೂಲಕ ಸಮಾಜದಲ್ಲಿ ಸ್ವಾಸ್ಥ್ಯ ಕಾಪಾಡುವುದರೊಂದಿಗೆ ಘನತೆ ಮತ್ತು ಗಾಂಭೀರ್ಯವನ್ನು ಉಳಿಸಿಕೊಳ್ಳಬೇಕಾಗಿದೆ ಎಂದು ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಸಂಯುಕ್ತ ಕರ್ನಾಟಕ ಪತ್ರಿಕೆಯ ವರಿದಿಗಾರ ಮಹೇಶ್ ಹೆಗಡೆ ಅವರು ತಿಳಿಸಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ)ವು ಇತ್ತೀಚೆಗೆ ಬೀದರಿನಲ್ಲಿ ಹಮ್ಮಿಕೊಂಡಿದ್ದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಮಹೇಶ್ ಹೆಗಡೆ ಅವರಿಗೆ ಪತ್ರಿಕೋದ್ಯಮದಲ್ಲಿ ಸಲ್ಲಿಸಿದ ಅಮೂಲಾಗ್ರ ಸೇವೆ ಗುರುತಿಸಿ ನೀಡಿದ ಕೆಯುಡಬ್ಲೂಜೆ ಪ್ರಶಸ್ತಿ ಪಡೆದ ಬಳಿಕ ಕೋಲಾರವಾಣಿ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಮಾಧ್ಯಮ ಕ್ಷೇತ್ರದ ಸಮಗ್ರ ವಿಭಾಗದಲ್ಲಿ ನನ್ನನ್ನು ಗುರುತಿಸಿ ಸಂಘವು "ಅಭಿಮಾನಿ ಪ್ರಕಾಶನ ಪ್ರಶಸ್ತಿ" ನೀಡಿದ್ದು ಇನ್ನಷ್ಟು ಜವಾಬ್ದಾರಿ ಹೆಚ್ಚಿಸಿದೆ ಎಂದು ಪ್ರತಿಕ್ರಿಯೆ ನೀಡಿದ್ದಾರೆ.

ಅಂದಹಾಗೆ ಮಹೇಶ್ ಹೆಗಡೆ ಅವರು, ಸಾಗರ ತಾಲ್ಲೂಕಿನಲ್ಲಿ ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಭೂಕಬಳಿಕೆ ಕುರಿತು ಸಂಯುಕ್ತ



ಕರ್ನಾಟಕದಲ್ಲಿ ಸರಣಿ ವರದಿ ಮಾಡಿದ್ದರು. ಅದರ ಪರಿಣಾಮ ಲೋಕಾಯುಕ್ತ ತನಿಖೆ ಕೂಡ ನಡೆದು ಸರ್ಕಾರದ ಗಮನ ಸೆಳೆದಿತ್ತು. ಈ ವರದಿಯನ್ನು ಅತ್ಯುತ್ತಮ ವರದಿಯನ್ನಾಗಿ ಪರಿಗಣಿಸಿ 2024 ನೇ ಸಾಲಿನ "ಅಭಿಮಾನಿ ಪ್ರಕಾಶನ ಪ್ರಶಸ್ತಿಗೆ" ಅಯ್ಕೆ ಮಾಡಲಾಗಿದೆ.

ಅವರೇ ಹೇಳುವಂತೆ, ಪತ್ರಿಕೋದ್ಯಮದಲ್ಲಿ ಪ್ರಾಮಾಣಿಕತೆ, ನೈಜತೆ ಇದ್ದರೆ ಮನ್ನಣೆ ಸಿಗುತ್ತದೆ. ಪ್ರಾಮಾಣಿಕ ಪತ್ರಿಕೋದ್ಯಮ ಎನ್ನುವುದು ಸುಲಭವಲ್ಲ. ಸಾಕಷ್ಟು ಸಮಸ್ಯೆಗಳು, ಸವಾಲುಗಳು ಎದುರಾಗುತ್ತವೆ. ತೊಂದರೆಗಳನ್ನೂ ಅನುಭವಿಸಬೇಕಾಗುತ್ತದೆ.

> ನನ್ನ ಪತ್ರಿಕೋದ್ಯಮದ ಸೇವೆಯಲ್ಲಿ ಅನೇಕ ಪ್ರಾಮಾಣಿಕ ಲೇಖನಗಳನ್ನು ಬರೆದಿರುವೆ. ನೂರಾರು ತನಿಖಾ ವರದಿಗಳು ಪ್ರಕಟಗೊಂಡಿವೆ. ಈ ಕಾರಣದಿಂದ ನನ್ನ ಮೇಲೆ ಹಲ್ಲೆ ಪ್ರಕರಣಗಳು, ಜೀವ ಬೆದರಿಕೆಗಳೂ ನಡೆದಿವೆ. ಸಮಾಜಮುಖಿಯಾಗಿ ಬರೆದ ತನಿಖಾ ವರದಿಗಳ ಹಿನ್ನೆಲೆಯಲ್ಲಿ ಇಂದಿಗೂ ನಾನು ನ್ಯಾಯಾಲಯಕ್ಕೆ ಅಲೆದಾಡುತ್ತಿರುವೆ. ಜೀವಭಯ ಇದ್ದರೂ ವರದಿಗಾರಿಕೆ ವಿಷಯದಲ್ಲಿ ಎಂದಿಗೂ ಹಿಂದೆ ಸರಿಯಲಾರೆ. ಜನರ ಪ್ರೀತಿ, ವಿಶ್ವಾಸಗಳು ಇರುವವರೆಗೂ ತನಿಖಾ ವರದಿಗಳನ್ನು ಬಿಡುವುದಿಲ್ಲ. ಇನ್ನೂ ಹೆಚ್ಚಿನ ರೀತಿಯಲ್ಲಿಯೇ ತನಿಖಾ ವರದಿಗಳನ್ನು ಸಿದ್ಧಪಡಿಸಲು ಮುಂದಾಗಿದ್ದೇನೆ.
>
> **-ಮಹೇಶ್ ಹೆಗಡೆ,** ವರದಿಗಾರರು
> ಸಂಯುಕ್ತ ಕರ್ನಾಟಕ, ಸಾಗರ ತಾಲೂಕು

ಇಂತಹ ತನಿಖಾ ವರದಿಗಳನ್ನು ಮಾಡಿದರೆ ಎಲ್ಲೋ ಒಂದು ಕಡೆ ಜನರು ಬೆಂಬಲಿಸುತ್ತಾರೆ. ಪತ್ರಿಕೆಗಳು ಮತ್ತು ವರದಿಗಾರರನ್ನು ಇಷ್ಟ ಪಡುತ್ತಾರೆ. ಇತ್ತೀಚಿನ ಚಿನಗಳಲ್ಲಿ ಪ್ರಾಮಾಣಿಕ ಪತ್ರಿಕೋದ್ಯಮ ಮತ್ತು ನೈಜ ಪತ್ರಿಕೋದ್ಯಮ ಕ್ಷೀಣಿಸುತ್ತಿರುವ ಭಾವನೆ ಜನಮಾನಸದಲ್ಲಿ ಮೂಡುತ್ತಿದೆ. ಎಲ್ಲವನ್ನೂ ಮೊಬೈಲ್ ಆಧರಿಸಿ ಸುದ್ದಿ ಮಾಡುವ ಪ್ರಮೇಯ ಬಂದಿದೆ. ಗೂಗಲ್, ವಾಟ್ಸಪ್ ಗಳಲ್ಲಿನ ಮಾಹಿತಿಗಳನ್ನು ಆಧರಿಸಿ ಸುದ್ದಿಗಳನ್ನು ಮಾಡುವ ಹಂತಕ್ಕೆ ಪತ್ರಿಕೋದ್ಯಮ ಬಂದು ನಿಂತಿದೆ. ಇದರ ಬದಲಾಗಿ ಭೂಮಿಕೆಗೆ ಇಳಿದು ಪ್ರತ್ಯಕ್ಷ ಹಾಗೂ ಸ್ವತಂತ್ರವಾಗಿ ಸಂಶೋಧನೆ ನಡೆಸಿ, ಮಾಹಿತಿ ಸಂಗ್ರಹಿಸಿ ತನಿಖಾ ವರದಿಗಳನ್ನು ಮಾಡಿದಾಗ ಮಾತ್ರ ಪತ್ರಿಕೋದ್ಯಮಕ್ಕೆ ಶಕ್ತಿ ಬರುತ್ತದೆ ಎಂದು ಮಹೇಶ್ ಹೆಗಡೆ ಅಭಿಪ್ರಾಯ ಪಟ್ಟಿದ್ದಾರೆ.

ಮಹೇಶ್ ಹೆಗಡೆ ಮೂಲತಃ ಸಾಗರದ ಗಣೇಶ್ ಹೆಗಡೆ ಮತ್ತು ಶ್ರೀಮತಿ ಪಾರ್ವತಿ ಅವರ ಪುತ್ರರು.

ಕಳೆದ 27 ವರ್ಷಗಳಿಂದ ಪತ್ರಿಕೋದ್ಯಮದಲ್ಲಿ ವೃತ್ತಿಪರವಾಗಿ ಕಾರ್ಯನಿರ್ವಹಿಸುತ್ತಾ ಬರುತ್ತಿದ್ದಾರೆ. ಪ್ರಸ್ತುತ ಸಂಯುಕ್ತ ಕರ್ನಾಟಕ ಪತ್ರಿಕೆಯ ಸಾಗರ ತಾಲ್ಲೂಕು ವರದಿಗಾರರಾಗಿದ್ದಾರೆ. ತನಿಖಾ ವರದಿಗಳನ್ನು ಬರೆಯುವಲ್ಲಿ ಸಿದ್ಧಹಸ್ತರಾಗಿರುವ ಮಹೇಶ್ ಹೆಗಡೆ ಅವರು ಸಂಯುಕ್ತ ಕರ್ನಾಟಕ ಪತ್ರಿಕೆಯಲ್ಲಿ ಬರೆದ ತನಿಖಾವರದಿಗಳು ತೀರ್ಪುಗಾರರ ಮೆಚ್ಚುಗೆ ಗಳಿಸಿವೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಸಮಗ್ರ ವಿಭಾಗದಲ್ಲಿ ಅತ್ಯುತ್ತಮ ವರದಿಗೆ ನೀಡುವ 2024 ನೇ ಸಾಲಿನ ಅಭಿಮಾನಿ ಪ್ರಕಾಶನ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿ ಅವರ ವೃತ್ತಿ ಬದ್ಧತೆ ಮತ್ತು ಕೌಶಲ್ಯಕ್ಕೆ ಸಂದ ಗೌರವವಾಗಿದೆ.

ಕಲ್ಯಾಣ ಕರ್ನಾಟಕದ ಪಂಚ ನದಿಗಳ ಬೀಡು ಎಂದೇ ಪ್ರಚಲಿತವಾಗಿರುವ ಝರಣಿ ನರಸಿಂಹ ದೇವರ ಸನ್ನಿಧಾನ ಹೊಂದಿರುವ ಬೀದರಿನ ಝೀರಾ ಕನ್ವೆನ್ಷನ್ ಹಾಲ್ ನ ಲೋಕನಾಯಕ ಭೀಮಣ್ಣ ಖಂಡ್ರೆ ಅವರ ವೇದಿಕೆಯಲ್ಲಿ ಇದೇ ಏಪ್ರಿಲ್ ಏಪ್ರಿಲ್ 11 ಮತ್ತು 12 ರಂದು ನಡೆದ ಪತ್ರಕರ್ತರ ಸಮ್ಮೇಳನದಲ್ಲಿ ಮಹೇಶ್ ಹೆಗಡೆ ಈ ಪ್ರಶಸ್ತಿ ಸ್ವೀಕರಿಸಿದ್ದಾರೆ. ಸಮ್ಮೇಳನದಲ್ಲಿ ಮುಖ್ಯಮಂತ್ರಿ ಆದಿಯಾಗಿ ಸಚಿವ ಸಂಪುಟದ ಅನೇಕ ನಾಯಕರು ಪಾಲ್ಗೊಂಡಿದ್ದು ವಿಶೇಷ. ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ್ ಮತ್ತು ಸರ್ವ ಪದಾಧಿಕಾರಿಗಳು ಮಹೇಶ್ ಹೆಗಡೆ ಅವರಿಗೆ ಈ ಪ್ರಶಸ್ತಿ ಪ್ರದಾನ ಮಾಡಿ ಶುಭ ಹಾರೈಸಿದ್ದಾರೆ.

ರಾಜ್ಯದ ಸಾವಿರಾರು ಪತ್ರಕರ್ತರು ಸಾಕ್ಷಿಯಾಗಿದ್ದ ವೇದಿಕೆಯಲ್ಲಿ ಈ ಪ್ರಶಸ್ತಿ ಪಡೆದುಕೊಂಡಿರುವುದಕ್ಕೆ ನನಗೆ ಹೆಮ್ಮೆ ಎನಿಸುತ್ತಿದೆ ಎಂದು ಹೆಗಡೆ ಹೇಳಿದ್ದಾರೆ.

# 'ಮುಕೇಶ್ ಅಂಬಾನಿಗೆ 1 ಲಕ್ಷ ಮತಗಳಿರುತ್ತಾ...?'

ನವದೆಹಲಿ

ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕಲ್ಪಿಸಲು ಕ್ಷೇತ್ರ ಪುನರ್‌ವಿಂಗಡಣೆಗಾಗಿ ಸಂವಿಧಾನ (131ನೇ ತಿದ್ದುಪಡಿ) ಮಸೂದೆ ಮಂಡನೆಯಾಗಿದೆ. ಜನಗಣತಿ ಆಧಾರದಡಿ ಕ್ಷೇತ್ರಗಳ ಗಡಿ ನಿರ್ಧರಿಸುವ ಪ್ರಕ್ರಿಯೆ ಇದಾಗಿದೆ.

ಜನಸಂಖ್ಯೆ ಮೂಲಕ ಸಮಾನ ಪ್ರತಿನಿಧಿತ್ವ ಒದಗಿಸುವುದು ಇದರ ಉದ್ದೇಶವಾಗಿದೆ. ಸಂವಿಧಾನದ 82 ಹಾಗೂ 170ನೇ ವಿಧಿ ಪ್ರಕಾರ, ಪ್ರತಿ ಜನಗಣತಿಯ ನಂತರ ಈ ಪ್ರಕ್ರಿಯೆ ನಡೆಯಬೇಕು. ಆದರೆ ಕುಟುಂಬ ನಿಯಂತ್ರಣ ನೀತಿಗೆ ಉತ್ತೇಜನ ಕೊಡೋ ಸಲುವಾಗಿ 2001ರ ನಂತರ ಕ್ಷೇತ್ರ ಮರು ವಿಂಗಡಣೆ ತಾತ್ಕಾಲಿಕವಾಗಿ ಸ್ಥಗಿತಗೊಂಡಿತ್ತು ಎನ್ನಲಾಗಿದೆ.

ಕ್ಷೇತ್ರ ಪುನರ್ ವಿಂಗಡಣೆಯಿಂದ ಕರ್ನಾಟಕ



ಸೇರಿದಂತೆ ದಕ್ಷಿಣ ರಾಜ್ಯಗಳಿಗೆ ಅನ್ಯಾಯ ಆಗಲಿದೆ ಅನ್ನೋ ವಾದವನ್ನ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಬಿಜೆಪಿ ಹಿರಿಯ ನಾಯಕರು ಅಲ್ಲಗಳೆದಿದ್ದಾರೆ.

ಇನ್ನೂ ಕ್ಷೇತ್ರ ಪುನರ್ವಿಂಗಡಣೆ ಕುರಿತಾದ ಚರ್ಚೆ ವೇಳೆ ಮಾತನಾಡಿದ ಸಂಸದ ತೇಜಸ್ವಿ ಸೂರ್ಯ, ವಿಪಕ್ಷಗಳ ವಿರುದ್ಧ ಹರಿಹಾಯ್ದರು.

> ಕ್ಷೇತ್ರ ಪುನರ್ ವಿಂಗಡಣೆಯಿಂದ ಕರ್ನಾಟಕ ಸೇರಿದಂತೆ ದಕ್ಷಿಣ ರಾಜ್ಯಗಳಿಗೆ ಅನ್ಯಾಯ ಆಗಲಿದೆ ಅನ್ನೋ ವಾದವನ್ನ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಬಿಜೆಪಿ ಹಿರಿಯ ನಾಯಕರು ಅಲ್ಲಗಳೆದಿದ್ದಾರೆ.

ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆ ಯಾವ ಆಧಾರದ ಮೇಲೆ ನಡೆಸಬೇಕೆಂದು ನೀವು ಬಯಸುತ್ತೀರಿ? ಶ್ರೀಮಂತರಿಗೆ ಹೆಚ್ಚಿನ ಮತಗಳು ಇರುತ್ತವೆ, ಬಡವರಿಗೆ ಮತಗಳೇ ಇರುವುದಿಲ್ಲವೇ? ನಿಮ್ಮ ಈ ವಾದ ಮುಕೇಶ್ ಅಂಬಾನಿಗೆ 1 ಲಕ್ಷ ಮತಗಳಿರುತ್ತೆ, ನಮ್ಮಂಥವರಿಗೆ ಒಂದೇ ಮತ ಇರುತ್ತವೇ ಅಂತಲೇ? ಕಾಂಗ್ರೆಸ್‌ನ ತರ್ಕ ಇದೇನಾ? ವಿಪಕ್ಷಗಳ ಈ ಅರ್ಥಹೀನ ಚರ್ಚೆ ಸಂಪೂರ್ಣ ರಾಜಕೀಯ ಪ್ರೇರಿತ ಮತ್ತು ದೋಷಪೂರಿತ ಎಂದು ಕಿಡಿಕಾರಿದರು.

ಇನ್ನೂ ದಕ್ಷಿಣ ಭಾರತಕ್ಕೆ ಅನ್ಯಾಯವಾಗುತ್ತವೆ ಎನ್ನುವ ವಿಪಕ್ಷಗಳ ಆರೋಪಕ್ಕೆ ಪ್ರತಿಕ್ರಿಯಿಸಿ, ದಕ್ಷಿಣ ಭಾರತಕ್ಕೆ ಅನ್ಯಾಯ ಆಗಲ್ಲ. ಮೂರು ಮಸೂದೆಗಳನ್ನು ಸಂಪೂರ್ಣವಾಗಿ ನೋಡಿದ್ದೇನೆ, ನಾನಿದನ್ನು ಬಿಜೆಪಿ ಸದಸ್ಯನಾಗಿ ಹೇಳುತ್ತಿಲ್ಲ.

ಇದಕ್ಕಿಂತ ಉತ್ತಮ ಡೀಲ್ ದಕ್ಷಿಣಕ್ಕೆ ಸಿಗುತ್ತಿರಲಿಲ್ಲ. ದಕ್ಷಿಣಕ್ಕೆ ಅನ್ಯಾಯವಾಗಿದ್ದರೆ 'ಹೆಮ್ಮೆಯ ಕನ್ನಡಿಗ'ನಾಗಿ ನಾನು ವಿರೋಧಿಸುತ್ತಿದ್ದೆ. ದಕ್ಷಿಣಕ್ಕೆ ಅನ್ಯಾಯ ಮಾಡುತ್ತಿದ್ದಾರೆ ಎಂದು ವಿಪಕ್ಷಗಳು ಜನರ ದಾರಿ ತಪ್ಪಿಸುತ್ತಿವೆ ಎಂದು ತಿವಿದರು.



ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿ ಸಾರ್ವಜನಿಕ ಅಹವಾಲು ಸ್ವೀಕರಿಸಿದರು.

## ರಿಯಾ ಡೈಮಂಡ್ಸ್ ಬೆಂಗಳೂರಿನಲ್ಲಿ ಭಾರತದ ಮೊದಲ ಪ್ರಯೋಗಾಲಯ

ಬೆಂಗಳೂರು

ಭಾರತದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಯೋಗಾಲಯದಲ್ಲಿ ಬೆಳೆದ ವಜ್ರ ಆಭರಣ ಬ್ರ್ಯಾಂಡ್‌ಗಳಲ್ಲಿ ಒಂದಾದ ರಿಯಾ ಡೈಮಂಡ್ಸ್, ಇಂದು ಬೆಂಗಳೂರಿನಲ್ಲಿ ತನ್ನ ವಿಶೇಷವಾದ ನಿಶ್ಚಿತಾರ್ಥ ಉಂಗುರ ಸ್ಟುಡಿಯೋವನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ.

ಇದು ಪ್ರಯೋಗಾಲಯದಲ್ಲಿ ಬೆಳೆದ ವಜ್ರ ಮತ್ತು ಚಿನ್ನದ ನಿಶ್ಚಿತಾರ್ಥ ಉಂಗುರಗಳಿಗೆ ಸಂಪೂರ್ಣವಾಗಿ ಮೀಸಲಾಗಿರುವ ಭಾರತದಲ್ಲಿ ಮೊದಲ ರೀತಿಯ ಚಿಲ್ಲರೆ ಸ್ವರೂಪವನ್ನು ಪರಿಚಯಿಸುತ್ತದೆ. ಡಿಕೆನ್ಸನ್ ರಸ್ತೆಯಲ್ಲಿರುವ ಈ ಸ್ಟುಡಿಯೋ, ಬ್ರ್ಯಾಂಡ್‌ನ ಚಿಲ್ಲರೆ ವಿಸ್ತರಣೆಯಲ್ಲಿ ಪ್ರಮುಖ ಹೆಜ್ಜೆಯನ್ನು ಗುರುತಿಸುವ ಒಂದೇ, ಅನುಭವ–ನೇತೃತ್ವದ ಜಾಗದಲ್ಲಿ ವಿನ್ಯಾಸ, ಗ್ರಾಹಕೀಕರಣ ಮತ್ತು ಹೊಂದಿಕೊಳ್ಳುವ ಸಮಾಲೋಚನೆಯನ್ನು ಒಟ್ಟುಗೂಡಿಸುತ್ತದೆ.

ಮೈಸೂರು ಸೀರೆ ಉದ್ಯೋಗ್‌ನ ಸಂಸ್ಥಾಪಕ ಶ್ರೀ ದಿನೇಶ್ ತಲೇರಾ ಅವರು ಸ್ಟುಡಿಯೋವನ್ನು ಉದ್ಘಾಟಿಸಿದರು, ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು, ಬೆಂಗಳೂರಿನ ಚಿಲ್ಲರೆ ಮತ್ತು ಆಭರಣ ಭೂದೃಶ್ಯದಲ್ಲಿ ಈ ಮೈಲಿಗಲ್ಲಿನ ಮಹತ್ವವನ್ನು ಒತ್ತಿ ಹೇಳಿದರು.

ಈ ಬಿಡುಗಡೆಯು ಭಾರತದ ವಜ್ರ ಮಾರುಕಟ್ಟೆಯಲ್ಲಿನ ವಿಶಾಲ ಆವೇಗಕ್ಕೆ ಹೊಂದಿಕೆಯಾಗುತ್ತದೆ. ದೇಶವು ಪ್ರಸ್ತುತ ವಿಶ್ವದ ವಜ್ರಗಳಲ್ಲಿ ಸುಮಾರು 90–95% ರಷ್ಟು ಸಂಸ್ಕರಿಸುತ್ತಿದೆ ಮತ್ತು ಮೌಲ್ಯ ಸರಪಳಿಯಲ್ಲಿ ತನ್ನ




ಉಪಸ್ಥಿತಿಯನ್ನು ಸ್ಥಿರವಾಗಿ ವಿಸ್ತರಿಸುತ್ತಿದೆ. ವರದಿಗಳ ಪ್ರಕಾರ, ಭಾರತೀಯ ವಜ್ರ ಮಾರುಕಟ್ಟೆಯು ರಲ್ಲಿ ರೂ. 53,512 ಕೋಟಿ ಎಂದು ಅಂದಾಜಿಸಲಾಗಿದೆ ಮತ್ತು ಈಜ28 ರ ವೇಳೆಗೆ ರೂ. 74,227 ಕೋಟಿ (ಗಖ$ 8.2 ಬಿಲಿಯನ್) ಗೆ ಬೆಳೆಯುವ ನಿರೀಕ್ಷೆಯಿದೆ, ಇದು ನಿರಂತರ ಗ್ರಾಹಕರ ಬೇಡಿಕೆ ಮತ್ತು ವಿಕಸಿಸುತ್ತಿರುವ ಆದ್ಯತೆಗಳನ್ನು ಪ್ರತಿಬಿಂಬಿಸುತ್ತದೆ.

ಈ ಹಿನ್ನೆಲೆಯಲ್ಲಿ, ರಿಯಾ ಡೈಮಂಡ್ಸ್ ತನ್ನ ಬೆಂಗಳೂರು ಸ್ಟುಡಿಯೊವನ್ನು ಸಾಂಪ್ರದಾಯಿಕ ಆಭರಣ ಚಿಲ್ಲರೆ ವ್ಯಾಪಾರಕ್ಕೆ ಹೆಚ್ಚು ಪರಿಗಣಿತ ಪರ್ಯಾಯವಾಗಿ ಇರಿಸುತ್ತಿದೆ. ಈ ಸ್ಥಳವು 1000 ಕ್ಕೂ ಹೆಚ್ಚು ನಿಶ್ಚಿತಾರ್ಥದ ಉಂಗುರ ವಿನ್ಯಾಸಗಳು, ಬಣ್ಣದ ವಜ್ರಗಳು, ಬಹು ಕಟ್‌ಗಳು, ವೈವಿಧ್ಯಮಯ ಚಿನ್ನದ ಟೋನ್‌ಗಳು ಮತ್ತು ಶುದ್ಧತೆಯ ಆಯ್ಕೆಗಳನ್ನು ಒಳಗೊಂಡಿದೆ, ಇವೆಲ್ಲವನ್ನೂ ಪ್ರಮಾಣೀಕೃತ ಪ್ರಯೋಗಾಲಯದಲ್ಲಿ ಬೆಳೆದ ವಜ್ರಗಳು ಮತ್ತು ಚಿನ್ನವನ್ನು ಬಳಸಿ ರಚಿಸಲಾಗಿದೆ.

# ವಿನಯ್‌ಕುಲಕರ್ಣಿಗೆ ಜೀವಾವಧಿ

ಬೆಂಗಳೂರು: ಧಾರವಾಡ ಬಿಜೆಪಿ ನಾಯಕ ಯೋಗೇಶ್ ಗೌಡ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತೀರ್ಪು ಪ್ರಕಟಿಸಿದ್ದು ಅಂಟಿಂಡಿಂಛ ಶಾಸಕ ವಿನಯ್ ಕುಲಕರ್ಣಿಗೆ ಜೀವಾವಾಧಿ ಶಿಕ್ಷೆ ನೀಡಿದೆ. ಇದೇ ಪ್ರಕರಣದಲ್ಲಿ 15 ಅಪರಾಧಿಗಳಿಗೂ ಜೀವಾವಾಧಿ ಶಿಕ್ಷೆ ವಿಧಿಸಿರುವ ಕೋರ್ಟ್ 19ನೇ ಅಪರಾಧಿ ಚೆನ್ನಕೇಶವ ಟಿಂಗರಿಕರ್ ಗೆ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ಕೋರ್ಟ್ ನ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರು ಇಂದು ಮಹತ್ವದ ತೀರ್ಪು ಪ್ರಕಟಿಸಿದ್ದಾರೆ. ವಿನಯ್ ಕುಲಕರ್ಣಿ ಮತ್ತು ಇತರರಿಗೆ ಕ್ರಿಮಿನಲ್ ಪಿತೂರಿ ಮತ್ತು ಕೊಲೆ ಸೇರಿದಂತೆ ಐಪಿಸಿ ಸೆಕ್ಷನ್‌ಗಳ ಅಡಿಯಲ್ಲಿ ಶಿಕ್ಷೆ ವಿಧಿಸಿದ್ದಾರೆ. ಇದೇ ವೇಳೆ ಯೋಗೇಶ್ ಗೌಡ ಮಕ್ಕಳಿಗೆ ಪರಿಹಾರವಾಗಿ 16 ಲಕ್ಷ ರೂಪಾಯಿ ನೀಡುವಂತೆ ಕೋರ್ಟ್ ಸೂಚಿಸಿದೆ.

ವಿನಯ್ ಕುಲಕರ್ಣಿ ಕಳೆದ 3 ದಿನದಿಂದ ಒಂದೇ ಬಟ್ಟೆಯಲ್ಲಿದ್ದಾರೆ. ಬಟ್ಟೆ ಬದಲಿಸಲು ಅನುಮತಿ ನೀಡುವಂತೆ ಶಾಸಕರ ಪರ ವಕೀಲ ಸುನಿಲ್ ಮನವಿ ಮಾಡಿದ್ದರು. ಅಪರಾಧಿಗಳಿಗೆ ಬಟ್ಟೆ ಒದಗಿಸಲು ಜೈಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜೈಲು ಕೈಪಿಡಿಯಲ್ಲಿರುವಂತೆ ಬಟ್ಟೆ ಒದಗಿಸಲು ಜಡ್ಜ್ ಸೂಚನೆ ನೀಡಿದ್ದಾರೆ. ಇದರ ಜತೆಗೆ ಪ್ರತಿ ಸೆಕ್ಷನ್‌ಗೂ ಪ್ರತ್ಯೇಕವಾಗಿ ದಂಡ ವಿಧಿಸಲಾಗಿದೆ.

2016ರ ಜೂನ್ 15ರಂದು ಧಾರವಾಡದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಯೋಗೇಶ್ ಗೌಡ ಅವರನ್ನು ಸಪ್ತಾಪುರ ಬಡಾವಣೆಯ ಜಿಮ್‌ನಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು. ವಿನಯ್ ಕುಲಕರ್ಣಿ ಕಳೆದ 3 ದಿನದಿಂದ ಒಂದೇ ಬಟ್ಟೆಯಲ್ಲಿದ್ದಾರೆ. ಬಟ್ಟೆ ಬದಲಿಸಲು ಅನುಮತಿ ನೀಡುವಂತೆ ಶಾಸಕರ ಪರ ವಕೀಲ ಸುನಿಲ್ ಮನವಿ ಮಾಡಿದ್ದರು. ಅಪರಾಧಿಗಳಿಗೆ ಬಟ್ಟೆ ಒದಗಿಸಲು ಜೈಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜೈಲು ಕೈಪಿಡಿಯಲ್ಲಿರುವಂತೆ ಬಟ್ಟೆ



ಒದಗಿಸಲು ಜಡ್ಜ್ ಸೂಚನೆ ನೀಡಿದ್ದಾರೆ. ಇದರ ಜತೆಗೆ ಪ್ರತಿ ಸೆಕ್ಷನ್‌ಗೂ ಪ್ರತ್ಯೇಕವಾಗಿ ದಂಡ ವಿಧಿಸಲಾಗಿದೆ.

2016ರ ಜೂನ್ 15ರಂದು ಧಾರವಾಡದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಯೋಗೇಶ್ ಗೌಡ ಅವರನ್ನು ಸಪ್ತಾಪುರ ಬಡಾವಣೆಯ ಜಿಮ್‌ನಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಧಾರವಾಡದ ಉಪನಗರ ಪೊಲೀಸರು ದೂರು ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ್ದರು. ಆಸ್ತಿ ವಿವಾದದ ವಿಚಾರಕ್ಕಾಗಿ ಈ ಕೊಲೆ ನಡೆದಿದೆ ಎಂದು ಪೊಲೀಸರು ಆರು ಜನರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಆದರೆ, ಹತ್ಯೆಯಾದ ಯೋಗೇಶ್ ಗೌಡ ಕುಟುಂಬದ ಸದಸ್ಯರ ಒತ್ತಾಯದ ಮೇರೆಗೆ 2019ರಲ್ಲಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗಿತ್ತು. ಬಳಿಕ ಸಿಬಿಐ ತನಿಖೆಯಲ್ಲಿ ಇದು ರಾಜಕೀಯ ಪ್ರೇರಿತ ಕೊಲೆ ಎಂದು ಹೇಳಿತ್ತು. ಅಲ್ಲಿಂದ ಈ ಪ್ರಕರಣ ರಾಜಕೀಯ ತಿರುವು ಪಡೆದುಕೊಂಡಿತ್ತು.

ಈ ಕೊಲೆಯಲ್ಲಿ ಶಾಸಕ ವಿನಯ್ ಕುಲಕರ್ಣಿ ಕೈವಾಡವಿರುವ ಅನುಮಾನ ವ್ಯಕ್ತವಾಗಿತ್ತು. 2020ರ ನವೆಂಬರ್ 5ರಂದು ಸಿಬಿಐ ಅಧಿಕಾರಿಗಳು, ವಿನಯ್ ಕುಲಕರ್ಣಿ ಅವರನ್ನು ಬಂಧಿಸಿದ್ದರು. ವಿನಯ್ ಕುಲಕರ್ಣಿ ಕಳೆದ 3 ದಿನದಿಂದ ಒಂದೇ ಬಟ್ಟೆಯಲ್ಲಿದ್ದಾರೆ. ಬಟ್ಟೆ ಬದಲಿಸಲು ಅನುಮತಿ ನೀಡುವಂತೆ ಶಾಸಕರ ಪರ ವಕೀಲ ಸುನಿಲ್ ಮನವಿ ಮಾಡಿದ್ದರು. ಅಪರಾಧಿಗಳಿಗೆ ಬಟ್ಟೆ ಒದಗಿಸಲು ಜೈಲು

> 2016ರ ಜೂನ್ 15ರಂದು ಧಾರವಾಡದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಯೋಗೇಶ್ ಗೌಡ ಅವರನ್ನು ಸಪ್ತಾಪುರ ಬಡಾವಣೆಯ ಜಿಮ್‌ನಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಧಾರವಾಡದ ಉಪನಗರ ಪೊಲೀಸರು ದೂರು ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ್ದರು. ಆಸ್ತಿ ವಿವಾದದ ವಿಚಾರಕ್ಕಾಗಿ ಈ ಕೊಲೆ ನಡೆದಿದೆ ಎಂದು ಪೊಲೀಸರು ಆರು ಜನರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜೈಲು ಕೈಪಿಡಿಯಲ್ಲಿರುವಂತೆ ಬಟ್ಟೆ ಒದಗಿಸಲು ಜಡ್ಜ್ ಸೂಚನೆ ನೀಡಿದ್ದಾರೆ. ಇದರ ಜತೆಗೆ ಪ್ರತಿ ಸೆಕ್ಷನ್‌ಗೂ ಪ್ರತ್ಯೇಕವಾಗಿ ದಂಡ ವಿಧಿಸಲಾಗಿದೆ.

2016ರ ಜೂನ್ 15ರಂದು ಧಾರವಾಡದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಯೋಗೇಶ್ ಗೌಡ ಅವರನ್ನು ಸಪ್ತಾಪುರ ಬಡಾವಣೆಯ ಜಿಮ್‌ನಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಧಾರವಾಡದ ಉಪನಗರ ಪೊಲೀಸರು ದೂರು ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ್ದರು. ಆಸ್ತಿ ವಿವಾದದ ವಿಚಾರಕ್ಕಾಗಿ ಈ ಕೊಲೆ ನಡೆದಿದೆ ಎಂದು ಪೊಲೀಸರು ಆರು ಜನರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಈ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಸೇರಿ ಒಟ್ಟು 21 ಮಂದಿ ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಟ್ಟಿ ಸಲ್ಲಿಸಿದ್ದರು. ಇದರ ನಂತರ ವಿನಯ್ ಕುಲಕರ್ಣಿ ಜಾಮೀನು ಪಡೆದು ಹೊರಗೆ ಬಂದಿದ್ದರು. ನಂತರದಲ್ಲಿ ಈ ಪ್ರಕರಣವನ್ನು ಜನಪ್ರತಿನಿಧಿ ಕೋರ್ಟ್ ಗೆ ನೀಡಲಾಗಿತ್ತು. ಇದೀಗ ಈ ಅವರಿಗೆ ಶಿಕ್ಷೆಯನ್ನು ಘೋಷಣೆ ಮಾಡಿದೆ.

# ನೀರಿನ ಅಭಾವ ತಲೆದೋರದಂತೆ ಕ್ರಮಕ್ಕೆ ಡಿಸಿ ಶುಭ ಕಲ್ಯಾಣ್ ಸೂಚನೆ

ತುಮಕೂರು

ಜಿಲ್ಲೆಯಲ್ಲಿ ಬೇಸಿಗೆಯ ತೀವ್ರತೆ ಹೆಚ್ಚುತ್ತಿರುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ವಿಡಿಯೋ ಸಂವಾದದ ಮೂಲಕ ನಡೆದ 'ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ'ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಪೂರ್ವ ಮುಂಗಾರು ಮಳೆಯ ವರದಿ, ಸಂಭವನೀಯ ಹಾನಿಗಳು ಹಾಗೂ ತುರ್ತು ಸಿದ್ಧತೆಗಳ ಕುರಿತು ಅವರು ಸುದೀರ್ಘ ಪರಿಶೀಲನೆ ನಡೆಸಿದರು.

"ಜಿಲ್ಲೆಯ ಪ್ರತಿಯೊಂದು ಗ್ರಾಮ ಮತ್ತು ವಾರ್ಡುಗಳಲ್ಲಿ ನೀರಿನ ಲಭ್ಯತೆಯ ಬಗ್ಗೆ ನಿಗಾವಹಿಸಬೇಕು. ನೀರಿನ ಮೂಲಗಳ ಶುದ್ಧತೆ, ಸ್ವಚ್ಛತೆ ಮತ್ತು ಕ್ಲೋರಿನೇಶನ್ ಪ್ರಕ್ರಿಯೆ ನಿರಂತರವಾಗಿ ನಡೆಯಬೇಕು. ವಿಶೇಷವಾಗಿ ಸರ್ಕಾರಿ ಶಾಲೆಗಳು ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ಯಾವುದೇ ಅಡಚಣೆಯಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು," ಎಂದು ತಿಳಿಸಿದರು.

ಬೇಸಿಗೆಯ ಸಮಯದಲ್ಲಿ ಅರಣ್ಯದ ಗಡಿ ಭಾಗಗಳಲ್ಲಿ ಕಾಡ್ಗಿಚ್ಚು ಕಾಣಿಸಿಕೊಳ್ಳುವ ಸಾಧ್ಯತೆ ಇರುವುದರಿಂದ ಅರಣ್ಯ ಇಲಾಖೆ ಕಟ್ಟೆಚ್ಚರ ವಹಿಸಬೇಕು. ಆಕಸ್ಮಿಕ ಬೆಂಕಿ ಅನಾಹುತಗಳ ನಿಯಂತ್ರಣದ ಜೊತೆಗೆ, ಅರಣ್ಯದ ಅಂಚಿನಲ್ಲಿರುವ ಗ್ರಾಮಗಳಲ್ಲಿ ಕಾಡುಪ್ರಾಣಿಗಳ ದಾಳಿ ತಡೆಗಟ್ಟಲು ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ ಇಲಾಖೆಯ ಪ್ರಗತಿಯ ಬಗ್ಗೆಯೂ ಚರ್ಚಿಸಿದ ಜಿಲ್ಲಾಧಿಕಾರಿಗಳು, ಬೆಳೆ ಸಮೀಕ್ಷೆ ಮತ್ತು ಬೆಳೆ ವಿಮೆ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬವಾಗಬಾರದು. ರೈತರಿಗೆ ದೊರೆಯಬೇಕಾದ ಸೌಲಭ್ಯಗಳು ಕಾಲಮಿತಿಯಲ್ಲಿ ತಲುಪಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

# 'ಬಿಸಿಲ ಝಳಕ್ಕೆ ಹೈರಾಣಾಗಬೇಡಿ'

ಚಿಕ್ಕಬಳ್ಳಾಪುರ

ಬೇಸಿಗೆಯ ಬಿಸಿ ಗಾಳಿಯ ಸಂದರ್ಭದಲ್ಲಿ ದೇಹದಲ್ಲಿ ನೀರಿನ ಅಂಶ ಕಡಿಮೆಯಾದಲ್ಲಿ ಸೂರ್ಯಾಘಾತ (ಸನ್ ಸ್ಟ್ರೋಕ್) ಉಂಟಾಗುವ ಸಾಧ್ಯತೆ ಹೆಚ್ಚಿರುತ್ತದೆ. ಸಾರ್ವಜನಿಕರು ಬಿಸಿಲಿನಿಂದ ರಕ್ಷಿಸಿಕೊಳ್ಳಲು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್ ತಿಳಿಸಿದ್ದಾರೆ.

ಬಿಸಿಲಿನಲ್ಲಿ ಏನು ಮಾಡಬೇಕು? ಏನು ಮಾಡಬಾರದು?

ಮಧ್ಯಾಹ್ನದ ಉರಿ ಬಿಸಿಲಿನಲ್ಲಿ ಶ್ರಮದಾಯಕ ಕೆಲಸಗಳಿಂದ ದೂರವಿರುವುದು ಉತ್ತಮ. ಬಿಸಿಲಿನಿಂದ ರಕ್ಷಿಸಿಕೊಳ್ಳಲು ಈ ಕೆಳಗಿನ ಕ್ರಮಗಳನ್ನು ಅನುಸರಿಸಲು ಅವರು ಸೂಚಿಸಿದ್ದಾರೆ.

ಪಾನೀಯಗಳ ಆಯ್ಕೆ: ಹೆಚ್ಚು ಸಕ್ಕರೆಯುಕ್ತ ಹಾಗೂ ಕಾರ್ಬೋನೇಟೆಡ್ ಪಾನೀಯಗಳನ್ನು ಕುಡಿಯಬಾರದು, ಇವು ನಿರ್ಜಲೀಕರಣಕ್ಕೆ ಕಾರಣವಾಗುತ್ತವೆ. ಬದಲಾಗಿ ನೀರು, ಎಳನೀರು, ಮಜ್ಜಿಗೆ, ಲಸ್ಸಿ ಅಥವಾ ಹಣ್ಣಿನ ರಸ ಸೇವಿಸಿ.

ಉಡುಗೆ: ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸಬೇಕು. ಹೊರಗೆ ಹೋಗುವಾಗ ಛತ್ರಿ, ಟೋಪಿ ಅಥವಾ ಟವಲ್ ಬಳಸುವುದು ಕಡ್ಡಾಯ.

ವಿಶ್ರಾಂತಿ: ಹೊರಾಂಗಣದಲ್ಲಿ ಕೆಲಸ ಮಾಡುವವರು ಆಗಾಗ್ಗೆ ನೆರಳಿನ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕು.

ಮಕ್ಕಳಲ್ಲಿನ ಲಕ್ಷಣಗಳ ಮೇಲೆ ನಿಗಾ ಇರಲಿ: ಬಿಸಿಲಿನ ಶಾಖದಿಂದ ಮಕ್ಕಳಲ್ಲಿ ತಲೆನೋವು, ವಾಂತಿ, ತಲೆತಿರುಗುವಿಕೆ, ಅತಿಯಾದ ಬೆವರುವಿಕೆ, ಸ್ನಾಯು ಸೆಳೆತ ಮತ್ತು ಮೂರ್ಛೆ ಹೋಗುವ ಲಕ್ಷಣಗಳು ಕಂಡುಬರಬಹುದು. ದೇಹದ ಉಷ್ಣತೆ 105 ಡಿಗ್ರಿ ಫ್ಯಾರನ್‌ಹೀಟ್ (40.5ಲಿಅ) ದಾಟಿದರೆ ಅದು ಅಪಾಯಕಾರಿ. ಅಂತಹ ಸಂದರ್ಭದಲ್ಲಿ ತಕ್ಷಣ ಆಂಬ್ಯುಲೆನ್ಸ್ ಅಥವಾ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಬೇಕು ಎಂದು ಅವರು ಎಚ್ಚರಿಸಿದ್ದಾರೆ.

ಸೂರ್ಯಾಘಾತಕ್ಕೆ ತುತ್ತಾದವರಿಗೆ ಪ್ರಥಮ ಚಿಕಿತ್ಸೆ: ಸೂರ್ಯಾಘಾತಕ್ಕೆ ಒಳಗಾದ ವ್ಯಕ್ತಿಯನ್ನು ತಕ್ಷಣ ತಂಪಾದ ಜಾಗದಲ್ಲಿ ಮಲಗಿಸಿ, ಒದ್ದೆ ಬಟ್ಟೆಯಿಂದ ದೇಹ ಒರೆಸಬೇಕು. ವ್ಯಕ್ತಿ ಪ್ರಜ್ಞಾವಸ್ಥೆಯಲ್ಲಿದ್ದರೆ ಆಗಾಗ್ಗೆ ನೀರು ಮತ್ತು ಓ.ಆರ್.ಎಸ್ (ಔಖಖ) ನೀಡಬೇಕು. ಹಣ್ಣುಗಳಾದ ಕಲ್ಲಂಗಡಿ, ಕಿತ್ತಳೆ ಹಾಗೂ ಸೌತೇಕಾಯಿ ಸೇವನೆ ದೇಹದಲ್ಲಿ ನೀರಿನಂಶವನ್ನು ಕಾಯ್ದುಕೊಳ್ಳಲು ಸಹಕಾರಿ.

ಹೆಚ್ಚಿನ ಮಾಹಿತಿಗಾಗಿ ಅಥವಾ ತುರ್ತು ಸಂದರ್ಭದಲ್ಲಿ ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಸಂಪರ್ಕಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಪಂ ನೌಕರರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ




ಕೋಲಾರ

ಗ್ರಾಮ ಪಂಚಾಯಿತಿ ನೌಕರರಿಗೆ ಕನಿಷ್ಠ ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಗ್ರಾಮ ಪಂಚಾಯಿತಿ ನೌಕರರು ಜಿಲ್ಲಾ ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಗುರುವಾರ ಪ್ರತಿಭಟನೆ ನಡೆಸಿ ಜಿಪಂ ಉಪ ಕಾರ್ಯದರ್ಶಿ ರಮೇಶ್ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಗೌರವ ಅಧ್ಯಕ್ಷ ಗಾಂಧಿನಗರ ನಾರಾಯಣಸ್ವಾಮಿ ಮಾತನಾಡಿ ಗ್ರಾಮ ಪಂಚಾಯಿತಿ ನೌಕರರಿಗೆ ರೂ. 36,000 ಕನಿಷ್ಠ ವೇತನ, ಪಿಂಚಣಿ ಕನಿಷ್ಠ ರೂ. 6,000 ಕ್ಕೆ ನಿಗದಿಪಡಿಸುವುದು, ಎಲ್ಲ ಗ್ರಾಮ ಪಂಚಾಯಿತಿಗಳಿಗೆ ದ್ವಿತೀಯ ದರ್ಜೆ ಗುಮಾಸ್ತರ ನೇಮಕ, ಹಳೆ ಪಿಂಚಣಿ ಯೋಜನೆ ಜಾರಿ, ಗ್ರಾಚ್ಯುಟಿ ಪರಿಹಾರ 90 ದಿನಕ್ಕೆ ಹೆಚ್ಚಿಸುವುದು ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು

ಗ್ರಾಮೀಣಾಭಿವೃದ್ಧಿ ಅಧಿಕಾರಿಗಳು ಈಗಾಗಲೇ ಒಪ್ಪಿಕೊಂಡಿರುವಂತೆ ರೂ.5000 ಎಲ್ಲಾ ನೌಕರರಿಗೆ ವೇತನ ಹೆಚ್ಚಳ ಮಾಡಿ ತಕ್ಷಣ ಆದೇಶ ಹೊರಡಿಸಬೇಕು, ನೌಕರರ ನಿವೃತ್ತಿ, ನಿಧನ ಹೊಂದಿದರೆ ಅವರಿಗೆ ಇಡಗಂಟು ರೂ.6 ಲಕ್ಷ ನೀಡಬೇಕು, ಸೇವಾ ಹಿರಿತನದ ಆಧಾರದಲ್ಲಿ ವೇತನ ನೀಡಬೇಕು ತಾವು ಭರವಸೆ ನೀಡಿದ ಭಾಗವಾಗಿ ಸ್ವಚ್ಛವಾಹಿನಿ ನೌಕರರ ಸಭೆಯನ್ನು ಮಾಡಿ ಅವರ ಪ್ರಮುಖ ಬೇಡಿಕೆಗಳನ್ನು ಇತ್ಯರ್ಥಪಡಿಸಬೇಕು ಎಂದು ಒತ್ತಾಯಿಸಿದರು.

ಆದಾಯಕ್ಕೆ ಅನುಗುಣವಾಗಿ ಕರ ವಸೂಲಿಗಾರರ ಹುದ್ದೆಗಳನ್ನು ನಿಗದಿಗೊಳಿಸಬೇಕು.ಎಲ್ಲಾ ನೌಕರರಿಗೆ ಸೇವಾ ಪುಸ್ತಕವನ್ನು ತೆರೆಯಬೇಕು.ನಿವೃತ್ತಿ ಹೊಂದಿದ, ನಿಧನರಾದ ನೌಕರರ ಕುಟುಂಬಕ್ಕೆ ಗ್ರಾಚ್ಯೂಟಿ ನೀಡಬೇಕು. ಎಸ್.ಎಸ್.ಎಲ್.ಸಿ. ಪಾಸಾದ ಸತತವಾಗಿ 5 ವರ್ಷ ಸೇವೆ ಸಲ್ಲಿಸಿದ ಸಿಬ್ಬಂದಿಗೆ ಬಿಲ್ ಕಲೆಕ್ಟರ್ ಹುದ್ದೆಗೆ ಬಡ್ತಿ ನೀಡಬೇಕು. ಈ ಬಗ್ಗೆ ಜೇಷ್ಠತಾ ಪಟ್ಟಿ ತಯಾರಿಸಬೇಕು. ಪ್ರತಿ ವರ್ಷ ಪಂಪ್ ಆಪರೇಟರ್‌ಗಳಿಗೆ ಬ್ಯಾಟರಿ, ಟೆಸ್ಟರ್, ರೈನ್ ಕೋಟ್ ಸೇರಿದಂತೆ ಕಿಟ್ ನೀಡಬೇಕು. ಎಲ್ಲಾ ಸಿಬ್ಬಂದಿಗೆ ವರ್ಷಕ್ಕೆ ಎರಡು ಜೊತೆ ಸಮವಸ್ತ್ರ ನೀಡಬೇಕು. ಮರಣ ಹೊಂದಿದ ನೌಕರರ ಕುಟುಂಬಕ್ಕೆ ತಕ್ಷಣ ಕೆಲಸ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಅಮರನಾರಾಯಣ, ಕಾರ್ಯದರ್ಶಿ ಶಿವಕುಮಾರ್, ಖಜಾಂಚಿ ಕೇಶವರಾವ್ ಸಂಘಟನಾ ಕಾರ್ಯದರ್ಶಿ ವಿಜಯಕೃಷ್ಣ, ವಿವಿಧ ತಾಲೂಕು ಪದಾಧಿಕಾರಿಗಳಾದ ಎಂ.ಮೋಹನ್, ಸುಬ್ರಮಣ್ಯ, ರಾಮಕೃಷ್ಣ, ವೆಂಕಟರಾವ್, ನಾಗರಾಜ್, ಚಂದ್ರಪ್ಪ, ರೆಡ್ಡೆಪ್ಪ, ಶಿವರಾಮಪ್ಪ, ಆನಂದ್, ಅಂಜಿ, ಶ್ರೀನಿವಾಸ್ ಶಿವರಾಜ್ ಮುಂತಾದವರು ಇದ್ದರು.

# ಸರ್ಕಾರಿ ಶಾಲೆಗಳತ್ತ ಪೋಷಕರ ಗಮನ ಸೆಳೆಯಲು ದಾಖಲಾತಿ ಆಂದೋಲನಕ್ಕೆ ಚಾಲನೆ

ವಿಜಯಪುರ

ಶಿಕ್ಷಣ ಕ್ಷೇತ್ರಕ್ಕೆ ಸರಕಾರ ಕಲ್ಪಿಸುತ್ತಿರುವ ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳುವ ಮೂಲಕ ಗುಣಮಟ್ಟದ ಶಿಕ್ಷಣ ಪಡೆದುಕೊಳ್ಳಬೇಕು ಎಂದು ಮುಖ್ಯಶಿಕ್ಷಕ ಮನೋಹರ್ ಹೇಳಿದರು.

ಪಟ್ಟಣದ ಸರಕಾರಿ ಬಾಲಕಿಯರ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ, ಆಯೋಜಿಸಿದ್ದ ದಾಖಲಾತಿ ಆಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಸರಕಾರ, ಗ್ರಾಮೀಣ ಭಾಗದಲ್ಲಿನ ಬಡ ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲ ಕಲ್ಪಿಸಲು ನೀಡುತ್ತಿರುವ ಸೌಲಭ್ಯಗಳನ್ನು ಮಕ್ಕಳು, ಸದುಪಯೋಗ ಮಾಡಿಕೊಳ್ಳಬೇಕು. ಶಾಲೆಯಲ್ಲಿ ಹೆಚ್ಚಿನ ಅನುಭವವುಳ್ಳ ಶಿಕ್ಷಕರಿದ್ದು, ಎಲ್ಲಾ ಮಕ್ಕಳಿಗೂ ಗುಣಾತ್ಮಕ ಶಿಕ್ಷಣ ಒದಗಿಸುವುದು, ಟ್ಯಾಬ್‌ಗಳನ್ನು ಬಳಕೆ ಮಾಡಿಕೊಂಡು ಬೋಧನೆ, ಉಚಿತವಾಗಿ ಸಮವಸ್ತ್ರ, ಟೈ, ಬೆಲ್ಟ್ ವಿತರಣೆ, ಗುರುತಿನ ಚೀಟಿ ಪಠ್ಯಪುಸ್ತಕ, ಶೂ-ಸಾಕ್ಸ್, ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ ಯೋಜನೆ, ಮೊಟ್ಟೆ, ಬಾಳೇಹಣ್ಣು, ಬ್ಯಾಗ್, ನೋಟ್ ಪುಸ್ತಕಗಳು, ಹಾಗೂ ಕಲಿಕಾ ಸಾಮಾಗ್ರಿಗಳನ್ನು ಉಚಿತವಾಗಿ ವಿತರಣೆ ಮಾಡಲಾಗುತ್ತದೆ. ಒಳಾಂಗಣ, ಹೊರಾಂಗಣ ಕ್ರೀಡೆಗಳು, ಸೇವಾದಳ, ಸ್ಕೌಟ್ಸ್ ಅಂಡ್ ಗೈಡ್ಸ್, ಆಪ್ತ ಸಮಾಲೋಚನೆ ಮಾಡಲಾಗುತ್ತದೆ.

ಉತ್ತಮ ಪ್ರಯೋಗಾಲಯಗಳು, ಪ್ರತಿಭಾ ಕಾರಂಜಿ, ಕಲಿಕಾಹಬ್ಬ, ನವೋದಯ ಪರೀಕ್ಷೆಗಳಿಗೆ ಮಕ್ಕಳಿಗೆ ವಿಶೇಷ ತರಬೇತಿ, ಯೋಗ, ಕರಾಟೆ, ಸ್ಪೋಕನ್ ಇಂಗ್ಲೀಷ್, ದೇಶಿ ಕಲೆಗಳ ತರಬೇತಿಗಳು, ಗ್ರಂಥಭಂಡಾರ, ಸ್ಮಾರ್ಟ್ ಕ್ಲಾಸ್, ಸಂಗೀತ, ನೃತ್ಯ, ವೃತ್ತಿ ಮಾರ್ಗದರ್ಶನ, ಸೇರಿದಂತೆ ಉತ್ತಮ ಶೌಚಾಲಯಗಳ ವ್ಯವಸ್ಥೆ, ಬಯಲು ರಂಗಮಂದಿರ, ಮುಂತಾದ ಸೌಲಭ್ಯಗಳನ್ನು ಮಕ್ಕಳಿಗೆ ಉಚಿತವಾಗಿ ಒದಗಿಸಲಾಗುತ್ತಿದೆ ಎಂದರು.

ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಮೇಲ್ವಿಚಾರಕ ಕೇಶವಮೂರ್ತಿ ಮಾತನಾಡಿ, ಪೋಷಕರು, ತಮ್ಮ ಮಕ್ಕಳನ್ನು ಶಾಲೆಗೆ ದಾಖಲು ಮಾಡುವ ಮೂಲಕ ಅವರ ಗುಣಾತ್ಮಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು. ಮನೆ, ಮನೆಗೆ, ಶಾಲಾ ಸೌಲಭ್ಯಗಳ ಕುರಿತ ಕರಪತ್ರಗಳನ್ನು ವಿತರಣೆ ಮಾಡಿದರು. ಶಾಲೆಯ ಎಸ್.ಡಿ.ಎಂ.ಸಿ. ಉಪಾಧ್ಯಕ್ಷ ಶ್ರೀನಿವಾಸ್, ಸದಸ್ಯರಾದ ಮಾಲ, ಗೌರೀಶ್ವರಿ, ಹಾಗೂ ಶಾಲೆಯ ಶಿಕ್ಷಕರು ಹಾಜರಿದ್ದರು.

# 'ವೈಯಕ್ತಿಕ ಲಾಲಸೆ ಬಿಟ್ಟು ಸಮಾಜದ ಭವಿಷ್ಯ ಚಿಂತಿಸಿ'

ತುಮಕೂರು

ದಾರಿ ತಪ್ಪುತ್ತಿರುವ ಇಂದಿನ ಯುವ ಪೀಳಿಗೆಗೆ ಮಹನೀಯರ ಮತ್ತು ಸಾಧಕರ ವಿಚಾರಧಾರೆಗಳು ತುಂಬಾ ಪ್ರಸ್ತುತವಾಗುತ್ತಿದ್ದು, ಈ ವಿಚಾರಧಾರೆಗಳ ಮನನದಿಂದಲೇ ಯುವ ಪೀಳಿಗೆಯನ್ನು ಸರಿ ದಾರಿಗೆ ತರುವ ಪ್ರಯತ್ನ ಮಾಡಬೇಕಿದೆ ಎಂದು ಲೇಖಕಿ ಬಾ.ಹ. ರಮಾಕುಮಾರಿ ಅಭಿಪ್ರಾಯಪಟ್ಟರು.

ವರದಕ್ಷಿಣೆ ವಿರೋಧಿ ವೇದಿಕೆ-ಸಾಂತ್ವನ ಕೇಂದ್ರ ತುಮಕೂರು ನಗರ ಇಲ್ಲಿ ಅಂಬೇಡ್ಕರ್ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಚಿಂತನೆ ಮತ್ತು ಸವಾಲುಗಳು ಕುರಿತು ಚರ್ಚೆ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ಯುವ ಜನತೆಯ ನಡವಳಿಕೆಗಳನ್ನು ಗಮನಿಸಿದೆ ಮುಂದೆ ನಮ್ಮ ಸಮಾಜ ಎಲ್ಲಿಗೆ ಹೋಗಿ ನಿಲ್ಲುತ್ತದೆ ಎಂಬ ಆತಂಕ ಎದುರಾಗುತ್ತದೆ. ಈ ನಿಟ್ಟಿನಲ್ಲಿ ಹಿರಿಯರ, ದಾರ್ಶನಿಕರ ವಿಚಾರಧಾರೆಗಳನ್ನು ಹೆಚ್ಚು ಹೆಚ್ಚು ಸಮಾಜಕ್ಕೆ ತಲುಪಿಸುವ ಪ್ರಯತ್ನಗಳು ನಿರಂತರವಾಗಿ ನಡೆಯಬೇಕು ಎಂದರು.

ಡಾ.ಬಿ.ಆರ್.ಅಂಬೇಡ್ಕರ್, ಬಾಬು ಜಗಜೀವನರಾಂ ಇಂತಹ ಮಹನೀಯರೆಲ್ಲ ಇಡೀ ಸಮಾಜದ ಒಳಿತಿಗೆ ತಮ್ಮ ಬದುಕು ಮೀಸಲಿಟ್ಟರು. ಆದರೆ ಈಗಿನ ಆಡಳಿತಗಾರರಲ್ಲಿ ಸಮಾಜದ ಭವಿಷ್ಯದ ದೃಷ್ಟಿಕೋನವೇ ಇಲ್ಲ. ಸ್ವಾರ್ಥಪರ ಬದುಕು ಮತ್ತು ವೈಯಕ್ತಿಕ ಲಾಲಸೆಯಿಂದಾಗಿ ಉತ್ತಮ ಸಮಾಜ ಮುಂದಿನ ದಿನಗಳಲ್ಲಿ ಮತ್ತಷ್ಟು ಹದಗೆಟ್ಟು ಹೋಗುವ ಆತಂಕ ನಮ್ಮ ಕಣ್ಣೆದುರು ಇದೆ. ಈ ಸಮಾಜವನ್ನು ರಕ್ಷಿಸುವ ಕೆಲಸ ಯುವಕರಿಂದ ಆಗಬೇಕಾಗಿದ್ದು, ಅವರಲ್ಲಿ ಕೆಟ್ಟ ಮನೋಭಾವ ತುಂಬುವ ಬದಲು ಒಳ್ಳೆಯ ವಿಚಾರ ಧಾರೆಗಳನ್ನು ತುಂಬಬೇಕಿದೆ ಎಂದರು.




ಅಧ್ಯಕ್ಷತೆ ವಹಿಸಿದ್ದ ಎಂ.ಸಿ.ಲಲಿತ ಅವರು ಮಾತನಾಡಿ ನಮ್ಮ ಸಮಾಜ ಬಹು ಜಾತಿ ಪದ್ಧತಿಯಿಂದಲೇ ಕೆಟ್ಟ ಹೆಸರು ಪಡೆದುಕೊಂಡಿದೆ. ಜಾತಿಯ ವಿಷ ಎಲ್ಲ ಕಡೆ ಪಸರಿಸಿದ್ದು, ಇದರಿಂದಾಗಿ ಮನಸ್ಸುಗಳು ಕೆಡುತ್ತಿವೆ. ಜಾತಿ, ಮತ, ಧರ್ಮ ಬಿಟ್ಟು ಮಾನವ ಕುಲದ ಬಗ್ಗೆ ಯೋಚಿಸಿದಾಗ ಸಮಾಜವನ್ನು ಉತ್ತಮ ಸ್ಥಿತಿಗೆ ತರಲು ಸಾಧ್ಯವಿದೆ ಎಂದರು.

ಈಗ ಎಲ್ಲ ಕಡೆಯೂ ಜಾತಿ ಸಂಘಟನೆಗಳು ತುಂಬಾ ಪ್ರಬಲವಾಗುತ್ತಿವೆ. ಇದು ಒಂದು ರೀತಿಯಲ್ಲಿ ಸಕಾರಾತ್ಮಕವಾದರೂ ಸಮಾಜದ ಅಭಿವೃದ್ಧಿಯ ದೃಷ್ಟಿಯಿಂದ ಒಳ್ಳೆಯದಂತೂ ಅಲ್ಲ. ನಾವೆಲ್ಲರೂ ಜಾತಿಯನ್ನು ಬದಿಗಿಟ್ಟು ಇಡೀ ಸಮಾಜದ ಬಗ್ಗೆ ಯೋಚಿಸಬೇಕಿದೆ. ಅಂಬೇಡ್ಕರ್ ಅವರೆಲ್ಲ ಹಾಗೆ ಯೋಚಿಸಿದ ಪರಿಣಾಮವಾಗಿಯೇ ಇಂದು ನಾವು ಒಂದು ಉತ್ತಮ ಸಂವಿಧಾನ ಪಡೆಯಲು ಸಾಧ್ಯವಾಯಿತು ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಈ ಬಾರಿಯ ಬಾಬು ಜಗಜೀವನರಾಂ ರಾಜ್ಯ ಪ್ರಶಸ್ತಿ ಪುರಸ್ಕೃತ ನರಸೀಯಪ್ಪ ಅವರು ಮಂಡಿಪೇಟೆಯಲ್ಲಿ ಮೂಟೆ ಹೊತ್ತು ಬದುಕು ಸಾಗಿಸಿದ್ದ ನಾನು ಕ್ರಮೇಣ ಜನರ ಪ್ರೀತಿಯಿಂದ ನಗರ ಸಭೆಯ ಸದಸ್ಯನಾದೆ. ನನಗೆ ದೊರೆತ ಅಲ್ಪ ಅಧಿಕಾರದ ಅವಧಿಯಲ್ಲಿ ಸೂರು ಇಲ್ಲದವರಿಗೆ ಒಂದು ನೆಲೆ ಕಲ್ಪಿಸಲು ಪ್ರಯತ್ನಿಸಿದೆ. ಎಲ್ಲರ ಶ್ರಮದ ಫಲವಾಗಿ ಅಂಬೇಡ್ಕರ್ ನಗರ, ನಿರ್ವಾಣಿ ಲೇಔಟ್ ಇವೆಲ್ಲ ಸ್ಥಿರವಾಗಲು ಕಾರಣವಾಯಿತು ಎಂದು ಹೋರಾಟದ ದಿನಗಳನ್ನು ಸ್ಮರಿಸಿದರು.

ವರದಕ್ಷಿಣೆ ವಿರೋಧಿ ವೇದಿಕೆ ಪ್ರಧಾನ ಕಾರ್ಯದರ್ಶಿ ಸಾ.ಚಿ.ರಾಜಕುಮಾರ ಮಾತನಾಡಿ ಮಹಿಳೆಯರ ಸಬಲೀಕರಣ ಹಾಗೂ ಕಾನೂನುಗಳ ಉಗಮಕ್ಕೆ ಅಂಬೇಡ್ಕರ್ ಅವರ ಕೊಡುಗೆ ಅಪಾರವಿದೆ ಎಂದರು.

ವೇದಿಕೆಯ ಪದಾಧಿಕಾರಿಗಳಾದ ಎನ್.ಅಕ್ಕಮ್ಮ, ಮಮತ ರವಿಕುಮಾರ್, ಗಂಗಲಕ್ಷ್ಮಿ, ಸಾಂತ್ವನ ಕೇಂದ್ರದ ಪಾರ್ವತಮ್ಮ, ರಾಧಾಲಕ್ಷ್ಮಿ, ಮಾಣಿಕ್ಯ ಮುಂತಾದವರು ಉಪಸ್ಥಿತರಿದ್ದರು.

# ಶಿಕ್ಷಕರ ಸಂಘದ ಸಾರಥ್ಯಕ್ಕೆ 26 ಮಂದಿ ಆಯ್ಕೆ

ತುಮಕೂರು

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕಕ್ಕೆ ನಡೆದ ಚುನಾವಣೆಯಲ್ಲಿ 9 ಮಹಿಳಾ ಸದಸ್ಯರು ಸೇರಿದಂತೆ 26 ಜನ ಶಿಕ್ಷಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕದ ಚುನಾವಣೆಗೆ ತಾಲೂಕು ಚುನಾವಣಾಧಿಕಾರಿಗಳು, ಡಯಟ್‌ನ ನಿವೃತ್ತ ಉಪನ್ಯಾಸಕರಾದ ಕೆ. ಕೃಷ್ಣಮೂರ್ತಿ ಅವರು 10 ಏಪ್ರಿಲ್ 2026ರಂದು ಅಧಿಸೂಚನೆ ಹೊರಡಿಸಿದ್ದರು. ಇದೇ 14ರ ಮಂಗಳವಾರ ಚುನಾವಣಾ ಪ್ರಕ್ರಿಯೆಗಳು ನಡೆದಿದ್ದು, 9 ಮಹಿಳಾ ಮೀಸಲು ಸೇರಿದಂತೆ ಒಟ್ಟು 26 ಸ್ಥಾನಗಳಿಗೆ ತಲಾ ಒಬ್ಬರೇ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ನಾಮಪತ್ರ ಸಲಿಸಿರುವ ಅಷ್ಟೂ ಸ್ಥಾನಗಳ ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಕೆ.ಕೃಷ್ಣಮೂರ್ತಿ ಘೋಷಿಸಿದ್ದಾರೆ.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕಕ್ಕೆ ಆಯ್ಕೆಯಾದ ನೂತನ ಸದಸ್ಯರುಗಳ ವಿವರ ಇಂತಿದೆ.

ಸಾಮಾನ್ಯ ಕ್ಷೇತ್ರದಿಂದ: ದಿನೇಶ್ ಪಿ.ಎನ್.ಸಹ ಶಿಕ್ಷಕರು ಚಿಕ್ಕಸಾರಂಗಿ, ಹರೀಶ್ ಕೆ.ವಿ, ಸಹಶಿಕ್ಷಕರು ಹರಳೂರು, ಹರೀಶ್‌ಕುಮಾರ್. ಬಿ.ದೈಹಿಕ ಶಿಕ್ಷಣ ಶಿಕ್ಷಕರು ಕೋರ, ಜಗದೀಶ್. ಕೆ.ಹೆಚ್, ಸಹಶಿಕ್ಷಕರು ಬಳ್ಳಗೆರೆ, ಜಯರಾಮ್ ಕೆ.ವಿ. ಸಹಶಿಕ್ಷಕರು ಭೈಚಾಪುರ, ಲೋಕೇಶ್, ಟಿ.ಹೆಚ್, ಸಹಶಿಕ್ಷಕರು ವಡ್ಡರಪಾಳ್ಯ, ಮಲ್ಲಿಕಾರ್ಜುನಯ್ಯ ಹೆಚ್.ಆರ್. ಸಹಶಿಕ್ಷಕರು ಹೆಗ್ಗೆರೆ, ಮಹಮದ್ ಫೈರೋಜ್ ಸಹಶಿಕ್ಷಕರು ಕೋರ, ನಾಗರಾಜು.ಕೆ. ಸಹ ಶಿಕ್ಷಕರು ಬಿಸಿಲಹಳ್ಳಿ, ನಾಗರಾಜು.ಕೆ.ವಿ. ಸಹಶಿಕ್ಷಕರು ಗೋವಿಂದರಾಜಪುರ, ಪದ್ಮರಾಜು.ಡಿ. ಸಹಶಿಕ್ಷಕರು ಮಹಿಮನಪಾಳ್ಯ, ಪರಮೇಶ್. ಸಹಶಿಕ್ಷಕರು ಹೆತ್ತೇನಹಳ್ಳಿ ಪಾಳ್ಯ,ಸತೀಶ್ ಸಹಶಿಕ್ಷಕರು ಯಲ್ಲಾಪುರ, ಸಿದ್ದರಾಜು.ಕೆ.ಆರ್, ಸಹಶಿಕ್ಷಕರು ಗೇರಹಳ್ಳಿ, ಶ್ರೀನಿವಾಸ್.ಟಿ. ಸಹಶಿಕ್ಷಕರು ಕುಚ್ಚಂಗಿಪಾಳ್ಯ, ಶಿವಕುಮಾರ್.ಸಿ. ಸಹಶಿಕ್ಷಕರು ಅಣ್ಣೇನಹಳ್ಳಿ, ತಿಮ್ಮೇಗೌಡ ಪಿ.ಸಹಶಿಕ್ಷಕರು ಉತ್ತರಬಡಾಣೆ ತುಮಕೂರು.

ಮಹಿಳಾ ಮೀಸಲು ಕ್ಷೇತ್ರ: ಜಯಲಕ್ಷ ? ಮಮ್ಮ ಡಿ. ಸಹಶಿಕ್ಷಕಿ ಯಲ್ಲಾಪುರ, ಕೋಮಲ ಆರ್. ಸಹಶಿಕ್ಷಕಿ ಕ್ಯಾತ್ಸಂದ್ರ, ಮಂಗಳ ಗೌರಮ್ಮ ಹೆಚ್.ಎನ್.ಸಹಶಿಕ್ಷಕಿ ಕೊಟ್ಟನಹಳ್ಳಿ, ಮಂಜುಳ ಕೆ.ಎ. ಸಹಶಿಕ್ಷಕಿ ಹನುಮಂತನಗರ, ಮಹಬೂಬ್ ಬಿ.ಸಹಶಿಕ್ಷಕಿ ಗೇರಹಳ್ಳಿ,ನಂದಿನಿ.ಎಸ್.ವಿ, ಸಹಶಿಕ್ಷಕಿ ಕೈದಾಳ, ಸವಿತ. ಆರ್. ಸಹಶಿಕ್ಷಕಿ ಚಿಕ್ಕಹೊಸೂರು, ಸಂಗೀತ.ಡಿ, ಸಹಶಿಕ್ಷಕಿ ಗೂಳರಿವೆ,ಶಾಂತಕುಮಾರಿ.ಕೆ.ಟಿ. ಸಹಶಿಕ್ಷಕಿ ಪಶ್ಚಿಮ ಬಡಾವಣೆ ತುಮಕೂರು. ಅವಿರೋಧವಾಗಿ ಆಯ್ಕೆಯಾದ ಎಲ್ಲಾ ಶಿಕ್ಷಕರನ್ನು ಬಿ.ಇ.ಓ ಹನುಮಂತಪ್ಪ ಹೂ ಗುಚ್ಚ ನೀಡಿ ಅಭಿನಂದಿಸಿ, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡುವಂತೆ ಶುಭ ಹಾರೈಸಿದ್ದಾರೆ.

ದಿನೇಶ್ ಪಿ.ಎನ್.ಸಹ ಶಿಕ್ಷಕರು ಚಿಕ್ಕಸಾರಂಗಿ, ಹರೀಶ್ ಕೆ.ವಿ, ಸಹಶಿಕ್ಷಕರು ಹರಳೂರು, ಹರೀಶ್‌ಕುಮಾರ್. ಬಿ.ದೈಹಿಕ ಶಿಕ್ಷಣ ಶಿಕ್ಷಕರು ಕೋರ, ಜಗದೀಶ್.ಕೆ.ಹೆಚ್, ಸಹಶಿಕ್ಷಕರು ಬಳ್ಳಗೆರೆ, ಜಯರಾಮ್ ಕೆ.ವಿ. ಸಹಶಿಕ್ಷಕರು ಭೈಚಾಪುರ, ಲೋಕೇಶ್, ಟಿ.ಹೆಚ್, ಸಹಶಿಕ್ಷಕರು ವಡ್ಡರಪಾಳ್ಯ, ಮಲ್ಲಿಕಾರ್ಜುನಯ್ಯ ಹೆಚ್. ಆರ್. ಸಹಶಿಕ್ಷಕರು ಹೆಗ್ಗೆರೆ, ಮಹಮದ್ ಫೈರೋಜ್ ಸಹಶಿಕ್ಷಕರು ಕೋರ, ನಾಗರಾಜು.ಕೆ. ಸಹ ಶಿಕ್ಷಕರು ಬಿಸಿಲಹಳ್ಳಿ, ನಾಗರಾಜು. ಕೆ.ವಿ. ಸಹಶಿಕ್ಷಕರು ಗೋವಿಂದರಾಜಪುರ, ಪದ್ಮರಾಜು.ಡಿ. ಸಹಶಿಕ್ಷಕರು ಮಹಿಮನಪಾಳ್ಯ, ಪರಮೇಶ್. ಸಹಶಿಕ್ಷಕರು ಹೆತ್ತೇನಹಳ್ಳಿ ಪಾಳ್ಯ,ಸತೀಶ್ ಸಹಶಿಕ್ಷಕರು ಯಲ್ಲಾಪುರ, ಸಿದ್ದರಾಜು. ಕೆ.ಆರ್, ಸಹಶಿಕ್ಷಕರು ಗೇರಹಳ್ಳಿ, ಶ್ರೀನಿವಾಸ್.ಟಿ. ಸಹಶಿಕ್ಷಕರು ಕುಚ್ಚಂಗಿಪಾಳ್ಯ, ಶಿವಕುಮಾರ್.ಸಿ. ಸಹಶಿಕ್ಷಕರು ಅಣ್ಣೇನಹಳ್ಳಿ, ತಿಮ್ಮೇಗೌಡ ಪಿ.ಸಹಶಿಕ್ಷಕರು ಉತ್ತರಬಡಾಣೆ ತುಮಕೂರು.

ಮಹಿಳಾ ಮೀಸಲು ಕ್ಷೇತ್ರ: ಜಯಲಕ್ಷ ? ಮಮ್ಮ ಡಿ. ಸಹಶಿಕ್ಷಕಿ ಯಲ್ಲಾಪುರ, ಕೋಮಲ ಆರ್. ಸಹಶಿಕ್ಷಕಿ ಕ್ಯಾತ್ಸಂದ್ರ, ಮಂಗಳ ಗೌರಮ್ಮ ಹೆಚ್.ಎನ್.ಸಹಶಿಕ್ಷಕಿ ಕೊಟ್ಟನಹಳ್ಳಿ, ಮಂಜುಳ ಕೆ.ಎ. ಸಹಶಿಕ್ಷಕಿ ಹನುಮಂತನಗರ, ಮಹಬೂಬ್ ಬಿ.ಸಹಶಿಕ್ಷಕಿ ಗೇರಹಳ್ಳಿ,ನಂದಿನಿ.ಎಸ್.ವಿ, ಸಹಶಿಕ್ಷಕಿ ಕೈದಾಳ, ಸವಿತ. ಆರ್. ಸಹಶಿಕ್ಷಕಿ ಚಿಕ್ಕಹೊಸೂರು, ಸಂಗೀತ.ಡಿ, ಸಹಶಿಕ್ಷಕಿ ಗೂಳರಿವೆ,ಶಾಂತಕುಮಾರಿ.ಕೆ.ಟಿ. ಸಹಶಿಕ್ಷಕಿ ಪಶ್ಚಿಮ ಬಡಾವಣೆ ತುಮಕೂರು. ಅವಿರೋಧವಾಗಿ ಆಯ್ಕೆಯಾದ ಎಲ್ಲಾ ಶಿಕ್ಷಕರನ್ನು ಬಿ.ಇ.ಓ ಹನುಮಂತಪ್ಪ ಹೂ ಗುಚ್ಚ ನೀಡಿ ಅಭಿನಂದಿಸಿ, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡುವಂತೆ ಶುಭ ಹಾರೈಸಿದ್ದಾರೆ.

# ಆಟೋ ಚಾಲಕರ ಸಂಕಷ್ಟದ ಮೇಲೆ ಎಲ್‌ಪಿಜಿ ಬೆಲೆ ಏರಿಕೆಯ ಬರೆ

ತುಮಕೂರು

ಗ್ಯಾಸ್ ಅಭಾವದ ಕಾರಣವೊಡ್ಡಿ ನಗರದಲ್ಲಿ ಒಂದೊಂದು ಬಂಕ್‌ಗಳಲ್ಲಿ ಒಂದೊಂದು ರೀತಿಯಲ್ಲಿ ದುಬಾರಿ ಬೆಲೆಯಲ್ಲಿ ಎಲ್‌ಪಿಜಿ ಗ್ಯಾಸ್ ಮಾರಾಟ ಮಾಡುತ್ತಿರುವುದರಿಂದ ಆಟೋ ಚಾಲಕರ ತಮ್ಮ ವ್ಯವಹಾರ ನಿರ್ವಹಣೆ ಕಷ್ಟವಾಗಿದೆ. ಎಲ್ಲಾ ಬಂಕ್‌ಗಳಲ್ಲಿಯೂ ಏಕರೂಪದ ದರ ನಿಗಧಿ ಮಾಡಲು ಜಿಲ್ಲಾಡಳಿತ ಕ್ರಮ ತೆಗೆದುಕೊಳ್ಳಬೇಕು ಎಂದು ಕರುನಾಡ ವಿಜಯಸೇನೆ ರಾಜ್ಯಾಧ್ಯಕ್ಷ ಹೆಚ್.ಎನ್. ದೀಪಕ್ ಒತ್ತಾಯಿಸಿದರು.

ಗುರುವಾರ ನಗರದಲ್ಲಿ ನಡೆದ ಕರುನಾಡು ವಿಜಯಸೇನೆ ಸಂಘಟನೆ ಸೇರ್ಪಡೆ ಹಾಗೂ ಪದಾಧಿಕಾರಿಗಳ ನೇಮಕದ ಸಭೆಯಲ್ಲಿ ಮಾತನಾಡಿದ ಅವರು, ಗ್ಯಾಸ್ ಅಭಾವದಿಂದಾಗಿ ಆಟೋಚಾಲಕರ ವ್ಯವಹಾರ



ಕಷ್ಟವಾಗಿ ಅವರು ಜೀವನ ನಿರ್ವಹಣೆ ಮಾಡಲಾಗುತ್ತಿಲ್ಲ. ಪಡೆದ ಸಾಲದ ಕಂತು, ಬಡ್ಡಿ ಕಟ್ಟಲಾಗುತ್ತಿಲ್ಲ. ಸಾಲಗಾರರ ಕಿರುಕುಳ ಹೆಚ್ಚಾಗಿದೆ. ಕೊರೋನಾ ಸಂದರ್ಭದಲ್ಲಿ ತುರ್ತು ಕ್ರಮ ತೆಗೆದುಕೊಂಡಂತೆ ಪ್ರಾಚ್ಯ ದೇಶಗಳ ಯುದ್ಧ ಮುಗಿಯುವವರೆಗೂ ಆಟೋ ಚಾಲಕರ ಮೇಲೆ ಒತ್ತಡ ಹಾಕಿ ಸಾಲ ವಸೂಲಿ ಮಾಡದಂತೆ ಬ್ಯಾಂಕ್ ಹಾಗೂ ಹಣಕಾಸು ಸಂಸ್ಥೆಗಳಿಗೆ ಸೂಚನೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಸಂಘಟನೆಗಳು ಸಮಾಜಮುಖಿಯಾಗಿ ಕೆಲಸ ಮಾಡಬೇಕು. ಕೇವಲ ಹೋರಾಟ, ಕಲ್ಲು ಹೊಡೆಯುವುದು, ಬೆಂಕಿ ಹಚ್ಚುವುದಷ್ಟೇ ಸಂಘಟನೆಗಳ ಗುರಿಯಲ್ಲ, ಸಮಾಜಕ್ಕೆ ನೆರವಾಗುವಂತಹ ಕಾರ್ಯಕ್ರಮಗಳನ್ನು ಮಾಡಬೇಕು. ಕರುನಾಡ ವಿಜಯಸೇನೆಯಿಂದ ಇದೂವರೆಗೆ 130 ಸರ್ಕಾರಿ ಶಾಲೆಗಳಿಗೆ ಬಣ್ಣ ಬಳಿಯುವ ಕೆಲಸ ಮಾಡಿದೆ, 500 ಶಾಲೆಗಳಿಗೆ ಬಣ್ಣ ಹೊಡೆದು, ಅಗತ್ಯ ಸೌಕರ್ಯಗಳನ್ನು ಒದಗಿಸಿ ಶಾಲೆಗಳ ಪುನಶ್ಚೇತನ ಮಾಡುವ ಕಾರ್ಯಕ್ರಮ ರೂಪಿಸಿದೆ. ಸರ್ಕಾರಿ ಶಾಲೆಗಳಲ್ಲಿ ಹೆಣ್ಣುಮಕ್ಕಳಿಗೆ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಅಲ್ಲದೆ, ಆರೋಗ್ಯ ಶಿಬಿರ, ಉದ್ಯೋಗಮೇಳ ಮೊದಲಾದ ಹಲವು ಸಮಾಜಮುಖಿ ಕಾರ್ಯಗಳಲ್ಲಿ ವಿಜಯಸೇನೆ ತೊಡಗಿಕೊಂಡಿದೆ ಎಂದರು.

ಆಟೋಚಾಲಕ ಬದುಕು ಸಂಕಷ್ಟದಲ್ಲಿದೆ. ಈಗ ಎಲ್‌ಪಿಜಿ ಸಮಸ್ಯೆ ಜೊತೆಗೆ ಹೆಚ್ಚಿನ ಬಡ್ಡಿಗೆ ಸಾಲಪಡೆದು ತೊಂದರೆಪಡುವುದನ್ನು ತಪ್ಪಿಸಲು ಕರುನಾಡ ವಿಜಯಸೇನೆ ಆಟೋಚಾಲಕರ ಕಲ್ಯಾಣನಿಧಿ ಸ್ಥಾಪಿಸುವ ಉದ್ದೇಶ ಹೊಂದಿದೆ. ಇದರಿಂದ ಆಟೋಚಾಲಕರು ಸಣ್ಣ ಪ್ರಮಾಣದಲ್ಲಿ ಸಾಲಸೌಲಭ್ಯ ಪಡೆಯಲು ಸಹಾಯವಾಗುತ್ತದೆ ಎಂದು ಹೆಚ್.ಎನ್. ದೀಪಕ್ ಹೇಳಿದರು.

ಈ ವೇಳೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷರಾಗಿ ಕೆ.ಗಂಗಾಧರ್ ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ವಿಜಯಸೇನೆ ರಾಜ್ಯ ಉಪಾಧ್ಯಕ್ಷ ಸಚ್ಚಿದಾನಂದ, ರಾಜ್ಯ ಕಾರ್ಯದರ್ಶಿ ರಂಜನ್, ಮಹಿಳಾ ಘಟಕ ರಾಜ್ಯ ಕಾರ್ಯದರ್ಶಿ ರಾಧಾ ಗಂಗಾಧರ್, ಜಿಲ್ಲಾಧ್ಯಕ್ಷೆ ಯಾಸ್ಮೀನ್ ತಾಜ್, ಆಟೋ ಘಟಕ ಜಿಲ್ಲಾಧ್ಯಕ್ಷ ತಿಪ್ಪೇಶ್, ನಗರ ಅಧ್ಯಕ್ಷ ರಾಕೇಶ್, ಎಸ್ಸಿ-ಎಸ್ಟಿ ಘಟಕ ಅಧ್ಯಕ್ಷ ನಾಗರಾಜು, ಮುಖಂಡರಾದ ಹರೀಶ್, ಕಾವ್ಯ, ರುದ್ರೇಶ್ ಮೊದಲಾದವರು ಭಾಗವಹಿಸಿದ್ದರು.

# ಜಾನಪದ ಗೀತೆಗಳ ಗಾಯನಕ್ಕೆ ಮಾರುಹೋದ ಚಿನ್ನಾಪುರ ಗ್ರಾಮಸ್ಥರು

ಕೋಲಾರ

ತಾಲೂಕಿನ ಮಾರ್ಜೇನಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಗೆ ಸೇರಿದ ಚಿನ್ನಾಪುರ ಗ್ರಾಮದಲ್ಲಿ ನೆಲೆಸಿರುವ ಶ್ರೀಮಾತೆ ಸುಗ್ಗಲಮ್ಮ ದೇವಿ ನಾಗದೇವತೆ ದೇವಾಲಯದ ಆವರಣದಲ್ಲಿ ದಿ:10/04/2026 ರಂದು ಬೆಳಿಗ್ಗೆ 10-00 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಕಾರದೊಂದಿಗೆ ವಿಶೇಷ ಘಟಕ ಯೋಜನೆಯಡಿಯಲ್ಲಿ ಜಾನಪದ ಕಲಾಮೇಳ ಕಾರ್ಯಕ್ರಮವನ್ನು ಶ್ರೀ ವೆಂಕಟೇಶ್ವರ ಗ್ರಾಮೀಣಾಭಿವೃದ್ಧಿ ಕಲಾವಿದರ ಕ್ಷೇಮಾಭಿವೃದ್ಧಿ ಸಂಘ (ರಿ) ಇವರ ಸಂಯುಕ್ತಾಶ್ರಮದಲ್ಲಿ ಕಾರ್ಯಕ್ರಮ ನಡೆಸಲಾಯಿತು. ಒಕ್ಕೂಟದ ಅಧ್ಯಕ್ಷ ಆರ್.ಕೃಷ್ಣಸ್ವಾಮಿ ರವರು ಉದ್ಘಾಟನೆಯಲ್ಲಿ ಪ್ರಧಾನ ಆರ್ಚಕ ಸುನಿಲ್‌ಕುಮಾರ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕಲೆ, ಸಂಸ್ಕೃತಿ, ಜಾನಪದ ನಾಟಕ ಕಲೆಗಳ ಬಗ್ಗೆ ಕಲಾವಿದರಿಗೆ ಅರಿವು ಮೂಡಿಸಿದರು.

ಮಾರ್ಜೇನಹಳ್ಳಿ ಗ್ರಾಮಪಂಚಾಯಿತಿ ಮಾಜಿ ಸದಸ್ಯ ಎಂ.ನಾರಾಯಣಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ವೇಮಗಲ್ ಸರ್ಕಾರಿ ಪ್ರೌಢಶಾಲೆ ಮುಖೋಪಾಧ್ಯಾಯ ಪಿ.ಕೃಷ್ಣಪ್ಪ ಮಾತನಾಡಿ, ಜಾನಪದ ಕಲೆ, ಸಂಗೀತ ಕಲೆ, ನಾಟಕ ಕಲೆಗಳ ಬಗ್ಗೆ ಕಲಾವಿದರ ಬಗ್ಗೆ ತಿಳುವಳಿಕೆ ನೀಡಿದರು. ಸಂಗೀತದಿಂದ ಮನುಷ್ಯನಿಗೆ ಕಾಯಿಲೆಗಳು ಗುಣಮುಖವಾಗುತ್ತದೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಒಕ್ಕೂಟದ ಅಧ್ಯಕ್ಷ ಆರ್.ಕೃಷ್ಣಸ್ವಾಮಿ, ಎನ್.ಚಂದ್ರಪ್ಪ, ವೆಂಕಟಸ್ವಾಮಿ, ಮುನಿನಾರಾಯಣಪ್ಪ ಇವರು ಭಾಗವಹಿಸಿದರು. ಈ ಕಾರ್ಯಕ್ರಮಕ್ಕೆ ಒಂದು ಲಕ್ಷ ಇಪ್ಪತ್ತು ಸಾವಿರ ರೂಗಳು ಖರ್ಚು ವೆಚ್ಚಗಳು ಆಗಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸದ ಕಲಾತಂಡದ ಕಲಾವಿದರು ಎಸ್.ವೆಂಕಟೇಶ್ ಮತ್ತು ತಂಡ ಸಂಗೀತ ಕಛೇರಿ ಕಾರ್ಯಕ್ರಮ ನಡೆಸಿಕೊಟ್ಟರು, ಎಂ.ವೆಂಕಟೇಶಪ್ಪ ಮತ್ತು ತಂಡ ಇರಗಸಂದ್ರ ಸುಗಮಸಂಗೀತ ಕಾರ್ಯಕ್ರಮ ಬಹಳ ಚೆನ್ನಾಗಿ ನಡೆಸಿಕೊಟ್ಟರು. ಆರ್. ಕೆ.ಸ್ವಾಮಿ ಮತ್ತು ತಂಡ ಮೈಸೂರು ಜಾನಪದಗೀತೆಗಳ ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಎನ್. ಚಂದ್ರಪ್ಪ ಮತ್ತು ತಂಡ ಮೈಸೂರು ಮಹೇದಶ್ವರ ಸ್ವಾಮಿ ಭಕ್ತಿಗೀತೆಗಳ ಕಾರ್ಯಕ್ರಮ ನಡೆಸಿಕೊಟ್ಟರು. ಕೆ.ಶ್ರೀಕಾಂತ್ ಮತ್ತು ತಂಡ ಸಂಗೀತ ಹಾಡುಗಾರಿಕೆ ಕಾರ್ಯಕ್ರಮ ನಡೆಸಿಕೊಟ್ಟರು, ಶ್ರೀಮತಿ ಪ್ರಭಾವತಮ್ಮ ಮತ್ತು ತಂಡ ಅಣ್ಣಿಹಳ್ಳಿ ಪುರಂದರದಾಸರ ದೇವರ ನಾಮಗಳ ಕಾರ್ಯಕ್ರಮ ನಡೆಸಿಕೊಟ್ಟರು. ಸಿ.ಎ.ಅಕ್ಷಯ್ ಮತ್ತು ತಂಡ ತಮಟೆ ವಾದನ ಕಾರ್ಯಕ್ರಮ ನಡೆಸಿಕೊಟ್ಟರು. ಶ್ರೀಮತಿ ಮುನಿವೆಂಕಟಮ್ಮ ಮತ್ತು ತಂಡ ಯಟಿಕೋಡಿ ಪುರಂದರದಾಸರ ದೇವರ ನಾಮಗಳ ಕಾರ್ಯಕ್ರಮ ನಡೆಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ ಇನ್ನೂ ಹಲವಾರು ಕಲಾವಿದರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು ಈ ಜಾನಪದ ಕಲಾಮೇಳ ಕಾರ್ಯಕ್ರಮ ಬಹಳ ಚೆನ್ನಾಗಿ ನಡೆಯಿತು. ಪ್ರಾರ್ಥನೆ ಸಿ.ವಿ.ದೇವರಾಜ, ನಿರೂಪಣೆ ಆರ್. ಕೃಷ್ಣಸ್ವಾಮಿ, ಸ್ವಾಗತ ಕೋರಿದವರು ನಾಗರತ್ನಮ್ಮ, ಈ ಜಾನಪದ ಕಲಾಮೇಳ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತೆಂದು ತಿಳಿಸಿದರು.

ಭಾರತ ಸಾರಥಿ
18/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಶಿಕ್ಷಕರ ಸಂಘದ ಚುನಾವಣೆ: 12 ಜನ ಆಯ್ಕೆ

ಕೊರಟಗೆರೆ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕೊರಟಗೆರೆ ತಾಲೂಕು ಘಟಕದ 2026–31ನೇ ಸಾಲಿನ ಕಾರ್ಯಕಾರಿ ಸಮಿತಿಗೆ ನಡೆದ ಚುನಾವಣೆಯಲ್ಲಿ ಎಲ್ಲಾ 12 ಸ್ಥಾನಗಳಿಗೆ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಐಕ್ಯತೆ ಪ್ರದರ್ಶಿಸಿದ್ದಾರೆ.

ಸಂಘದ 8 ಪುರುಷ ಹಾಗೂ 4 ಮಹಿಳಾ ಸದಸ್ಯ ಸ್ಥಾನಗಳು ಸೇರಿದಂತೆ ಒಟ್ಟು 12 ಸ್ಥಾನಗಳಿಗೆ ಆರಂಭದಲ್ಲಿ 19 ಮಂದಿ ಸ್ಪರ್ಧಾಕಾಂಕ್ಷಿಗಳು ನಾಮಪತ್ರ ಸಲ್ಲಿಸಿದ್ದರು. ಆದರೆ, ನಾಮಪತ್ರ ವಾಪಸ್ ಪಡೆಯುವ ಅಂತಿಮ ದಿನದಂದು ಶಿಕ್ಷಕ ಮುಖಂಡರು ನಡೆಸಿದ ಸುದೀರ್ಘ ಸಮಾಲೋಚನೆ ಫಲಪ್ರದವಾಗಿದ್ದು, 9 ಮಂದಿ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆದರು.

ಈ ಹಿನ್ನೆಲೆಯಲ್ಲಿ ಉಳಿದ 12 ಮಂದಿ ಅಭ್ಯರ್ಥಿಗಳು ಮುಂದಿನ ಐದು ವರ್ಷಗಳ ಅವಧಿಗೆ ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಚನ್ನವೀರಯ್ಯ ಘೋಷಿಸಿದರು.ಸಂಘದ 8 ಪುರುಷ ಹಾಗೂ 4 ಮಹಿಳಾ ಸದಸ್ಯ ಸ್ಥಾನಗಳು ಸೇರಿದಂತೆ ಒಟ್ಟು 12 ಸ್ಥಾನಗಳಿಗೆ ಆರಂಭದಲ್ಲಿ 19 ಮಂದಿ ಸ್ಪರ್ಧಾಕಾಂಕ್ಷಿಗಳು ನಾಮಪತ್ರ ಸಲ್ಲಿಸಿದ್ದರು. ಆದರೆ, ನಾಮಪತ್ರ ವಾಪಸ್ ಪಡೆಯುವ ಅಂತಿಮ ದಿನದಂದು ಶಿಕ್ಷಕ ಮುಖಂಡರು ನಡೆಸಿದ ಸುದೀರ್ಘ ಸಮಾಲೋಚನೆ ಫಲಪ್ರದವಾಗಿದ್ದು, 9 ಮಂದಿ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆದರು. ಈ ಹಿನ್ನೆಲೆಯಲ್ಲಿ ಉಳಿದ 12 ಮಂದಿ ಅಭ್ಯರ್ಥಿಗಳು ಮುಂದಿನ ಐದು ವರ್ಷಗಳ ಅವಧಿಗೆ ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಚನ್ನವೀರಯ್ಯ ಘೋಷಿಸಿದರು.

ನೌಕರರ ಸಂಘದಿಂದ ಅಭಿನಂದನೆ:

ಶಿಕ್ಷಕರ ಸಂಘಕ್ಕೆ ಅವಿರೋಧವಾಗಿ ಆಯ್ಕೆಯಾದ ನೂತನ ಪದಾಧಿಕಾರಿಗಳನ್ನು ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹೆಚ್.ಎಂ. ರುದ್ರೇಶ್ ಅವರು ಅಭಿನಂದಿಸಿದ್ದಾರೆ. ಸಂಘದ ಬಲವರ್ಧನೆಗೆ ಮತ್ತು ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ನೂತನ ಸಮಿತಿಯು ಸಮರ್ಥವಾಗಿ ಕೆಲಸ ಮಾಡಲಿ ಎಂದು ಅವರು ಆಶಿಸಿದ್ದಾರೆ.

# ಸ್ತ್ರೀಶಕ್ತಿಗೆ ರಾಜಕೀಯ ಬಲ: 33% ಮೀಸಲಾತಿ ಜಾರಿಗೆ ಬಿಜೆಪಿ ಹರ್ಷ

ತುಮಕೂರು

ಮಹಿಳಾ ಮೀಸಲಾತಿ ವಿರೋಧಿಸುವ ಪುರುಷ ಪ್ರಧಾನ ಮನಸ್ಥಿತಿಗಳನ್ನು ಮೆಟ್ಟಿನಿಂತು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಮಹಿಳೆಯರಿಗೆ ಶೇಕಡ 33ರಷ್ಟು ಮೀಸಲಾತಿಯ ನಾರಿಶಕ್ತಿ ವಂದನ್ ಅಧಿನಿಯಮ ಜಾರಿಗೆ ತರಲು ಹೊರಟಿರುವುದು ಸ್ವಾಗತಾರ್ಹ. ಮಹಿಳೆಯರ ರಾಜಕೀಯ ಸ್ಥಾನಮಾನಕ್ಕಾಗಿ ಹಲವು ವರ್ಷಗಳಿಂದ ನಡೆದ ಹೋರಾಟಕ್ಕೆ ಮೋದಿ ನ್ಯಾಯ ಒದಗಿಸಲಿದ್ದಾರೆ ಎಂದು ರಾಜ್ಯ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಸಿ. ಮಂಜುಳಾ ಹೇಳಿದರು.

ಗುರುವಾರ ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ಮೋದಿಯವರು ಆದಿಚುಂಚನಗಿರಿಗೆ ಬಂದು ಕಾಲಭೈರವೇಶ್ವರನ ಹಾಗೂ ಚಾಮುಂಡೇಶ್ವರಿಯ ಆಶೀರ್ವಾದ



ಪಡೆದುಹೋಗಿ ಲೋಕಸಭೆಯ ವಿಶೇಷ ಅಧಿವೇಶನದಲ್ಲಿ ನಾರಿಶಕ್ತಿ ವಂದನ್ ಅಧಿನಿಯಮ ಜಾರಿ ಮಾಡುತ್ತಿದ್ದಾರೆ. ಸೀತೆಯನ್ನು ರಾಮ, ದ್ರೌಪದಿಯನ್ನು ಕೃಷ್ಣ ರಕ್ಷಿಸಿದಂತೆ ರಾಜಕೀಯ ಸ್ಥಾನಮಾನ ಕಲ್ಪಿಸುವ ಮೂಲಕ ಮೋದಿಯವರು ದೇಶದ ಮಹಿಳೆಯರ ರಕ್ಷಣೆಯಲ್ಲಿದ್ದಾರೆ ಎಂದು ಅಭಿನಂದಿಸಿದರು.

ಲೋಕಸಭೆ ಹಾಗೂ ರಾಜ್ಯ ಶಾಸನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ 33ರಷ್ಟು ಸ್ಥಾನ ಮೀಸಲಾತಿ ನೀಡುವುದರಿಂದ ಯಾವುದೇ ಸಮಸ್ಯೆಯಾಗುವುದಿಲ್ಲ, ಯಾರ ಹಕ್ಕನ್ನೂ ಕಸಿದುಕೊಂಡಂತಾಗುವುದಿಲ್ಲ. ಲೋಕಸಭೆಯ ಕ್ಷೇತ್ರ ಮರುವಿಂಗಡನೆಯಿಂದ 543 ಕ್ಷೇತ್ರಗಳ ಬದಲು 816 ಕ್ಷೇತ್ರಗಳಾಗುತ್ತವೆ. ಹೆಚ್ಚುವರಿ ಕ್ಷೇತ್ರಗಳು ಮಹಿಳಾ ಮೀಸಲಾತಿ ಪ್ರಮಾಣಕ್ಕೆ ಪೂರಕವಾಗಿರುತ್ತವೆ ಎಂದು ಹೇಳಿದ ಮಂಜುಳಾ, ಮಹಿಳಾ ಮೀಸಲಾತಿ ಬಗ್ಗೆ ಕಾಂಗ್ರೆಸ್ ನಾಯಕರು ಒಂದಲ್ಲೊಂದು ರೀತಿಯಲ್ಲಿ ಆಕ್ಷೇಪ ಮಾಡುತ್ತಲೇ ಬಂದಿದ್ದಾರೆ. ಅವರು ಮಹಿಳೆಯರು ರಾಜಕೀಯ ಸ್ಥಾನ ಪಡೆಯವುದನ್ನು ಸಹಿಸುತ್ತಿಲ್ಲ ಎಂದು ಟೀಕಿಸಿದರು.

ಇಂದು ಎಲ್ಲಾ ಕ್ಷೇತ್ರಗಳಲ್ಲಿ ಸಮರ್ಥವಾಗಿ ಕೆಲಸ ಮಾಡುತ್ತಿರುವ ಮಹಿಳೆಯರಿಗೆ ದೇಶದ, ರಾಜ್ಯಗಳ ಆಡಳಿತ ಚುಕ್ಕಾಣಿ ಹಿಡಿಯುವ ಅರ್ಹತೆ, ಸಾಮರ್ಥ್ಯವಿದೆ ಎಂಬ ಅಚಲ ವಿಶ್ವಾಸ ಹೊಂದಿರುವ ಪ್ರಧಾನಿ ಮೋದಿಯವರು ಮಹಿಳಾ ಮೀಸಲಾತಿಯ ಎಲ್ಲಾ ಅಡ್ಡಿಗಳನ್ನು ನಿವಾರಣೆ ಮಾಡಿ ಜಾರಿಗೆ ತರಲು ಹೊರಟಿದ್ದಾರೆ. ಇದು ಅವರು ದೇಶದ ಮಹಿಳೆಯರಿಗೆ ಸಲ್ಲಿಸುವ ಗೌರವವಾಗಿದೆ ಎಂದು ಮಂಜುಳಾ ಹೇಳಿದರು.

ಮಹಿಳಾ ಮೀಸಲಾತಿ ಸಂಬಂಧ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾದ್ಯಂತ ವಿವಿಧ ಕಾರ್ಯಕ್ರಮಗಳ ಮೂಲಕ ಮಹಿಳೆಯರಲ್ಲಿ ರಾಜಕೀಯ ಪ್ರಜ್ಞೆ, ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ. ಮಹಿಳೆಯರು ರಾಜಕೀಯ ಸ್ಥಾನಮಾನ ಪಡೆದು ಆಡಳಿತ ಚುಕ್ಕಾಣಿ ಹಿಡಿಯುವುದರಿಂದ ಆಡಳಿತಾತ್ಮಕವಾಗಿ ಹೊಸ ಬದಲಾವಣೆ ನಿರೀಕ್ಷಿಸಬಹುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ವಕ್ತಾರರಾದ ಶ್ರೀವಲ್ಲಿ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಸುಮಿತ್ರಾದೇವಿ, ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಜ್ಯೋತಿ ತಿಪ್ಪೇಸ್ವಾಮಿ, ಮಹಿಳಾ ಮೋರ್ಚಾ ನಗರ ಅಧ್ಯಕ್ಷೆ ವಸಂತ ಸುದರ್ಶನ್, ಪ್ರಧಾನ ಕಾರ್ಯದರ್ಶಿಗಳಾದ ನಾಗರತ್ನ, ಮಂಜುಳಾ ಲೋಕೇಶ್ ಹಾಜರಿದ್ದರು.

# 3 ಕೆ.ಜಿ ಗಾಂಜಾ ಸಹಿತ ಒಡಿಸ್ಸಾ ಕಿರಾತಕ ಸೆರೆ

ಕೆಜಿಎಫ್

ಇಲ್ಲಿನ ಪೊಲೀಸ್ ಜಿಲ್ಲೆಯ ಬಂಗಾರಪೇಟೆ ಪೊಲೀಸರು ಗಾಂಜಾ ಮಾರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಆರೋಪಿಯನ್ನು ಬಂಧಿಸಿ, ರೂ. 1,75,000 ಮೌಲ್ಯದ 3 ಕೆ.ಜಿ 180 ಗ್ರಾಂ ಗಾಂಜಾವನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಗಾರಪೇಟೆ ಪೊಲೀಸ್ ಠಾಣೆ ಸರಹದ್ದು, ಹುಣಸನಹಳ್ಳಿ ಬ್ರಿಡ್ಜ್ ಬಳಿ ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ಬಂದಂತಹ ಖಚಿತ ಮಾಹಿತಿಯನ್ನು ಆಧರಿಸಿ, ಬಂಗಾರಪೇಟೆ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ರವಿಕುಮಾರ್ ಮತ್ತು ಸಿಬ್ಬಂದಿಗಳು ಕೂಡಲೆ ದಾಳಿ ನಡೆಸಿ, ಒಡಿಸ್ಸಾ ರಾಜ್ಯದ ಗಜಪತಿ ಜಿಲ್ಲೆಯ ವಾಸಿ ಸಿಮನ್ ಸಬರ್ ಬಿನ್ ಲಿಂಪೋ ಸಬರ್, 29 ವರ್ಷ ಎಂಬಾತನನ್ನು ಬಂಧಿಸಿ, ಆತನಿಂದ ರೂ. 1,75,000 ಮೌಲ್ಯದ 3 ಕೆ.ಜಿ. 180 ಗ್ರಾಂ ಗಾಂಜಾ, ಒಂದು ಬ್ಯಾಗ್ ಮತ್ತು ಒಂದು ಮೊಬೈಲ್ ಫೋನ್‌ನ್ನು ವಶಪಡಿಸಿಕೊಂಡು, ಆರೋಪಿಯ ವಿರುದ್ದ ಮೊ.ಸಂ. 95/2026 ಕಲಂ 20 (b)(ii)(B) NDPS ರೀತ್ಯಾ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ.



ಡಿವೈಎಸ್‌ಪಿ ವಿ.ಲಕ್ಷ್ಮಯ್ಯ ಮತ್ತು ಬಂಗಾರಪೇಟೆ ಇನ್ಸ್‌ಪೆಕ್ಟರ್ ರವಿಕುಮಾರ್.ಸಿ ರವರ ಮಾರ್ಗದರ್ಶನದಲ್ಲಿ ಆರೋಪಿಯನ್ನು ಬಂಧಿಸಿ, ಗಾಂಜಾವನ್ನು ವಶಪಡಿಸಿಕೊಳ್ಳುವಲ್ಲಿ ಪಿ.ಎಸ್.ಐ ರಾಜಣ್ಣ ಹಾಗೂ ಸಿಬ್ಬಂದಿಗಳಾದ ವೇಣುಗೋಪಾಲ್, ಅನಿಲ್, ಸುನಿಲ್, ಮುನಿರಾಜು, ಮಹೇಂದ್ರ ಕುಮಾರ್, ಮಂಜುನಾಥ ರವರುಗಳನ್ನೊಳಗೊಂಡ ತಂಡವು ಯಶಸ್ವಿಯಾಗಿದ್ದು, ತಂಡವನ್ನು ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು

# ‘ಗುಣಮಟ್ಟದ ಹಾಲು ಪೂರೈಸಿ, ಲಾಭ ಪಡೆಯಿರಿ’

ಬೂದಿಕೋಟೆ


ತಾಲೂಕಿನ ಭುವನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜಿಲ್ಲಾ ಪಂಚಾಯತಿಯ ಮಾಜಿ ಸದಸ್ಯ ಬಿ.ವಿ. ಕೃಷ್ಣ ಹಾಗೂ ಉಪಾಧ್ಯಕ್ಷರಾಗಿ ಸುಮಿತ್ರ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕಳೆದ 4 ರಂದು ಸಂಘದ 12 ಮಂದಿ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದರು. ಇದರ ಮುಂದುವರಿದ ಭಾಗವಾಗಿ ಗುರುವಾರ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಪಡಿಸಲಾಗಿತ್ತು. ಬೇರೆ ಯಾರೂ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಬಿ.ವಿ. ಕೃಷ್ಣ ಮತ್ತು ಸುಮಿತ್ರ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಬಾಲಕೃಷ್ಣಪ್ಪ ಅಧಿಕೃತವಾಗಿ ಘೋಷಿಸಿದರು.

ಆಯ್ಕೆಯ ನಂತರ ಮಾತನಾಡಿದ ನೂತನ ಅಧ್ಯಕ್ಷ ಬಿ.ವಿ. ಕೃಷ್ಣ, “ನಮ್ಮ ಗ್ರಾಮದಲ್ಲಿ 25 ವರ್ಷಗಳ ಹಿಂದೆಯೇ ಡೇರಿ ಆರಂಭವಾಗಬೇಕಿತ್ತು. ಹಲವು ಕಾರಣಗಳಿಂದ ಅದು ಸಾಧ್ಯವಾಗಿರಲಿಲ್ಲ. ಈಗ ನೂತನವಾಗಿ ಸಂಘ ಅಸ್ತಿತ್ವಕ್ಕೆ ಬಂದಿದ್ದು, ಮೊದಲ ಅಧ್ಯಕ್ಷನಾಗಿ ಸೇವೆ ಸಲ್ಲಿಸಲು ಅವಕಾಶ ನೀಡಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ,” ಎಂದರು.

“ಎಲ್ಲಾ ನಿರ್ದೇಶಕರನ್ನು ವಿಶ್ವಾಸಕ್ಕೆ ಪಡೆದು ಪಾರದರ್ಶಕ ಆಡಳಿತ ನೀಡಲಾಗುವುದು. ಶೀಘ್ರದಲ್ಲೇ ಸಂಘಕ್ಕೆ ನೂತನ ಕಟ್ಟಡ ನಿರ್ಮಿಸುವ ಗುರಿ ಹೊಂದಲಾಗಿದೆ. ಕೆಎಂಎಫ್ ಒಕ್ಕೂಟದಿಂದ ಬರುವ ಸವಲತ್ತುಗಳನ್ನು ನೇರವಾಗಿ ರೈತರಿಗೆ ತಲುಪಿಸಲಾಗುವುದು. ರೈತರು ಗುಣಮಟ್ಟದ ಹಾಲನ್ನು ಪೂರೈಸುವ ಮೂಲಕ ಸಂಘದ ಅಭಿವೃದ್ಧಿಗೆ ಕೈಜೋಡಿಸಬೇಕು,” ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ನಾರಾಯಣ ಮೂರ್ತಿ, ಶಂಕರಪ್ಪ, ಮುನಿರಾಜು, ಸೀನಪ್ಪ, ನಾರಾಯಣಪ್ಪ, ರಾಜಪ್ಪ, ನಾಗರಾಜ್, ಮುನಿರಾಜು ಸಿ., ಸರಸ್ವತಮ್ಮ, ಅನುಸೂಯಮ್ಮ, ಕಾರ್ಯದರ್ಶಿ ಗೋವಿಂದಪ್ಪ ಹಾಗೂ ಮುಖಂಡರು ಉಪಸ್ಥಿತರಿದ್ದರು.



# ಸಂವಿಧಾನದಿಂದಾಗಿ ಮಾತ್ರವೇ ನಮಗೆ ನೈಜ ಸ್ವಾತಂತ್ರ್ಯ ಸಿಕ್ಕಿದೆ: ಕುಲಪತಿ ಪ್ರೊ.ಬಿ.ಕೆ.ರವಿ

ಕೋಲಾರ

ಭಾರತವು ಶ್ರೇಣೀಕೃತ ವರ್ಗ ಸಂಘರ್ಷ ಹಾಗೂ ಅವಕಾಶ ವಂಚಿತರ ನೋವು ಇರುವ ರಾಷ್ಟ್ರವಾಗಿದೆ. ಇಂತಹ ಸಮಾಜದಲ್ಲಿ ಸಮಾನತೆಯ ಚಿಂತನೆಯೊಂದಿಗೆ ಅಂಬೇಡ್ಕರ್ ಅವರು ನಮಗೆ ಸಂವಿಧಾನವನ್ನು ನೀಡಿದ್ದಾರೆ. ಸಂವಿಧಾನ ಜಾರಿಯಾದ ನಂತರವೇ ನಮಗೆಲ್ಲರಿಗೂ ನಿಜವಾದ ಸ್ವಾತಂತ್ರ್ಯ ಲಭಿಸಿದೆ, ಎಂದು ಬೆಂಗಳೂರು ಉತ್ತರ ವಿವಿ ಕುಲಪತಿ ಪ್ರೊ. ಬಿ.ಕೆ.ರವಿ ಅಭಿಪ್ರಾಯಪಟ್ಟರು.

ಗುರುವಾರ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸುವರ್ಣಗಂಗೆ ಆವರಣದಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರ್‌ಅವರ 135ನೇ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ಗುರುವಾರ ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಮತ್ತು ಕುಲಪತಿಯಾಗಿ ನಾನು ಇಲ್ಲಿ ಧೈರ್ಯವಾಗಿ ಮಾತನಾಡಲು ಸಂವಿಧಾನವೇ ಕಾರಣ. ಸಂವಿಧಾನದಿಂದಾಗಿ ಎಲ್ಲರಿಗೂ ಎಲ್ಲ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಸಮಾನ ಅವಕಾಶ ಲಭಿಸಿದೆ ಎಂದರು.

ಯಾವುದೇ ಪ್ರಜೆ ಯಾವುದೇ ಉನ್ನತ ಹುದ್ದೆಯನ್ನು ಅಲಂಕರಿಸಬಹುದಾದ ಸೌಂದರ್ಯ ನಮ್ಮ ಪ್ರಜಾಪ್ರಭುತ್ವಕ್ಕಿದೆ. ಆದರೆ, ಇಂದಿಗೂ ಮಹಿಳೆಯರು, ದಲಿತರು ಹಾಗೂ ನಿರ್ಗತಿಕರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳು ನಿಂತಿಲ್ಲ. ಸಮಸಮಾಜದ ನಿರ್ಮಾಣ ಇನ್ನೂ ಪೂರ್ಣಗೊಂಡಿಲ್ಲ ಎಂದು ವಿಷಾದಿಸಿದರು.

ಜನಸಂಖ್ಯೆಗೆ ಅನುಗುಣವಾಗಿ ಎಲ್ಲರಿಗೂ ಆರ್ಥಿಕ ಮತ್ತು ಸಾಮಾಜಿಕ ಪ್ರಾತಿನಿಧ್ಯ ಸಿಗಬೇಕಿದೆ. ಮಹಿಳಾ ಮೀಸಲಾತಿ ಸಂಪೂರ್ಣವಾಗಿ ಸಾಕಾರಗೊಳ್ಳಬೇಕು. ಇಂದು ಹೆಣ್ಣು ಮಕ್ಕಳಿಗೆ ಸಿಕ್ಕಿರುವ ಎಲ್ಲಾ ಅವಕಾಶಗಳ ಹಿಂದೆ ಅಂಬೇಡ್ಕರ್ ಅವರ ಶ್ರಮವಿದೆ.



ಕವಿ ಸಿದ್ದಲಿಂಗಯ್ಯನವರು ಹೇಳಿದಂತೆ, ಸಮಾಜದಲ್ಲಿ ಮಲಗಿದವರನ್ನು ಎಬ್ಬಿಸಿ ನಿಲ್ಲಿಸುವ ಕಾರ್ಯವಾಗಬೇಕಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಯ ಕಣ್ಣೀರೊರೆಸುವ ಮನಸ್ಥಿತಿಯನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು, ಆಗ ಮಾತ್ರ ನಿಮ್ಮ ಶಿಕ್ಷಣಕ್ಕೆ ಬೆಲೆ ಬರುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ನಿವೃತ್ತ ಪ್ರಾಧ್ಯಾಪಕ ಪ್ರೊ. ರಾಜಪ್ಪ ದಳವಾಯಿ ಮಾತನಾಡಿ, ನಮ್ಮ ನಡುವಿನ ಅಸಮಾನತೆಯನ್ನು ಸ್ವಲ್ಪಮಟ್ಟಿಗಾದರೂ ಕಡಿಮೆ ಮಾಡುವುದು ಅಂಬೇಡ್ಕರ್ ಜಯಂತಿಯ ನಿಜವಾದ ಆಶಯವಾಗಬೇಕು. ಅಸಮಾನತೆ ತೊಲಗಿಸಿದರೆ ನಾವು ಈ ದೇಶಕ್ಕೆ ನೀಡುವ ಅತಿದೊಡ್ಡ ಕೊಡುಗೆಯಾಗುತ್ತದೆ ಎಂದರು.

ಅಂಬೇಡ್ಕರ್ ಅವರ ವಿದ್ವತ್ತನ್ನು ಜಗತ್ತು ಹೇಗೆ ಗೌರವಿಸುತ್ತದೆ ಎಂಬುದನ್ನು ಉದಾಹರಿಸಿದ ಅವರು, “ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಯ ಸ್ಮಾರಕ ಬರಹದ ಮೇಲೆ ಇಂತಹ ಜಗತ್ಪ್ರಸಿದ್ಧ ಜ್ಞಾನಿಗೆ ನಾವು ವಿದ್ಯಾಭ್ಯಾಸ ನೀಡಿದ್ದೇವೆ ಎಂಬುದು ನಮ್ಮ ಹೆಮ್ಮೆ ಎಂದು ಕೆತ್ತಲಾಗಿದೆ. ಆದರೆ ನಮ್ಮ ದೇಶದಲ್ಲಿ ಮಾತ್ರ ಅಂಬೇಡ್ಕರ್ ಅವರ ಜಾತಿ ಯಾವುದು, ಅವರನ್ನು ಓದಬೇಕೋ ಬೇಡವೋ ಎನ್ನುವ ವಿಚಿತ್ರ ಹಾಗೂ ಸಂಕುಚಿತ ಮನಸ್ಥಿತಿ ಇಂದಿಗೂ ಇರುವುದು ವಿಷಾದನೀಯ ಎಂದರು.

ಬ್ರಿಟಿಷರನ್ನು ಓಡಿಸಲು ಮಹಾತ್ಮ ಗಾಂಧೀಜಿಯವರು ಉಪ್ಪನ್ನು ಅಸ್ತ್ರವಾಗಿ ಬಳಸಿದರೆ, ಅಂಬೇಡ್ಕರ್ ಅವರು ಭಾರತೀಯರಲ್ಲಿ ಜ್ಞಾನದ ದೀವಿಗೆ ಹಚ್ಚಲು ಹಾಗೂ ಸಮಾನತೆ ತರಲು ಮಹಾಡ್ ಸತ್ಯಾಗ್ರಹದ ಮೂಲಕ ನೀರನ್ನು ಮುಟ್ಟಿದರು. ಆದರೆ ಇಂದಿಗೂ ಸಮಾಜದಲ್ಲಿ ಯಜಮಾನಿಕೆಯ ದುರಹಂಕಾರ ಮತ್ತು ಜಾತಿ ಅಜ್ಞಾನ ತಾಂಡವವಾಡುತ್ತಿದೆ ಹೊರತು ಮಾನವೀಯ ವಿಶ್ವಾಸದ ಕೊರತೆಯಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಂಬೇಡ್ಕರ್ ಅವರು ಅಂದು ವಿದೇಶದಿಂದ ಹಿಂತಿರುಗಿ ಬರದೇ ಹೋಗಿದ್ದರೆ, ಈ ದೇಶಕ್ಕೆ ನಾಗರಿಕತೆ ಎಂಬುದೇ ಬರುತ್ತಿರಲಿಲ್ಲ. ದೇವಸ್ಥಾನ ಎಲ್ಲರದ್ದಾದ ಮೇಲೆ ಪ್ರವೇಶವೂ ಎಲ್ಲರಿಗೂ ಇರಬೇಕು. ಈ ನಿಟ್ಟಿನಲ್ಲಿ ಅಸಮಾನತೆ ಹೋಗಲಾಡಿಸುವುದೇ ನಾವು ಅಂಬೇಡ್ಕರ್ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ದಳವಾಯಿ ಅವರು ನುಡಿದರು.

ಕರ್ನಾಟಕ ಜಾನಪದ ಅಕಾಡೆಮಿ ಮಾಜಿ ಅಧ್ಯಕ್ಷ ಪಿಚ್ಚಳ್ಳಿ ಶ್ರೀನಿವಾಸ್, ಕಾರ್ಯಕ್ರಮದಲ್ಲಿ ಹೋರಾಟದ ಹಾಡುಗಳು ಹಾಡಿ ವಿದ್ಯಾರ್ಥಿಗಳನ್ನು ಹುರಿದುಂಬಿಸಿದರು.

ಇದೇ ಸಂದರ್ಭದಲ್ಲಿ, ಅಂಬೇಡ್ಕರ್ ಕುರಿತು ಭಾಷಣ ಮಾಡಿದ ಇಬ್ಬರು ವಿದ್ಯಾರ್ಥಿಗಳಿಗೆ, ವಿದ್ಯಾ ವಿಷಯಕ ಪರಿಷತ್ತಿನ ಸದಸ್ಯರಾದ ಆಶಾ ಸುಲ್ತಾನ ನಗದು ಬಹುಮಾನವನ್ನು ನೀಡಿ ಪ್ರೋತ್ಸಾಹಿಸಿದರು.

ಕಾರ್ಯಕ್ರಮದಲ್ಲಿ ಆಡಳಿತ ಕುಲಸಚಿವ ಸಿ.ಎನ್. ಶ್ರೀಧರ್, ಮೌಲ್ಯಮಾಪನ ಕುಲಸಚಿವ ಪ್ರೊ. ಲೋಕನಾಥ್, ಸುವರ್ಣಗಂಗೆ ಕ್ಯಾಂಪಸ್‌ನ ನಿರ್ದೇಶಕಿ ಪ್ರೊ. ಕುಮುದಾ, ಪಿಎಂ ಉಷಾ ಸೆಲ್ ನೋಡೆಲ್ ಅಧಿಕಾರಿ ಡಾ. ರಮೇಶ್, ಸಿಂಡಿಕೇಟ್ ಮತ್ತು ಅಕಾಡೆಮಿಕ್ ಕೌನ್ಸಿಲ್ ಸದಸ್ಯರುಗಳಾದ ಸೀಸಂದ್ರ ಗೋಪಾಲಗೌಡ, ಜಯದೀಪ್, ಆಶಾಸುಲ್ತಾನ, ಬಾಹುಬಲಿ,ಲೋಕೇಶ್,ಜಮೀಲ್ ಅಹಮದ್,ಮುನಿಶಾಮಿಗೌಡ, ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ಸಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಾಣಿಜ್ಯ ವಿಭಾಗದ ಉಪನ್ಯಾಸಕಿ ಮಮತಾ ನಿರೂಪಿಸಿ, ಕನ್ನಡ ವಿಭಾಗದ ಉಪನ್ಯಾಸಕಿ ಗಾಯತ್ರಿದೇವಿ ಸ್ವಾಗತಿಸಿ, ನೇತ್ರಾವತಿ ಅತಿಥಿಗಳ ಕಿರು ಪರಿಚಯ ಮಾಡಿಕೊಟ್ಟರು. ಭೌತಶಾಸ್ತ್ರ ವಿಭಾಗದ ಸುಷ್ಮಾ ವಂದಿಸಿದರು. ವಿದ್ಯಾರ್ಥಿಗಳು ಕ್ರಾಂತಿಗೀತೆಗಳನ್ನು ಹಾಡಿದರು.

# ಶಿಕ್ಷಕರ ನಿವೃತ್ತಿಗೆ ನಾಟಕದ ಉಡುಗೊರೆ!



ವಿಜಯಪುರ

ಪಟ್ಟಣದ ರಾಜೀವ್ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕರಾದ ನಾರಾಯಣಸ್ವಾಮಿ ಅವರ ನಿವೃತ್ತಿ ಅಂಗವಾಗಿ ಶಾಲಾ ಆವರಣದಲ್ಲಿ ಆಯೋಜಿಸಿದ್ದ ‘ಶ್ರೀ ಕೃಷ್ಣ ಸಂಧಾನ’ ಪೌರಾಣಿಕ ನಾಟಕ ಪ್ರದರ್ಶನವು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

ಶಾಲೆಯ ಆವರಣದಲ್ಲಿ ನಡೆದ ಈ ವಿಶಿಷ್ಟ ಕಾರ್ಯಕ್ರಮದಲ್ಲಿ ರಂಗಕಲಾವಿದರ ಜೊತೆಗೂಡಿ ಶಾಲೆಯ ವಿದ್ಯಾರ್ಥಿಗಳು ವಿವಿಧ ಪೌರಾಣಿಕ ಪಾತ್ರಗಳಲ್ಲಿ ಮಿಂಚಿದರು. ಮಕ್ಕಳ ಅಭಿನಯವನ್ನು ಕಂಡು ಪೋಷಕರು ಮತ್ತು ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದರು.

ಬೀಳ್ಕೊಡುಗೆ ಸ್ವೀಕರಿಸಿ ಮಾತನಾಡಿದ ಮುಖ್ಯಶಿಕ್ಷಕ ನಾರಾಯಣಸ್ವಾಮಿ, “ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಮಕ್ಕಳನ್ನು ಪ್ರಬುದ್ಧರನ್ನಾಗಿ ಮಾಡುವ ದೊಡ್ಡ ಜವಾಬ್ದಾರಿ ನಮ್ಮ ಮೇಲಿದೆ. ಕರ್ತವ್ಯ ನಿರ್ವಹಣೆಯ ಬಗ್ಗೆ ನನಗೆ ಆತ್ಮತೃಪ್ತಿಯಿದೆ. ಪಠ್ಯದ ಜೊತೆಗೆ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯ ಬಗ್ಗೆಯೂ ಮಕ್ಕಳಿಗೆ ಅರಿವು ಮೂಡಿಸುವ ಕೆಲಸ ಮಾಡಿದ್ದೇವೆ. ಇಂದು ಮಕ್ಕಳು ಪೌರಾಣಿಕ ನಾಟಕದಲ್ಲಿ ಪಾತ್ರಧಾರಿಗಳಾಗಿರುವುದು ನನ್ನ ವೃತ್ತಿ ಜೀವನದ ಸಂತಸದ ಕ್ಷಣ,” ಎಂದು ಭಾವುಕರಾಗಿ ನುಡಿದರು.

ಪಠ್ಯೇತರ ಚಟುವಟಿಕೆಗಳಿಗೆ ಒತ್ತು ನೀಡುವ ಮೂಲಕ ಮಕ್ಕಳಲ್ಲಿನ ಸುಪ್ತ ಪ್ರತಿಭೆಯನ್ನು ಹೊರತರಲು ಈ ನಾಟಕ ಪ್ರದರ್ಶನ ಉತ್ತಮ ವೇದಿಕೆಯಾಯಿತು. ಕಾರ್ಯಕ್ರಮದಲ್ಲಿ ಸಂಗೀತ ನಿರ್ದೇಶಕ ಎಂ.ವಿ. ನಾಯ್ಡು, ಸಹಶಿಕ್ಷಕರುಗಳಾದ ಪಿ. ಪ್ರಕಾಶ್, ಆರ್. ಬೈರೇಗೌಡ, ಬಿ.ಎಂ. ಗೀತಾ, ಹರೀಶ್, ಕೃಷ್ಣಪ್ಪ ಸೇರಿದಂತೆ ಅನೇಕ ಗಣ್ಯರು ಹಾಗೂ ಪೋಷಕರು ಉಪಸ್ಥಿತರಿದ್ದರು.

# ನಗರ್ತರಿಗೆ 2 ಎ ಜಾತಿ ಪ್ರಮಾಣ ಪತ್ರ ವಿತರಣೆಗೆ ಒತ್ತಾಯ

ಬೂದಿಕೋಟೆ

ಅಯೋಧ್ಯ ವೈಶ್ಯ ನಾಮಧಾರಿ ನಗರ್ತ ಸಮುದಾಯಕ್ಕೆ ಅಧಿಕೃತವಾಗಿ ಜಾತಿ ಪ್ರಮಾಣ ಪತ್ರ ವಿತರಣೆ ಮಾಡಬೇಕು ಎಂದು ಒತ್ತಾಯಿಸಿ ಸಮುದಾಯದ ಮುಖಂಡರು ಗುರುವಾರ ನಗರದ ತಹಸೀಲ್ದಾರ್ ಸುಜಾತ ಅವರಿಗೆ ಮನವಿ ಸಲ್ಲಿಸಿದರು.

ಬಹಳ ವರ್ಷಗಳಿಂದ ಈ ಬೇಡಿಕೆಗಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರವಾಗಲಿ ಅಥವಾ ಸ್ಥಳೀಯ ಆಡಳಿತವಾಗಲಿ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು.

ಸಮುದಾಯದ ಮುಖಂಡರ ಪ್ರಕಾರ, ದಶಕಗಳಿಂದ ಶಾಲಾ ದಾಖಲಾತಿ ಮತ್ತು ಆದಾಯ ದಾಖಲೆಗಳಲ್ಲಿ ‘ನಗರ್ತ’, ‘ನಾಮಧಾರಿ ನಗರ್ತ’ ಹಾಗೂ ‘ನಾಮಧಾರಿ’ ಎಂಬ ವಿವಿಧ ಹೆಸರುಗಳು



ಬಳಕೆಯಾಗುತ್ತಿವೆ. “ಈ ಎಲ್ಲಾ ಹೆಸರುಗಳು ಒಂದೇ ಸಮುದಾಯವನ್ನು ಸೂಚಿಸಿದರೂ, ಸರ್ಕಾರಿ ಗೆಜೆಟ್ ಪಟ್ಟಿಯಲ್ಲಿ ಈ ಬಗ್ಗೆ ಸ್ಪಷ್ಟತೆ ಇಲ್ಲದ ಕಾರಣ ಪ್ರಮಾಣ ಪತ್ರ ಪಡೆಯಲು ತಾಂತ್ರಿಕ ತೊಂದರೆ ಎದುರಾಗುತ್ತಿದೆ,” ಎಂದು ಅವರು ವಿವರಿಸಿದರು.

ಜಾತಿ ಪ್ರಮಾಣ ಪತ್ರವಿಲ್ಲದೆ ಅನುಭವಿಸುತ್ತಿರುವ ಕಷ್ಟಗಳನ್ನು ವಿವರಿಸಿದ ಮುಖಂಡರು, “ಇಂದಿನ ಆನ್‌ಲೈನ್ ವ್ಯವಸ್ಥೆಯಲ್ಲಿ ಜಾತಿ ಪ್ರಮಾಣ ಪತ್ರವಿಲ್ಲದೆ ಶಿಷ್ಯವೇತನ, ವಿದ್ಯಾರ್ಥಿನಿಲಯ ಪ್ರವೇಶ ಹಾಗೂ ಶುಲ್ಕ ವಿನಾಯಿತಿ ಪಡೆಯಲು ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ಸಮುದಾಯದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಓದಿದ ವಿದ್ಯಾರ್ಥಿಗಳು ಮುಂದಿನ ಉನ್ನತ ಶಿಕ್ಷಣವನ್ನು ಅರ್ಧಕ್ಕೆ ನಿಲ್ಲಿಸುವ ಪರಿಸ್ಥಿತಿ ಬಂದೊದಗಿದೆ,” ಎಂದು ಬೇಸರ ವ್ಯಕ್ತಪಡಿಸಿದರು.

ಸರ್ಕಾರ ಹಾಗೂ ಜಿಲ್ಲಾಧಿಕಾರಿಗಳು ತಕ್ಷಣವೇ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಗೆಜೆಟ್‌ನಲ್ಲಿ ಸಮುದಾಯದ ಹೆಸರನ್ನು ಸರಿಪಡಿಸಿ ಪ್ರಮಾಣ ಪತ್ರ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬೂದಿಕೋಟೆಯ ನಗರ್ತರ ಪೇಟೆಯ ಕುಲಬಾಂಧವರು ಹಾಗೂ ಸಮುದಾಯದ ಪ್ರಮುಖ ಮುಖಂಡರು ಹಾಜರಿದ್ದರು.

# ಸ್ಮಶಾನ ಒತ್ತುವರಿ: ಭೂ ಮಾಫಿಯಾ ವಿರುದ್ಧ ಸಾರ್ವಜನಿಕರ ಆಕ್ರೋಶ

ದೊಡ್ಡಬಳ್ಳಾಪುರ

ನಗರದ ವಿವೇಕಾನಂದ ನಗರದಲ್ಲಿರುವ ಐತಿಹಾಸಿಕ ‘ಕೆಮ್ಮಣ್ಣುಗುಂಡಿ ರುದ್ರಭೂಮಿ’ಯನ್ನು ಭೂ ಮಾಫಿಯಾ ಅತಿಕ್ರಮಿಸಿರುವುದನ್ನು ಖಂಡಿಸಿ, ಕೆಮ್ಮಣ್ಣುಗುಂಡಿ ರುದ್ರಭೂಮಿ ಸ್ಮಶಾನ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ಗುರುವಾರ ತಾಲ್ಲೂಕು ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಸ್ಮಶಾನದ ಜಾಗವನ್ನು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಕಿಡಿಗೇಡಿಗಳು, ಅಲ್ಲಿನ ಹಳೆಯ ಸಮಾಧಿಗಳ ಗೋರಿಗಳನ್ನು ಕಿತ್ತುಹಾಕಿದ್ದಾರೆ. ಅಷ್ಟೇ ಅಲ್ಲದೆ, ಸ್ಮಶಾನಕ್ಕೆ ಹೋಗುವ ದಾರಿಯನ್ನೂ ಬಿಡದೆ ಕಾಂಪೌಂಡ್ ನಿರ್ಮಿಸಿ ಸಾರ್ವಜನಿಕರ ಶವಸಂಸ್ಕಾರಕ್ಕೆ ತೀವ್ರ ಅಡ್ಡಿಪಡಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದರು.

ಈ ರುದ್ರಭೂಮಿಯು ಕುರುಬ, ಯಾದವ (ಗೊಲ್ಲ), ವಾಲ್ಮೀಕಿ ನಾಯಕ, ಸವಿತಾ ಸಮಾಜ, ವನ್ನಿಕುಲ ಕ್ಷತ್ರಿಯ (ತಿಗಳ), ದೇವಾಂಗ ಹಾಗೂ ಆಂಧ್ರ



ದೇವಾಂಗ ಸಮುದಾಯ ಸೇರಿದಂತೆ ಹಲವಾರು ತಳ ಸಮುದಾಯಗಳ ಶವಸಂಸ್ಕಾರಕ್ಕೆ ಇರುವ ಆಧಾರವಾಗಿದೆ.

ಈಗ ದಾರಿ ಮುಚ್ಚಿರುವುದರಿಂದ ಸಾರ್ವಜನಿಕರು ಶವಗಳನ್ನು ಹೊತ್ತೊಯ್ಯಲು ಹರಸಾಹಸ ಪಡುವಂತಾಗಿದೆ ಎಂದು ಮುಖಂಡರು ದೂರಿದರು.

“ಈ ಒತ್ತುವರಿ ಕುರಿತು ಈಗಾಗಲೇ ತಹಸೀಲ್ದಾರ್, ಉಪ ವಿಭಾಗಾಧಿಕಾರಿಗಳು, ನಗರಸಭೆ ಪೌರಾಯುಕ್ತರು ಹಾಗೂ ಸ್ಥಳೀಯ ಶಾಸಕರಾದ ಧೀರಜ್ ಮುನಿರಾಜು ಅವರಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ.

ಆದರೆ ಅಧಿಕಾರಿಗಳಾಗಲಿ, ಜನಪ್ರತಿನಿಧಿಗಳಾಗಲಿ ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯವಹಿಸುತ್ತಿದ್ದಾರೆ,” ಎಂದು ಹೋರಾಟಗಾರರು ಅಸಮಾಧಾನ ವ್ಯಕ್ತಪಡಿಸಿದರು.

ಕೂಡಲೇ ಸ್ಮಶಾನದ ಜಾಗವನ್ನು ಸರ್ವೆ ನಡೆಸಿ, ಒತ್ತುವರಿದಾರರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಸ್ಮಶಾನದ ದಾರಿಯನ್ನು ಸುಗಮಗೊಳಿಸಿ ಸಾರ್ವಜನಿಕರಿಗೆ ಅನುವು ಮಾಡಿಕೊಡಬೇಕು. ಒಂದು ವೇಳೆ ತಾಲೂಕು ಆಡಳಿತ ವಿಳಂಬ ನೀತಿ ಅನುಸರಿಸಿದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಮಿತಿ ಎಚ್ಚರಿಕೆ ನೀಡಿದೆ.

ಪ್ರತಿಭಟನೆಯಲ್ಲಿ ವಿವಿಧ ಸಮುದಾಯಗಳ ಮುಖಂಡರು, ಹೋರಾಟಗಾರರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ಬೆಂಬಲಿಸುವ ವಿಶ್ವಾಸ



ಬೆಂಗಳೂರು

ಮಹಿಳಾ ಮೀಸಲಾತಿ ಮಸೂದೆಗಾಗಿ ಸಂಸತ್ತಿನ ವಿಶೇಷ ಅಧಿವೇಶನ ನಡೆಯುತ್ತಿದ್ದು, ಮಹಿಳೆಯರಿಗೂ ಕಾನೂನು ರಚನೆಗೆ ಸಮಾನ ಅವಕಾಶ ಸಿಗಲಿದೆ. ಇದಕ್ಕೆ ವಿರೋಧಪಕ್ಷ ಕಾಂಗ್ರೆಸ್ ಬೆಂಬಲ ನೀಡಲಿದೆ ಎಂಬ ವಿಶ್ವಾಸವಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಅವರು ಮಾಧ್ಯಮಗಳ ಜೊತೆ ಮಾತನಾಡಿದರು. ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರು ದೇಶದಲ್ಲಿ ಸರ್ವರಿಗೂ ಸಮಾನ ಹಕ್ಕು ಇರಬೇಕು, ಸಮಾನ ಅವಕಾಶ ಸಿಗಬೇಕು ಎಂದು ಬಯಸಿದ್ದರು. ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂದೂ ಹೇಳಿದ್ದರು. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರು ಬಾಬಾ ಸಾಹೇಬರ ಚಿಂತನೆಗೆ ಶಕ್ತಿ ಕೊಟ್ಟಿದ್ದಾರೆ ಎಂದರು.

ಈ ಹಿಂದೆ ಮಹಿಳೆಯರಿಗೆ ಅವಕಾಶ, ಅಧಿಕಾರ ಮತ್ತು ಸಮಾನ ಹಕ್ಕು ಕೊಡುವಲ್ಲಿ ಬಾಯಿ ಮಾತಿನ ಭಾಷಣ ಇತ್ತೇ ಹೊರತು ಹೃದಯವಂತಿಕೆ ಇರಲಿಲ್ಲ. ಆದರೆ ಇಂದು ನಾರಿ ಶಕ್ತಿ ಹೆಸರಿನಲ್ಲಿ ಪ್ರಧಾನಿಯವರು ಸಂಸತ್ತಿನ ವಿಶೇಷ ಅಧಿವೇಶನ ಕರೆದು ಮಸೂದೆ ಮಂಡಿಸುತ್ತಿದ್ದಾರೆ. ಇನ್ನು ಮುಂದೆ ಹೆಣ್ಣು ಮಕ್ಕಳಿಗೆ ಎಲ್ಲ ರೀತಿಯ ಅವಕಾಶಗಳ ದೊರೆಯಲಿವೆ. ಹಿಂದೂ ಕೋಡ್ ಬಿಲ್ ತರುವ ಮೊದಲು ಹೆಣ್ಣು ಮಕ್ಕಳಿಗೆ ಮತದಾನದ ಅವಕಾಶವೂ ಇರಲಿಲ್ಲ. ಬಾಬಾ ಸಾಹೇಬರು ಅವರ ಶಕ್ತಿ, ಯೋಚನೆ ಹಾಗೂ ಚಿಂತನೆಯಿಂದ ಹೆಣ್ಣು ಮಕ್ಕಳಿಗೆ ಮತದಾನದ ಅವಕಾಶ ಸಿಕ್ಕಿತು. ನಾರೀಶಕ್ತಿ ಮಸೂದೆ ಮೂಲಕ ಕಾನೂನು ರಚನೆಯಲ್ಲೂ ಮಹಿಳೆಯರಿಗೆ ಸಮಾನ ಅವಕಾಶ ಸಿಗಲಿದೆ ಎಂದರು.

ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್‌ನವರು ಯಾವುದೇ ಅಪಸ್ವರ ಎತ್ತದೆ ಅಂಗೀಕಾರಕ್ಕೆ ಸಹಕರಿಸಲಿದ್ದಾರೆ ಎಂಬ ವಿಶ್ವಾಸ ಇದೆ. ಒಂದು ವೇಳೆ ಅಪಸ್ವರ ತೆಗೆದರೆ ಅವರ ಭವಿಷ್ಯ ಗಂಭೀರವಾಗುತ್ತದೆ ಎಂದು ಎಚ್ಚರಿಸಿದರು. ಈ ಮಸೂದೆಯನ್ನು ಪಕ್ಷದ ಪರವಾಗಿ ಸ್ವಾಗತಿಸುತ್ತೇವೆ. ದೇಶದಲ್ಲಿನ ನಾರೀಶಕ್ತಿ ಅಂಬೇಡ್ಕರ್ ಅವರಿಗೆ ಹೇಗೆ ಕೃತಜ್ಞತೆ ಹೊಂದಿದ್ದಾರೋ ಹಾಗೇಯೇ ಮೋದಿಜಿಯವರಿಗೂ ಕೃತಜ್ಞತೆ ವ್ಯಕ್ತಪಡಿಸಲಿದ್ದಾರೆ ಎಂದು ನುಡಿದರು.

ಕರ್ನಾಟಕ ಸರ್ಕಾರ ಅಂಬೇಡ್ಕರ್ ಜಯಂತಿಯನ್ನು ಕಾಟಾಚಾರಕ್ಕೆ ಆಚರಿಸಿತು. ಆಚರಣೆಯಲ್ಲಿ ಬಾಬಾ ಸಾಹೇಬರ ಬಗ್ಗೆ ವಿಶ್ವಾಸ ಹಾಗೂ ಪ್ರೀತಿ ಕಾಣಲಿಲ್ಲ. ಕಾರ್ಯಕ್ರಮದ ನಿಗದಿತ ಸಮಯಕ್ಕೆ ಮುಖ್ಯಮಂತ್ರಿಗಳು ಬರಲಿಲ್ಲ. ಕಾಂಗ್ರೆಸ್ ಕಾರ್ಯಕ್ರಮವಾಗಿದ್ದರೆ ಮುಖ್ಯಮಂತ್ರಿಗಳು ಸಮಯಕ್ಕೆ ಸರಿಯಾಗಿ ಬರುತ್ತಿದ್ದರು ಎಂದು ದೂರಿದರು. ವಿಧಾನಸೌಧದ ಮೆಟ್ಟಿಲುಗಳ ಮೇಲೆ ನಡೆದ ಕಾರ್ಯಕ್ರಮ ಸಹ ಸುಳ್ಳಿನ ಸರಮಾಲೆಯಾಗಿತ್ತು. ಅಂಬೇಡ್ಕರ್ ಅವರನ್ನು ಸೋಲಿಸಿದ ವಿಚಾರದಲ್ಲೂ ಸಿದ್ದರಾಮಯ್ಯ ಅವರು ಸುಳ್ಳು ಹೇಳಿದರು ಎಂದರು.

# ಕಾಂಪೋಸ್ಟ್ ಖರೀದಿ–ವಿತರಣಾ ಕಾರ್ಯಕ್ರಮಕ್ಕೆ ಚಾಲನೆ

ಬೆಂಗಳೂರು

ನಗರ ತ್ಯಾಜ್ಯವನ್ನು ಸಂಪನ್ಮೂಲವಾಗಿ ಪರಿವರ್ತಿಸುವ ಉದ್ದೇಶದಿಂದ ಕಾಂಪೋಸ್ಟ್ ಖರೀದಿ ಮತ್ತು ಉಚಿತ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ.

ನಗರದ ಜಿಬಿಎ ಕೇಂದ್ರ ಕಚೇರಿಯ ಕೌನ್ಸಿಲ್ ಕಟ್ಟಡದಲ್ಲಿ ನಡೆದ ಕಾರ್ಯಕ್ರಮಕ್ಕೆ ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತ (ಕೆಸಿಡಿಸಿಎಲ್) ಅಧ್ಯಕ್ಷರಾದ ಎ. ಎನ್. ನಟರಾಜ್ ಗೌಡ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಗರ ತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ರೂಪಾಂತರಗೊಳಿಸುವ ನಿಟ್ಟಿನಲ್ಲಿ ಗ್ರೇಟರ್ ಬೆಂಗಳೂರು ಐಟಿ ಕಂಪನಿಗಳು ಮತ್ತು ಇಂಡಸ್ಟ್ರೀಸ್ ಅಸೋಸಿಯೇಷನ್ (ಜಿಬಿಐಟಿಸಿಐಎ) ಸಂಸ್ಥೆಯು ತನ್ನ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ಚಟುವಟಿಕೆಯ ಭಾಗವಾಗಿ ಮಹತ್ವದ



ಉಪಕ್ರಮ ಕೈಗೊಂಡಿದೆ ಎಂದು ಹೇಳಿದರು. ಮೈತ್ರಿ ಸರ್ವ ಸೇವಾ ಸಮಿತಿಯ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ಉತ್ಪಾದನೆಯಾಗುತ್ತಿರುವ ಸಾವಯವ ಗೊಬ್ಬರವನ್ನು ಖರೀದಿಸಿ ರೈತರಿಗೆ ಉಚಿತವಾಗಿ ವಿತರಿಸಲಾಗುತ್ತಿದೆ ಎಂದರು.

ನಗರದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಮರ್ಪಕವಾಗಿ ಸಂಸ್ಕರಿಸಿ ಮೌಲ್ಯಯುತ ಸಂಪನ್ಮೂಲವಾಗಿ ಪರಿವರ್ತಿಸುವುದು ಅವಶ್ಯಕವಾಗಿದೆ. ಕಾಂಪೋಸ್ಟ್ ಉತ್ಪಾದನೆ ಮತ್ತು ಬಳಕೆಯನ್ನು ಉತ್ತೇಜಿಸುವುದರಿಂದ ಪರಿಸರ ಸಂರಕ್ಷಣೆಗೂ, ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುವುದಕ್ಕೂ ಸಹಕಾರಿಯಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

"ಕರ್ನಾಟಕ ಮಿಷನ್ 2030" ಆಶಯದಂತೆ ಮಣ್ಣಿನ ಆರೋಗ್ಯ ಸುಧಾರಣೆ ಹಾಗೂ ಸುಸ್ಥಿರ ಕೃಷಿಗೆ ಇದು ಮಹತ್ವದ ಹೆಜ್ಜೆಯಾಗಿದೆ. ಈ ಯೋಜನೆಯ ಮೂಲಕ ನಗರ ತ್ಯಾಜ್ಯ ಮರುಬಳಕೆ ಆಗುವುದರೊಂದಿಗೆ 'ಸರ್ಕ್ಯೂಲರ್ ಆರ್ಥಿಕತೆ' ಪರಿಕಲ್ಪನೆಗೂ ಉತ್ತೇಜನ ದೊರೆಯಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ರೈತರಿಗೆ ಸಾಂಕೇತಿಕವಾಗಿ ಕಾಂಪೋಸ್ಟ್ ಗೊಬ್ಬರ ವಿತರಣೆ ಮಾಡಲಾಯಿತು.

ಈ ಯೋಜನೆಯ ಪ್ರಯೋಜನವನ್ನು ಚಿಕ್ಕಬಳ್ಳಾಪುರ ಹಾಗೂ ಕೋಲಾರ ಸೇರಿದಂತೆ ವಿವಿಧ ಜಿಲ್ಲೆಗಳ ರೈತರು ಪಡೆಯಲಿದ್ದಾರೆ.

ಈ ವೇಳೆ ಜಿಬಿಐಟಿಸಿಐಎ ಅಧ್ಯಕ್ಷರಾದ ಗಿರೀಶ್, ಸಿಎಸ್ಆರ್ ಮುಖ್ಯಸ್ಥರಾದ ವಾಸುದೇವನ್, ಮೈತ್ರಿ ಸರ್ವ ಸೇವಾ ಸಮಿತಿಯ ಪದಾಧಿಕಾರಿಗಳು, ಹರೀಶ್ ಬಾಬು, ವಿಶಾಲ್ ಸೇರಿದಂತೆ ಕೈಗಾರಿಕಾ ವಲಯದ ಪ್ರತಿನಿಧಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಆಹಾರ ಸಚಿವರು ಹಾಗೂ ತಮಿಳುನಾಡಿನ ಚುನಾವಣಾ ಉಸ್ತುವಾರಿ ವೀಕ್ಷಕರಾದ ಕೆ.ಹೆಚ್.ಮುನಿಯಪ್ಪ ತಮಿಳುನಾಡಿನ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು, ಹಾಗೂ ಮುಖಂಡರೊಂದಿಗೆ ಸಭೆಗಳು ನಡೆಸಿ ನಂತರ ಪಕ್ಷದ ಅಭ್ಯರ್ಥಿಗಳ ಪರವಾಗಿ ತೆರದ ವಾಹನದಲ್ಲಿ ರೋಡ್ ಶೋ ನಡೆಸುವ ಮೂಲಕ ಮತಯಾಚನೆ ನಡೆಸಿದರು. ತಮಿಳುನಾಡಿನಲ್ಲಿ ಮಿತ್ರ ಪಕ್ಷವಾದ ಡಿಎಂಕೆ ಪಕ್ಷದ ಸಹಕಾರದಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಮತಚಲಾಯಿಸಲು ಮನವಿ ಮಾಡಿದರು.





ಬೆಂಗಳೂರಿನ ಗಾಂಧಿನಗರ ವಿಧಾನಸಭಾ ಕ್ಷೇತ್ರದ ದತ್ತಾತ್ರೇಯ ವಾರ್ಡಿನಲ್ಲಿ ದಿನೇಶ್ ಗುಂಡೂರಾವ್ ಅವರ ನೇತೃತ್ವದಲ್ಲಿ ಆರ್.ಗುಂಡೂರಾವ್ ಫೌಂಡೇಷನ್ ಹಾಗೂ ಜಿಬಿಎ ಸಹಯೋಗದಲ್ಲಿ ಸ್ವಚ್ಛತಾ ಆಂದೋಲನ ನಡೆಸಿ, ಮನೆಮನೆಗೆ ಭೇಟಿ ನೀಡಿ ಹಸಿ-ಒಣ ಕಸ ವಿಂಗಡಣೆ ಕುರಿತು ಜಾಗೃತಿ ಮೂಡಿಸಲಾಯಿತು; ಕಾರ್ಯಕ್ರಮದಲ್ಲಿ ಅಧಿಕಾರಿಗಳು, ಕಾರ್ಯಕರ್ತರು, ಪೌರ ಕಾರ್ಮಿಕರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# 'ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗ್ರತೆವಹಿಸಿ'

ಬೆಂಗಳೂರು

ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಟ್ಯಾಂಕರ್ ನೀರು ಪೂರೈಕೆ ಮಾಡಬೇಕು. ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆ ಪಡೆಯುವುದಕ್ಕೆ ಆದ್ಯತೆ ನೀಡಬೇಕು. ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದಾಗಿದೆ ಎಂದು ಮುಖ್ಯಮಂತ್ರಿಗಳು ಗುರುತಿಸಿದರು.

ರಾಜ್ಯದ ಪ್ರಮುಖ 14 ಜಲಾಶಯಗಳಲ್ಲಿ ಪ್ರಸ್ತುತ 321.93 ಟಿ.ಎಂ.ಸಿ ನೀರು ಲಭ್ಯವಿದ್ದು, ಇದು ಒಟ್ಟು ಸಾಮರ್ಥ್ಯದ ಶೇ.36ರಷ್ಟಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 330.35 ಟಿ.ಎಂ.ಸಿ ನೀರು ಲಭ್ಯವಿತ್ತು. ಪ್ರಸುತ ಕುಡಿಯುವ ನೀರಿಗೆ ಸಾಕಷ್ಟು ನೀರು ಜಲಾಶಯಗಳಲ್ಲಿ ಲಭ್ಯವಿದೆ.

ಮಳೆಗಾಲ ವಿಳಂಬವಾಗಿ ಆರಂಭವಾಗುವ ಸಾಧ್ಯತೆಯಿರುವುದರಿಂದ ಜುಲೈ ಮಧ್ಯದವರೆಗೂ ಕುಡಿಯುವ ನೀರಿಗಾಗಿ ಜಲಾಶಯಗಳಲ್ಲಿ ನೀರಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು. ನೀರಾವರಿಗಿಂತ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜಲಾಶಯಗಳಲ್ಲಿ ನೀರಿನ ಸೋರಿಕೆಯನ್ನು ಗುರುತಿಸಿ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

ಕುಡಿಯುವ ನೀರಿನ ಕುರಿತಾಗಿ ಸಾರ್ವಜನಿಕರ ಅಹವಾಲುಗಳಿಗೆ ತುರ್ತಾಗಿ ಸ್ಪಂದಿಸಬೇಕು. ಇದಕ್ಕಾಗಿ ತಾಲೂಕು ಹಾಗೂ ವಾರ್ಡ್ ಮಟ್ಟದಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಬೇಕು. ಜಿಲ್ಲಾ ಮಟ್ಟದ ಕಾರ್ಯಪಡೆ ಸಕ್ರಿಯವಾಗಿ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಎಲ್ಲಾ ಆರ್. ಒ ಘಟಕಗಳು 24/7 ನಿರಂತರ ವಿದ್ಯುತ್ ಸರಬರಾಜಿನೊಂದಿಗೆ ಕಾರ್ಯ ನಿರ್ವಹಿಸುವುದನ್ನು ಖಾತ್ರಿಪಡಿಸಬೇಕು. ಆರ್ ಒ ಘಟಕಗಳ ತಕ್ಷಣದ ದುರಸ್ತಿ ಮತ್ತು ಕುಡಿಯುವ ನೀರಿನ ಪೂರೈಕೆಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ತಾಲೂಕು ಮಟ್ಟದಲ್ಲಿ ತಂಡಗಳನ್ನು ನಿಯೋಜಿಸಬೇಕು ಎಂದು ಸೂಚನೆ ನೀಡಿದರು.

ಮಧ್ಯಪ್ರಾಚ್ಯದಲ್ಲಿನ ಯುದ್ಧದ ಪರಿಸ್ಥಿತಿಯಿಂದಾಗಿ ಈ ಬಾರಿ ರಸಗೊಬ್ಬರ ಪೂರೈಕೆಯಲ್ಲಿ ಅಡಚಣೆ ಉಂಟಾಗುವ ಸಾಧ್ಯತೆಯಿದೆ. ವ್ಯಾಪಾರಿಗಳು ರಸಗೊಬ್ಬರವನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸಿ ದಾಸ್ತಾನು ಇರಿಸುವುದನ್ನು ತಪ್ಪಿಸಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಸೂಕ್ತ ಸಮಯದಲ್ಲಿ ರಸಗೊಬ್ಬರ ಲಭ್ಯತೆಯನ್ನು ಖಾತ್ರಿಪಡಿಸಲು ಕ್ರಮ ಕೈಗೊಳ್ಳಬೇಕು. ಯೂರಿಯಾ, ಡಿಎಪಿ ಸರಿಯಾಗಿ ವಿತರಣೆಯಾಗುವಂತೆ ನೋಡಿಕೊಳ್ಳಬೇಕು. ಬೇರೆ ರಾಜ್ಯಗಳಿಗೆ ರಸಗೊಬ್ಬರ ಸಾಗಾಟ ಮಾಡುವುದನ್ನು ನಿಯಂತ್ರಿಸಬೇಕು. ಇದಕ್ಕಾಗಿ ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆಯನ್ನು ಬಿಗಿಗೊಳಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

ಕಳೆದ ಎರಡು ವರ್ಷಗಳಲ್ಲಿ ಉತ್ತಮ ಮಳೆಯಾಗಿರುವುದರಿಂದ ಮೇವಿನ ಕೊರತೆ ಸದ್ಯಕ್ಕೆ ಇರುವುದಿಲ್ಲ. ಆದರೆ ಈ ಕುರಿತು ನಿರ್ಲಕ್ಷ್ಯ ವಹಿಸದೆ ಮೇವಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು ಎಂದರು. ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಕುರಿತಾದ ಟಾಸ್ಕ್ ಫೋರ್ಸ್ ಸಭೆ ನಡೆಸಿ ವರದಿ ಸಲ್ಲಿಸಬೇಕು ಮುಖ್ಯಮಂತ್ರಿ ಅವರು ತಿಳಿಸಿದರು.

ಕಲುಷಿತ ನೀರು ಪೂರೈಕೆಯಾಗಿ ಆರೋಗ್ಯ ಸಮಸ್ಯೆಯಾಗದಂತೆ ಎಲ್ಲಾ ಜಿಲ್ಲೆಗಳಲ್ಲಿ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಈ ಕುರಿತು ಈಗಾಗಲೇ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದ್ದು, ಯಾವುದೇ ಕಾರಣಕ್ಕೂ ಕಲುಷಿತ ನೀರಿನಿಂದ ಸಮಸ್ಯೆಯಾಗದಂತೆ ನೋಡಿಕೊಳ್ಳುವುದು ಜಿಲ್ಲಾಧಿಕಾರಿಗಳ ಜವಾಬ್ದಾರಿ ಎಂದು ಸ್ಪಷ್ಟಪಡಿಸಿದರು.

ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ: ಅರ್ಹ ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಿ

ಹಾವೇರಿ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಈಗಾಗಲೇ ಕಳೆದ ವರ್ಷಕ್ಕಿಂತ ಹೆಚ್ಚಿನ ಪ್ರಮಾಣದ ರಸಗೊಬ್ಬರ ಮಾರಾಟವಾಗಿದ್ದು, ಇದಕ್ಕೆ ಕಾರಣವೇನು? ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ, ಅರ್ಹ ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು. ಕುಡಿಯುವ ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ್ಯತೆ ನೀಡಿ. ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ್ಯತೆ ನೀಡಬೇಕು. ಪಂಚಾಯತ್ ರಾಜ್ ಮತ್ತು ಇಂಧನ ಇಲಾಖೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ವಿದ್ಯುತ್ ಸಂಪರ್ಕ ಕಲ್ಪಿಸಲು ಠೇವಣಿಗಾಗಿ ಕಾಯಬಾರದು ಎಂದರು.

# ಸನಾತನ ಸಂಸ್ಕೃತಿ ಸಂರಕ್ಷಣೆಗೆ 'ಶ್ರೀಪುತ್ತಿಗೆ ಸುಗುಣ ಶಿಬಿರ' ಆಯೋಜನೆ

ಉಡುಪಿ

ಸನಾತನ ಹಿಂದೂ ಸಂಸ್ಕೃತಿಯ ಸಂರಕ್ಷಣೆ ಮತ್ತು ಸಂವರ್ಧನೆಗೆ ಉದ್ದೇಶಿಸಿ ಶ್ರೀ ಪುತ್ತಿಗೆ ಮಠ ವತಿಯಿಂದ 'ಶ್ರೀಪುತ್ತಿಗೆ ಸುಗುಣ ಶಿಬಿರ'ವನ್ನು ಮೊದಲ ಬಾರಿಗೆ ಆಯೋಜಿಸಲಾಗಿದೆ.

ಶ್ರೀ ಸುಗುಣೇಂದ್ರತೀರ್ಥ ಸ್ವಾಮೀಜಿ ಹಾಗೂ ಅವರ ಶಿಷ್ಯರಾದ ಶ್ರೀ ಸುಶ್ರೀಂದ್ರತೀರ್ಥ ಸ್ವಾಮೀಜಿ ಅವರ ಮಾರ್ಗದರ್ಶನದಲ್ಲಿ ಉಡುಪಿ ಗೀತಾ ಮಂದಿರದಲ್ಲಿ ಈ ಶಿಬಿರ ನಡೆಯಲಿದೆ. ಏಪ್ರಿಲ್ 19ರಂದು ಅಪರಾಹ್ನ 3 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಶ್ರೀ ವೇದವರ್ಧನತೀರ್ಥ ಸ್ವಾಮೀಜಿ ಉದ್ಘಾಟನೆಗೈಯಲಿದ್ದಾರೆ.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಡುಪಿ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ್ ಪೂಜಾರಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಶಾಸಕ ಯಶಪಾಲ್ ಸುವರ್ಣ, ರಾಷ್ಟ್ರ ಪ್ರಶಸ್ತಿ ವಿಜೇತ ನಟ–ನಿರ್ದೇಶಕ ರಿಷಭ್ ಶೆಟ್ಟಿ, ರಾಜರ್ಷಿ ವಾಸುದೇವ ಶೆಟ್ಟಿ ಹಾಗೂ ಶ್ರೀನಿವಾಸ ವಿಶ್ವವಿದ್ಯಾಲಯ ಕುಲಾಧಿಪತಿ ಡಾ.ಶ್ರೀನಿವಾಸರಾವ್ ಭಾಗವಹಿಸಲಿದ್ದಾರೆ.

ಭಾರತೀಯ ಸಂತ ಮಹಾಪರಿಷತ್, ವಿಶ್ವ ಹಿಂದೂ ಪರಿಷತ್, ಸಂಸ್ಕಾರ ಭಾರತಿ, ಕುಟುಂಬ ಪ್ರಬೋಧನ ಸಮಿತಿ ಹಾಗೂ ಪತಂಜಲಿ ಯೋಗ ಸಮಿತಿಗಳ ಉಡುಪಿ ಘಟಕಗಳು ಈ ಶಿಬಿರಕ್ಕೆ ಸಹಯೋಗ ನೀಡುತ್ತಿವೆ.

ಏಪ್ರಿಲ್ 20ರಿಂದ 30ರವರೆಗೆ ಪ್ರತಿದಿನ ಮಧ್ಯಾಹ್ನ 2ರಿಂದ ಸಂಜೆ 5:30ರವರೆಗೆ ನಡೆಯಲಿರುವ ಈ ಹತ್ತು ದಿನಗಳ ಶಿಬಿರದಲ್ಲಿ 5 ವರ್ಷದಿಂದ 60 ವರ್ಷ ಮೇಲ್ಪಟ್ಟವರಿಗೂ ಐದು ವಿಭಾಗಗಳಲ್ಲಿ ತರಗತಿಗಳು ನಡೆಯಲಿವೆ. ನಿತ್ಯ ವಿಧಿಗಳು, ಹಿಂದೂ ಆಚಾರ–ವಿಚಾರಗಳು, ಭಜನೆ, ಕಲೆ, ಹೂ ಕಟ್ಟುವುದು, ರಂಗವಲ್ಲಿ, ಕರಕುಶಲ, ಹಬ್ಬ–ಹರಿದಿನಗಳ ಅರಿವು ಸೇರಿದಂತೆ ಹಲವು ವಿಷಯಗಳಲ್ಲಿ ತರಬೇತಿ ನೀಡಲಾಗುತ್ತದೆ.

ಶಿಬಿರದಲ್ಲಿ ಪ್ರತಿದಿನ ಸಂಜೆ ವಿಶೇಷ ಉಪನ್ಯಾಸಗಳು ಹಾಗೂ 'ಸಾಧಕ–ಸಂವಾದ' ಕಾರ್ಯಕ್ರಮಗಳು ನಡೆಯಲಿದ್ದು, ವಿವಿಧ ಕ್ಷೇತ್ರಗಳ ಸಾಧಕರು ಭಾಗವಹಿಸಿ ಮಾಹಿತಿ ನೀಡಲಿದ್ದಾರೆ. ಶಿಬಿರಾರ್ಥಿಗಳ ಜೊತೆಗೆ ಸಾರ್ವಜನಿಕರೂ ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅವಕಾಶವಿದೆ.

# 'ಪಶ್ಚಿಮಘಟ್ಟಗಳನ್ನು ಭವಿಷ್ಯದ ಪೀಳಿಗೆಯ ಜೀವನಾಡಿಯಾಗಿ ನೋಡಬೇಕು'

ಬೆಂಗಳೂರು

ಪ್ರಕೃತಿ, ಪರಿಸರ ಸಂರಕ್ಷಣೆ ಹಾಗೂ ಹಸಿರು ಹೊದಿಕೆ ಹೆಚ್ಚಳದಲ್ಲಿ ಸುಸ್ಥಿರ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಪಾತ್ರ ಹಿರಿದಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟದ (ಎಫ್.ಕೆ.ಸಿಸಿಐ) ಆಯೋಜಿಸಿದ್ದ ಜಾಗತಿಕ ಸುಸ್ಥಿರ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಶೃಂಗಸಭೆ 2026ರ ಪೂರ್ವಭಾವಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ನಾವಿಂದು, ಜಾಗತಿಕ ತಾಪಮಾನ ಏರಿಕೆ ಹಾಗೂ ಹವಾಮಾನ ಬದಲಾವಣೆಯ ಪರಿಣಾಮಗಳ ಕಾಲಘಟ್ಟದಲ್ಲಿ ನಿಂತಿದ್ದು, ಈ ಸಂದರ್ಭದಲ್ಲಿ ಸುಸ್ಥಿರ ಅಭಿವೃದ್ಧಿ, ಹವಾಮಾನ ಚೇತರಿಕೆ ಮತ್ತು ಸಮಗ್ರ ಪ್ರಗತಿಯ ಕಾರ್ಯತಂತ್ರಕ್ಕೆ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಚಾಲಕಶಕ್ತಿಯಾಗಿದೆ ಎಂದರು.

ಕರ್ನಾಟಕವು ಈ ಪಯಣದಲ್ಲಿ ವಿಶಿಷ್ಟ ಸ್ಥಾನದಲ್ಲಿದೆ. ಜಾಗತಿಕ ಜೀವವೈವಿಧ್ಯತೆಯ ಅದ್ಭುತ ತಾಣವಾದ ಪಶ್ಚಿಮ ಘಟ್ಟಗಳನ್ನು ಹೊಂದಿದ್ದು, ಹಲವು ಬಗೆಯ ವಿಶಿಷ್ಟ ಸಸ್ಯ



ಸಂಕುಲ, ಪ್ರಾಣಿ ಸಂಕುಲ, ಪಕ್ಷಿ ಸಂಕುಲ ಹಾಗೂ ಕೀಟ ಸಂಕುಲಗಳ ತಾಣವಾದ ಈ ಸಮೃದ್ಧ ಕಾನನವನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಪಶ್ಚಿಮ ಘಟ್ಟ ಭವಿಷ್ಯದ ಪೀಳಿಗೆಯ ಜೀವನಾಡಿ:ಈಶ್ವರ ಖಂಡ್ರೆ


ಹಲವು ಜೀವನದಿಗಳ ಮೂಲವೇ ಪಶ್ಚಿಮಘಟ್ಟವಾಗಿದ್ದು, ಮಳೆಯ ಮಾರುತಗಳನ್ನು ತಡೆದು ದೇಶಾದ್ಯಂತ ವ್ಯಾಪಕವಾಗಿ ಮಳೆ ಸುರಿಸುವಂತೆ ಮಾಡುವ ಪಶ್ಚಿಮ ಘಟ್ಟಗಳನ್ನು ಉದ್ದಿಮೆದಾರರು ಕೇವಲ ಒಂದು ಸಂಪನ್ಮೂಲವಾಗಿ ನೋಡದೆ, ಭವಿಷ್ಯದ ಪೀಳಿಗೆಯ ಜೀವನಾಡಿಯಾಗಿ ನೋಡಬೇಕು ಎಂದು ಹೇಳಿದರು.

ಬೆಂಗಳೂರು ನಗರ ಒಂದು ಕಾಲದಲ್ಲಿ ನಿವೃತ್ತರ ಸ್ವರ್ಗ, ಹವಾನಿಯಂತ್ರಿತ ನಗರ ಎಂಬ ಖ್ಯಾತಿ ಪಡೆದಿತ್ತು. ಇಂದು ಬೆಂಗಳೂರು ಕೂಡ ಕಾಂಕ್ರೀಟ್ ಕಾಡಾಗುತ್ತಿದ್ದು, ತಾಪಮಾನದ ಏರಿಕೆಯ ಅನುಭವ ಆಗುತ್ತಿದೆ. ಬೆಂಗಳೂರು ನಗರದಲ್ಲಿ ವಾಹನಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದ್ದು, ಧೂಳು, ಹೊಗೆಯಿಂದಾಗಿ ವಾಯುಗುಣಮಟ್ಟವೂ ಕುಸಿಯುತ್ತಿದೆ. ಈ ನಿಟ್ಟಿನಲ್ಲಿ ಬೆಂಗಳೂರು ನಗರ ದೆಹಲಿಯಂತೆ ಮತ್ತೊಂದು ಗ್ಯಾಸ್ ಚೇಂಬರ್ ಆಗದಂತೆ ತಡೆಯಲು ಈಗಿನಿಂದಲೇ ಕ್ರಮ ವಹಿಸುವುದು ಅತ್ಯಗತ್ಯ ಎಂದರು.

ಬೆಂಗಳೂರಿನಲ್ಲಿ ಲಾಲ್ ಬಾಗ್ ಮತ್ತು ಕಬ್ಬನ್ ಪಾರ್ಕ್ ಬಳಿಕ ಸರಿ ಸುಮಾರು ಶತಮಾನದ ತರುವಾಯ 153 ಎಕರೆ ವಿಶಾಲ ಪ್ರದೇಶದಲ್ಲಿ ಬೃಹತ್ ಜೈವಿಕ ಉದ್ಯಾನ ನಿರ್ಮಿಸಲು ತೀರ್ಮಾನಿಸಲಾಗಿದ್ದು, ಬೆಂಗಳೂರು ಉತ್ತರ ತಾಲೂಕು ಯಲಹಂಕ ಬಳಿಯ ಮಾದಪ್ಪನಹಳ್ಳಿಯಲ್ಲಿ ವಿಶ್ವಗುರು ಬಸವಣ್ಣ ಬೃಹತ್ ಜೈವಿಕ ಉದ್ಯಾನ ಅಭಿವೃದ್ಧಿ ಪಡಿಸಲಾಗುತ್ತಿದೆ. ಇದಕ್ಕಾಗಿ 50 ಕೋಟಿ ರೂ. ಬಿಡುಗಡೆಯಾಗಿದ್ದು, ಶೀಘ್ರವೇ ಕಾಮಗಾರಿ ಆರಂಭವಾಗಲಿದೆ. ಬೆಂಗಳೂರು ನಗರದಲ್ಲಿ ಇಂತಹ ಒಂದು ಬೃಹತ್ ಉದ್ಯಾನ ನಿರ್ಮಾಣಕ್ಕೆ ನೀವೆಲ್ಲರೂ ಕೈಜೋಡಿಸಬೇಕು. ಸಿಎಸ್.ಆರ್. ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಅರಣ್ಯೀಕರಣ, ಕ್ಷೀಣಿಸಿದ ಅರಣ್ಯಗಳ ಮರುಸ್ಥಾಪನೆ ಮತ್ತು ನಗರ ಹಸಿರು ಹೊದಿಕೆ ಹೆಚ್ಚಳದಂತಹ ಉಪಕ್ರಮಗಳಲ್ಲಿ ಕೈಗಾರಿಕೋದ್ಯಮಿಗಳು ಸಕ್ರಿಯವಾಗಿ ಭಾಗವಹಿಸಿದರೆ, ಅದು ಮುಂದಿನ ಪೀಳಿಗೆಗೆ ಶುದ್ಧ ಗಾಳಿಯ, ನಿರ್ಮಲ ಪರಿಸರದ, ಸುಗಮ ಜೀವನವನ್ನು ಖಾತ್ರಿ ಪಡಿಸುತ್ತವೆ ಎಂದ ಈಶ್ವರ ಖಂಡ್ರೆ, ಸಾರ್ವಜನಿಕರು, ತಮ್ಮ ಮನೆಯ ಸೌಂದರ್ಯಕ್ಕೆ ಅಡ್ಡಿಯಾಗುತ್ತದೆ, ಮನೆಯ ಮುಂದೆ ಎಲೆ ಉದುರುತ್ತದೆ ಎಂದು ಮರ, ಗಿಡ ಕಡಿಯದೆ, ಹಸಿರು ಉಳಿಸಬೇಕು. ಇಲ್ಲವಾದರೆ ಮುಂದೆ ಉಸಿರಾಟಕ್ಕೂ ಕಷ್ಟ ಪಡಬೇಕಾಗುತ್ತದೆ ಎಂದು ಹೇಳಿದರು.

# ಚಿತ್ತಾಪುರದ 2877 ಎಕರೆ ಸಂರಕ್ಷಿತ ಮೀಸಲು ಅರಣ್ಯ ಘೋಷಣೆ



ಬೆಂಗಳೂರು

ಕಲ್ಬುರ್ಗಿ ಜಿಲ್ಲೆ, ಚಿತ್ತಾಪೂರ ತಾಲೂಕಿನ ಅಲ್ಲೂರು (ಬಿ) ಗ್ರಾಮದ 2877 ಎಕರೆ ಅರಣ್ಯವನ್ನು ಸಂರಕ್ಷಿತ ಮೀಸಲು ಎಂದು ಘೋಷಿಸಲು ಅರಣ್ಯ ಸಚಿವ ಈಶ್ವರ ಖಂಡ್ರೆ ನೇತೃತ್ವದಲ್ಲಿ ನಡೆದ ಕರ್ನಾಟಕ ವನ್ಯಜೀವಿ ಮಂಡಳಿಯ 6ನೇ ಸಭೆಯಲ್ಲಿಂದು ನಿರ್ಧರಿಸಲಾಗಿದೆ.

ಬೆಟ್ಟ ಗುಡ್ಡಗಳಿಂದ ಕೂಡಿದ, ಹಚ್ಚಹಸಿರಿನ ರಮಣೀಯವಾದ ಈ ಅರಣ್ಯ ಪ್ರದೇಶ ಚಿರತೆ, ಕಾಡುಹಂದಿ, ಜಿಂಕೆ, ಕಾಡುಕುರಿ, ಕಾಡುಬೆಕ್ಕು, ಚಿಪ್ಪುಹಂದಿ, ನರಿ ಮೊದಲಾದ ವನ್ಯಜೀವಿಗಳ ಆವಾಸಸ್ಥಾನವಾಗಿದ್ದು, ಈ ಪ್ರದೇಶವನ್ನು ಸಂರಕ್ಷಿತ ಮೀಸಲು ಎಂದು ಘೋಷಿಸಲು ಯೋಗ್ಯವಾಗಿದೆ ಎಂದು ಸಭೆ ತೀರ್ಮಾನಿಸಿತು.

ಇದಕ್ಕೂ ಮುನ್ನ ವನ್ಯಜೀವಿ ಸಂರಕ್ಷಣಾ ಕಾಯಿದೆ 1972ರ ಕಲಂ 36 ಎ ರೀತ್ಯ ಸ್ಥಳೀಯ ಗ್ರಾಮಪಂಚಾಯ್ತಿಯ ವಿಶೇಷ ಗ್ರಾಮಸಭೆಯಲ್ಲಿಯೂ ಈ ಬಗ್ಗೆ ಚರ್ಚಿಸಿ, ಸಂರಕ್ಷಿತ ಮೀಸಲು ಎಂದು ಘೋಷಿಸಲು ಸಮ್ಮತಿ ಪಡೆಯಲಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಉಳಿದಂತೆ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ ಪರಿಸರ ಸೂಕ್ಷ್ಮ ವಲಯದಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ವತಿಯಿಂದ ಹಂತ1 ಪದವಿ ಕಾಲೇಜು ಆವರಣ ನಿರ್ಮಾಣ ಸೇರಿದಂತೆ ವಿವಿಧ ಯೋಜನೆಗಳಿಗೆ ಅನುಮೋದನೆ ನೀಡಲಾಯಿತು.

# ರೈಲು ಸೇವೆಗಳ ಮರುಸ್ಥಾಪನೆ ಮತ್ತು ಪರಿಷ್ಕರಣೆ

ಬೆಂಗಳೂರು

ಸುಬ್ರಹ್ಮಣ್ಯ ರೋಡ್, ಎಡಮಂಗಲ ಹಾಗೂ ನರಿಮೊಗರು ವಿಭಾಗಗಳ ನಡುವೆ ಹಳಿ ಮತ್ತು ವಿದ್ಯುತ್ ನಿರ್ವಹಣಾ ಕಾಮಗಾರಿಗಳಿಗಾಗಿ ಮೊದಲು ರದ್ದು, ನಿಯಂತ್ರಣ ಹಾಗೂ ಮರುನಿಗದಿಗೊಳಿಸಲಾಗಿದ್ದ ಕೆಳಗಿನ ರೈಲು ಸೇವೆಗಳನ್ನು ಇದೀಗ ಮರುಸ್ಥಾಪಿಸಿ, ಪರಿಷ್ಕರಿಸಲಾಗಿದೆ.

ರೈಲು ಸಂಖ್ಯೆ 56629 ಮಂಗಳೂರು ಸೆಂಟ್ರಲ್ ಸುಬ್ರಹ್ಮಣ್ಯ ರೋಡ್ ಪ್ಯಾಸೆಂಜರ್ ಹಾಗೂ ರೈಲು ಸಂಖ್ಯೆ 56630 ಸುಬ್ರಹ್ಮಣ್ಯ ರೋಡ್ ಮಂಗಳೂರು ಸೆಂಟ್ರಲ್ ಪ್ಯಾಸೆಂಜರ್ ರೈಲುಗಳನ್ನು 10 ಜೂನ್ 2026ರಿಂದ 21 ಜೂನ್ 2026ರವರೆಗೆ ರದ್ದುಪಡಿಸಲಾಗಿತ್ತು. ಇದೀಗ ಈ ರೈಲುಗಳನ್ನು ಮರುಸ್ಥಾಪಿಸಲಾಗಿದ್ದು, ನಿಗದಿತ ಸಮಯ ಮತ್ತು ಮಾರ್ಗದಲ್ಲೇ ಸಂಚರಿಸಲಿವೆ.

ರೈಲು ಸಂಖ್ಯೆ 56229 ಮಂಗಳೂರು ಸೆಂಟ್ರಲ್ ಸುಬ್ರಹ್ಮಣ್ಯ ರೋಡ್ ಪ್ಯಾಸೆಂಜರ್ ರೈಲು 21.04.2026ರಿಂದ 09.06.2026ರವರೆಗೆ 55 ನಿಮಿಷಗಳ ನಿಯಂತ್ರಣ ಇರಲಿದೆ ಎಂದು ಮೊದಲು ತಿಳಿಸಲಾಗಿತ್ತು. ಇದೀಗ ಇದರಲ್ಲಿ ಪರಿಷ್ಕರಣೆ ಮಾಡಲಾಗಿದೆ. 16.04.2026ರಿಂದ 04.06.2026ರವರೆಗೆ ಆರಂಭವಾಗುವ ಪ್ರಯಾಣಗಳಲ್ಲಿ ಈ ರೈಲು ಮಾರ್ಗಮಧ್ಯೆ 35 ನಿಮಿಷಗಳ ಕಾಲ ಮಾತ್ರ ನಿಯಂತ್ರಣಕ್ಕೆ ಒಳಪಡಲಿದೆ. 05.06.2026ರಿಂದ 09.06.2026ರವರೆಗೆ ಉಳಿದ ದಿನಗಳಲ್ಲಿ ರೈಲು ತನ್ನ ಸಾಮಾನ್ಯ ವೇಳಾಪಟ್ಟಿಯಂತೆ ಸಂಚರಿಸಲಿದೆ.

ಇದಲ್ಲದೆ, ರೈಲು ಸಂಖ್ಯೆ 56630 ಸುಬ್ರಹ್ಮಣ್ಯ ರೋಡ್ ಮಂಗಳೂರು ಸೆಂಟ್ರಲ್ ಪ್ಯಾಸೆಂಜರ್ ರೈಲು 15 ನಿಮಿಷ ಮರುನಿಗದಿ ಮಾಡುವ ದಿನಾಂಕಗಳಲ್ಲಿಯೂ ಪರಿಷ್ಕರಣೆ ಮಾಡಲಾಗಿದೆ. ಮೊದಲು 21, 23, 25, 28 ಹಾಗೂ 30 ಏಪ್ರಿಲ್ 2026; 02, 05, 07, 09, 12, 14, 16, 19, 21, 23, 26, 28 ಹಾಗೂ 30 ಮೇ 2026; ಮತ್ತು 02, 04, 06 ಹಾಗೂ 09 ಜೂನ್ 2026ರಂದು ಆರಂಭವಾಗುವ ಪ್ರಯಾಣಗಳಿಗೆ 15 ನಿಮಿಷ ತಡವಾಗಿ ಸಂಚರಿಸುವಂತೆ ತಿಳಿಸಲಾಗಿತ್ತು.

ಪರಿಷ್ಕೃತ ವೇಳಾಪಟ್ಟಿಯಂತೆ, ಇದೀಗ ರೈಲು ಸಂಖ್ಯೆ 56630 ಸುಬ್ರಹ್ಮಣ್ಯ ರೋಡ್ – ಮಂಗಳೂರು ಸೆಂಟ್ರಲ್ ಪ್ಯಾಸೆಂಜರ್ 16, 18, 21, 23, 25, 28 ಹಾಗೂ 30 ಏಪ್ರಿಲ್ 2026; 02, 05, 07, 09, 12, 14, 16, 19, 21, 23, 26, 28 ಹಾಗೂ 30 ಮೇ 2026; ಹಾಗೂ 02 ಮತ್ತು 04 ಜೂನ್ 2026ರಂದು ಆರಂಭವಾಗುವ ಪ್ರಯಾಣಗಳಲ್ಲಿ 15 ನಿಮಿಷ ಮರುನಿಗದಿಗೊಳಿಸಿ ಸಂಚರಿಸಲಿದೆ.

# ರೈಲುಗಳ ವೇಳಾಪಟ್ಟಿ ಪರಿಷ್ಕರಣೆ

ಬೆಂಗಳೂರು

ಕಾರ್ಯಾಚರಣೆಯ ಕಾರಣಗಳಿಂದಾಗಿ, ಈ ಕೆಳಗಿನ ರೈಲುಗಳ ವೇಳಾಪಟ್ಟಿಯನ್ನು ಪರಿಷ್ಕರಿಸಲಾಗಿದ್ದು, ಇದು 2026ರ ಏಪ್ರಿಲ್ 24ರಿಂದ ಜಾರಿಗೆ ಬರಲಿದೆ. ಪರಿಷ್ಕೃತ ವೇಳಾಪಟ್ಟಿಯ ವಿವರಗಳು ಹೀಗಿವೆ:

ರೈಲು ಸಂಖ್ಯೆ 16239 ಚಿಕ್ಕಮಗಳೂರು ಯಶವಂತಪುರ ದೈನಂದಿನ ಎಕ್ಸ್‌ಪ್ರೆಸ್ ರೈಲು ಇನ್ನು ಮುಂದೆ ಚಿಕ್ಕಮಗಳೂರಿನಿಂದ ಬೆಳಿಗ್ಗೆ08:15ರ ಬದಲಿಗೆ 08:00 ಗಂಟೆಗೆ ಹೊರಡಲಿದೆ. ಇದರೊಂದಿಗೆ ಮಧ್ಯಂತರ ನಿಲ್ದಾಣಗಳ ಸಮಯವನ್ನೂ ಪರಿಷ್ಕರಿಸಲಾಗಿದೆ. ಕಣಿವೆಹಳ್ಳಿಯಲ್ಲಿ 08:33/08:34ರ ಬದಲಿಗೆ 08:18/08:19 ಗಂಟೆಗೆ, ಸಖರಾಯಪಟ್ಟಣದಲ್ಲಿ ಬಿಸಲೇಹಳ್ಳಿಯಲ್ಲಿ 08:58/08:59ರ ಬದಲಿಗೆ 08:43/08:44 ಗಂಟೆಗೆ ಹಾಗೂ ಕಡೂರು ನಿಲ್ದಾಣಕ್ಕೆ 09:30/09:40ರ ಬದಲಿಗೆ 09:05/09:25 ಗಂಟೆಗೆ ರೈಲು ಆಗಮಿಸಿ, ನಿರ್ಗಮಿಸಲಿದೆ. ದೇವನೂರು ಮತ್ತು ಯಶವಂತಪುರ ನಿಲ್ದಾಣಗಳ ನಡುವಿನ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

18/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅಂಬೇಡ್ಕರ್, ಬಸವ, ಬುದ್ಧರ ಚಿಂತನೆ ಅಗತ್ಯ: ಬರಗೂರು ರಾಮಚಂದ್ರಪ್ಪ

ಕೋಲಾರ

"ಇವತ್ತು ಮಾನವೀಯತೆಯ ಜಾಗದಲ್ಲಿ ಅಮಾನವೀಯತೆ ಮತ್ತು ವಿವೇಕದ ಜಾಗದಲ್ಲಿ ಅವಿವೇಕ ತುಂಬಿರುವ ಆತಂಕಕಾರಿ ಸಂದರ್ಭದಲ್ಲಿದ್ದೇವೆ. ಇಂತಹ ಕಾಲಘಟ್ಟದಲ್ಲಿ ಮಕ್ಕಳ ಮನಸ್ಸಿನೊಳಗೆ ಅಂಬೇಡ್ಕರ್, ಬಸವಣ್ಣ, ಬುದ್ಧ ಹಾಗೂ ಗಾಂಧೀಜಿಯವರಂತಹ ಮಹನೀಯರ ವಿಚಾರಧಾರೆಗಳು ಮೊಳೆಯಬೇಕು" ಎಂದು ಖ್ಯಾತ ಸಾಹಿತಿ ನಾಡೋಜ ಬರಗೂರು ರಾಮಚಂದ್ರಪ್ಪ ತಿಳಿಸಿದರು.

ತೇರಹಳ್ಳಿ ಬೆಟ್ಟದ ಶಿವಗಂಗೆ ಆದಿಮ ಸಾಂಸ್ಕೃತಿಕ ಕೇಂದ್ರದಲ್ಲಿ ಆಯೋಜಿಸಲಾಗಿರುವ **'ಬೇಸಿಗೆ ಶಿಬಿರ ಮಕ್ಕಳ ಮೇಳ-2026'**ಕ್ಕೆ ರಾಗಿಕಲ್ಲು ಬೀಸುವ ಮೂಲಕ ಪಾರಂಪರಿಕವಾಗಿ ಚಾಲನೆ ನೀಡಿ ಅವರು ಮಾತನಾಡಿದರು.



ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಬರಗೂರು, "ಪರಂಪರೆ ಎಂದರೆ ಜಡ ಸಂಪ್ರದಾಯವಲ್ಲ, ಅದು ಚಲನಶೀಲವಾದುದು. ಪರಂಪರೆಯ ಪ್ರಜ್ಞೆ ಇಲ್ಲದೆ ವರ್ತಮಾನವನ್ನು ಅರ್ಥಮಾಡಿಕೊಳ್ಳಲು ಮತ್ತು ಭವಿಷ್ಯವನ್ನು ಕಟ್ಟಲು ಸಾಧ್ಯವಿಲ್ಲ. ಅಂಬೇಡ್ಕರ್ ಅವರು ಅಸ್ಪೃಶ್ಯತೆಯಂತಹ ಅಮಾನವೀಯ ಅನುಭವಗಳನ್ನು ಉಂಡೂ ದೇಶಕ್ಕೆ ಶ್ರೇಷ್ಠ ಸಂವಿಧಾನ ನೀಡಿದ್ದು ದೊಡ್ಡ ಇತಿಹಾಸ. ಈ ಜಾಗೃತಿ ಶಿಕ್ಷಣದಿಂದ ಮಾತ್ರ ಸಾಧ್ಯವಾಯಿತು" ಎಂದು ಪ್ರತಿಪಾದಿಸಿದರು.

ಮೊಬೈಲ್ ಹಾವಳಿ ಮತ್ತು ಕಣ್ಮರೆಯಾಗುತ್ತಿರುವ ಮನುಷ್ಯತ್ವ: ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಮಾತನಾಡಿ, "ಇಂದಿನ ಮಕ್ಕಳು ಮೊಬೈಲ್ ಹಾವಳಿಗೆ ಸಿಲುಕಿ ಮಾನವೀಯ ಸಂಬಂಧಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಪರೀಕ್ಷೆಯ ಅಂಕಗಳಿಗಿಂತ ಜೀವನದ ಅಂಕಗಳು ಮುಖ್ಯ. ಇಂತಹ ಸಾಂಸ್ಕೃತಿಕ ಶಿಬಿರಗಳು ಮಕ್ಕಳಲ್ಲಿ ಮನುಷ್ಯತ್ವವನ್ನು ಬೆಳೆಸುತ್ತವೆ" ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕ ಬಿ.ಎಸ್. ಮಂಜುನಾಥಸ್ವಾಮಿ ಮಾತನಾಡಿ, ಮಕ್ಕಳು ವೈಜ್ಞಾನಿಕವಾಗಿ ಬೆಳೆಯಲು ಆದಿಮ ಕೇಂದ್ರವು ಪೂರಕವಾದ ಕೆಲಸ ಮಾಡುತ್ತಿದೆ ಎಂದು ಶ್ಲಾಘಿಸಿದರು.

ಆದಿಮ ರಂಗಶಿಕ್ಷಣ ಕೇಂದ್ರದ ಆಡಳಿತಾಧಿಕಾರಿ ಅಗ್ರಹಾರ ರಮೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, "ಮತ್ತೆ ಮೊಳೆಯಲಿ ಮಾನವೀಯತೆ" ಎಂಬ ಘೋಷವಾಕ್ಯದೊಂದಿಗೆ ನಡೆಯುತ್ತಿರುವ ಈ ಶಿಬಿರವು ಏಪ್ರಿಲ್ 14 ರಂದು ಆರಂಭವಾಗಿದ್ದು, ಮೇ 1 ರವರೆಗೆ ನಡೆಯಲಿದೆ. ನಾಟಕ, ಹಾಡು, ಕುಣಿತ ಸೇರಿದಂತೆ ವಿವಿಧ ಕಲೆಗಳ ಬಗ್ಗೆ ಸಂಪನ್ಮೂಲ ವ್ಯಕ್ತಿಗಳು ತರಬೇತಿ ನೀಡಲಿದ್ದಾರೆ ಎಂದು ಮಾಹಿತಿ ನೀಡಿದರು.

ಆದಿಮ ಅಧ್ಯಕ್ಷ ಎನ್. ಮುನಿಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಆದಿಮ ರಂಗ ಶಿಕ್ಷಣ ವಿದ್ಯಾರ್ಥಿಗಳಿಂದ ಕಂಸಾಳೆ ನೃತ್ಯ ಹಾಗೂ ಅಂಬೇಡ್ಕರ್ ಕುರಿತು ಕ್ರಾಂತಿಗೀತೆಗಳ ಗಾಯನ ನಡೆಯಿತು. ವೇದಿಕೆಯಲ್ಲಿ ಡಾ. ರಾಜಪ್ಪ ದಳವಾಯಿ, ನಗರಸಭೆ ಸದಸ್ಯ ಅಂಬರೀಶ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಗೋವಿಂದಪ್ಪ ಕಾರ್ಯಕ್ರಮ ನಿರೂಪಿಸಿದರು, ಅಮರೇಶ್ ಸ್ವಾಗತಿಸಿದರೆ, ಡಾ. ನೇತ್ರಾವತಿ ವಂದಿಸಿದರು.

# ಥಣಿಸಂದ್ರದ ಇಸ್ಲಾಮಿಕ್ ಶಾಲೆಗೆ ಬೀಗ: ಹೈಕೋರ್ಟ್‌ನಿಂದ ಸರ್ಕಾರದ ಕ್ರಮಕ್ಕೆ ಬೆಂಬಲ

ಬೆಂಗಳೂರು

ಥಣಿ ಸಂದ್ರದ ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆಯ ನೋಂದಣಿಯನ್ನು "ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಸೆಕ್ಷನ್ 34 ರಡಿ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತಾಲಯ ರದ್ದುಡಿಸಿದೆ.

ಸರ್ಕಾರದ ತೀರ್ಮಾನದ ವಿರುದ್ಧ ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲಾ ಆಡಳಿತ ಮಂಡಳಿ ನಡೆಸಿದ ಕಾನೂನು ಹೋರಾಟಕ್ಕೆ ಹಿನ್ನೆಡೆಯಾಗಿದ್ದು, ಶಾಲಾ ಆಡಳಿತ ಮಂಡಳಿಯ ವಾದವನ್ನು ಹೈಕೋರ್ಟ್ ಸಂಪೂರ್ಣವಾಗಿ ತಿರಸ್ಕರಿಸಿದೆ. ಅನಗತ್ಯವಾಗಿ ರಿಟ್ ಅರ್ಜಿ ಸಲ್ಲಿಸಿದ ಅರ್ಜಿದಾರರಾದ ಶಾಲಾ ಆಡಳಿತ ಮಂಡಳಿಗೆ 25 ಸಾವಿರ ರೂ ದಂಡ ವಿಧಿಸಿ, ರಿಟ್ ಅರ್ಜಿ ವಜಾಗೊಳಿಸಿ, ಸರ್ಕಾರದ ಕ್ರಮವನ್ನು ಎತ್ತಿ ಹಿಡಿದಿದೆ.

ಹೆಜ್ಜೆ, ಹೆಜ್ಜೆಗೂ ನೆಲದ ಕಾನೂನು ಉಲ್ಲಂಘಿಸಿ ಸುಳ್ಳು ಮಾಹಿತಿ ನೀಡಿ ಸರ್ಕಾರವನ್ನು ದಾರಿ ತಪ್ಪಿಸುತ್ತಿದ್ದ ಶಿಕ್ಷಣ ಸಂಸ್ಥೆಗೆ ಕೊನೆಗೂ ಬೀಗ ಮುದ್ರೆ ಹಾಕುವಂತೆ ಸೂಚಿಸಲಾಗಿದೆ. ಎಪ್ರಿಲ್ 10 ರಂದು ಸರ್ಕಾರ ಅಧಿಕೃತ ಆದೇಶ ಜಾರಿ ಮಾಡಿದೆ. ಶಾಲೆಯಲ್ಲಿ ಕಲಿಯುತ್ತಿರುವ 1ನೇ ತರಗತಿಯಿಂದ 7ನೇ ತರಗತಿಯ ವಿದ್ಯಾರ್ಥಿಗಳು ಮತ್ತು 8ನೇ ತರಗತಿಯಿಂದ 10ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗದಂತೆ ತಕ್ಷಣವೇ ಪರ್ಯಾಯ ವ್ಯವಸ್ಥೆ ಮಾಡಬೇಕೆಂದು ಆದೇಶಿಸಿದೆ. ಈ ಆದೇಶ ಉಪ ನಿರ್ದೇಶಕರಿಗೆ ತಲುಪಿದ ಏಳು ದಿನಗಳ ಒಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 ರ, 1999 ರ 13[3] ರ ನಿಯಮದಂತೆ ಪ್ರಸ್ತುತ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮೀಪದ ಶಾಲೆಗೆ ದಾಖಲಿಸಲು ಉಪ ನಿರ್ದೇಶಕರು ಸೂಕ್ತ ಕ್ರಮ ವಹಿಸಬೇಕು. ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಹೇಳಿದೆ. ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆಯ ಶೈಕ್ಷಣಿಕ ದಾಖಲೆಗಳನ್ನು ಹತ್ತಿರದ ಸರ್ಕಾರಿ ಪ್ರಾಥಮಿಕ ಶಾಲೆಗೆ ಹಸ್ತಾಂತರಿಸಿ ಈ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಪ್ರತ್ಯೇಕ ದಾಸ್ತಾನು ವಹಿಯಲ್ಲಿ ನಮೂದಿಸಿ ದಾಖಲೆ ವಹಿ ನಿರ್ವಹಿಸಬೇಕು. ನೋಂದಣಿ ರದ್ದುಪಡಿಸಿರುವ ಆದೇಶವನ್ನು ಉಪ ನಿರ್ದೇಶಕರ ಹಂತದಲ್ಲಿ ಜಾರಿ ಮಾಡಬೇಕು. ಈ ಆದೇಶದ ತಿದ್ದುಪಡಿ ಇಲ್ಲವೆ ಮಾರ್ಪಾಡಿಗೆ ಅವಕಾಶವಿಲ್ಲ ಎಂದು ಸ್ಪಷ್ಟವಾಗಿ ತಿಳಿಸಲಾಗಿದೆ.

ಶಾಲಾ ಜಾಗಕ್ಕೆ ಸಂಬಂಧಿಸಿದಂತೆ ಶಿಕ್ಷಣ ಸಂಸ್ಥೆಯವರು ಯಾವುದೇ ದಾಖಲೆಗಳನ್ನು ಇಲಾಖೆಯ ಪರಿಶೀಲನೆಗೆ ಒದಗಿಸಿಲ್ಲ. ದಾಖಲೆಗಳಲ್ಲಿ ಶಿಕ್ಷಣ ಸಂಸ್ಥೆಯನ್ನು ಎರಡು ಹೆಸರುಗಳಿಂದ ನಮೂದಿಸಲಾಗಿದೆ. ಶಾಲೆಗೆ ಅನುಮತಿ ಪಡೆಯಲು ಸಲ್ಲಿಸಿದ ಮನವಿಯಲ್ಲಿ ತಪ್ಪು ಮತ್ತು ನಕಲಿ ದಾಖಲೆಗಳನ್ನು ಸಲ್ಲಿಸಲಾಗಿದೆ. ಬ್ಯಾಂಕ್ ದಾಖಲೆಗಳಲ್ಲಿಯೂ ಸಹ ತಿದ್ದುಪಡಿ, ಮಾರ್ಪಾಟುಗಳನ್ನು ಮಾಡಿರುವುದು ಸಂದೇಹಾಸ್ಪದವಾಗಿದೆ ಎಂದಿದೆ. ವಿವಿಧ ಹಂತಗಳಲ್ಲಿ ಸಲ್ಲಿಸಿರುವ ದಾಖಲೆಗಳನ್ನು ತಿದ್ದುಪಡಿ ಮಾಡಿದ್ದು, ಸಾಕಷ್ಟು ಲೋಪದೋಷಗಳು ಕಂಡು ಬಂದಿವೆ. 1 ರಿಂದ 10 ನೇ ತರಗತಿಗೆ ಮಾನ್ಯತೆ ನವೀಕರಕ್ಕಾಗಿ ಸಲ್ಲಿಸಿದ ಅರ್ಜಿಯಲ್ಲಿ ಜಾಮೀಯಾ ಮಹಮ್ಮದೀಯ ಮನ್ಸೂರ ಎಂದು ನಮೂದಿಸಿ, ಹೈಕೋರ್ಟ್ ನಲ್ಲಿ ದೂರು ದಾಖಲಾದ ತರುವಾಯ ಸಂಸ್ಥೆಯ ಹೆಸರು ತಪ್ಪಾಗಿದೆ. ಸರಿ ಪಡಿಸಿಕೊಡುವಂತೆ ಶಿಕ್ಷಣ ಸಂಸ್ಥೆಯವರು ಕೋರಿರುವುದನ್ನು ಸಹ ಆದೇಶದಲ್ಲಿ ನಮೂದಿಸಲಾಗಿದೆ.

ಜೊತೆಗೆ ಮುಂಬೈ ವ್ಯಾಪ್ತಿಯಲ್ಲಿ ದಿ ಆಲ್ ಜಮಿಯಾ ಮೊಹಮ್ಮದೀಯ ಎಜುಕೇಶನ್ ಸೊಸೈಟಿ ಹೆಸರಿನಲ್ಲಿ ಸಂಸ್ಥೆ ನೋಂದಣಿಯಾಗಿದೆ. ಆದರೆ ಜಾಮಿಯ ಮೊಹಮ್ಮದ್ದೀಯ ಎಜುಕೇಶನ್ ಸೊಸೈಟಿ ಮತ್ತು ಜಾಮಿಯ ಮೊಹಮ್ಮದೀಯ ಮನ್ಸೂರ ಹೆಸರಿನಲ್ಲಿ ಯಾವುದೇ ಸಂಸ್ಥೆಯನ್ನು ನೋಂದಾಯಿಸಿಲ್ಲ ಎಂದು ಸದರಿ ಸಂಸ್ಥೆಯವರು ನೀಡಿರುವ ಸ್ಪಷ್ಟೀಕರಣವನ್ನು ಆದೇಶದಲ್ಲಿ ಸೇರಿಸಲಾಗಿದೆ. ಹೀಗೆ ಎಲ್ಲಾ ಹಂತಗಳಲ್ಲೂ ಶಿಕ್ಷಣ ಇಲಾಖೆಯನ್ನು ದಾರಿ ತಪ್ಪಿಸಿರುವುದು



ತಿಪಟೂರು ತಾಲೂಕಿನ ಹೊನ್ನವಳ್ಳಿ ಹೋಬಳಿಯ ಮಣಕೀಕೆರೆ ಗ್ರಾಮ ಪಂಚಾಯಿತಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ, ಡಾ. ಬಿ.ಆರ್. ಅಂಬೇಡ್ಕರ್ ಜಯಂತ್ಯೋತ್ಸವ ಆಚರಣೆ ಮತ್ತು ಗ್ರಾ.ಪಂ. ಗ್ರಂಥಾಲಯ ಹಾಗೂ ಅರಿವು ಕೇಂದ್ರದ ಸಹಯೋಗದಲ್ಲಿ ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ತಾ.ಪಂ. ಮಾಜಿ ಸದಸ್ಯ ಎಂ.ಡಿ. ರವಿಕುಮಾರ್, ಪಿಡಿಓ ಹೇಮಣ್ಣ, ಕಾರ್ಯದರ್ಶಿ ಪ್ರಕಾಶ್ ಮತ್ತು ಗ್ರಂಥಾಲಯ ಮೇಲ್ವಿಚಾರಕ ಎಂ.ಎಸ್. ಓಂಕಾರ ಮೂರ್ತಿ ಸೇರಿದಂತೆ ಗ್ರಾಪಂ ಸಿಬ್ಬಂದಿ, ಶಿಕ್ಷಕರು, ಮಕ್ಕಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ಸರ್ಕಾರಿ ಜಾಗ ಒತ್ತುವರಿ ತೆರವು: ಜಿಲ್ಲಾಡಳಿತದಿಂದ ದಿಟ್ಟ ಕ್ರಮ



ಬಳ್ಳಾರಿ

ನಗರದ ವಿವಿಧೆಡೆ ಹಲವು ವರ್ಷಗಳಿಂದ ಅಕ್ರಮವಾಗಿ ಒತ್ತುವರಿಯಾಗಿದ್ದ ಸರ್ಕಾರಿ ಜಾಗವನ್ನು ಜಿಲ್ಲಾಡಳಿತವು ಕಾರ್ಯಾಚರಣೆಯ ಮೂಲಕ ಗುರುವಾರ ತೆರವುಗೊಳಿಸಿದೆ.

ಇಲ್ಲಿನ ಅವಂಭಾವಿಯ ದೇವಸ್ಥಾನದ ಹಿಂಭಾಗದಲ್ಲಿ ಒತ್ತುವರಿ ಮಾಡಿ ತಡೆಗೋಡೆ ನಿರ್ಮಿಸಿದ್ದ ರಸ್ತೆ ಸೇರಿದಂತೆ 22 ಸೆಂಟ್ಸ್ ವಿಸ್ತೀರ್ಣದ ಸರ್ಕಾರಿ ಜಾಗ ಅಧಿಕಾರಿಗಳು ವಶಕ್ಕೆ ಪಡೆಯಲಾಯಿತು. ತೆರವುಗೊಳಿಸಿದ ಜಾಗಕ್ಕೆ ಅಳವಡಿಸಿ 'ಸರ್ಕಾರಿ ಸ್ವತ್ತು' ಎಂಬ ನಾಮಫಲಕ ಹಾಕಲಾಯಿತು. ಮುಂಜಾನೆಯೇ ಸ್ಥಳಕ್ಕೆ ಆಗಮಿಸಿದ ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸರು ಜೆಸಿಬಿ ಯಂತ್ರಗಳ ಮೂಲಕ ನೆಲಸಮ ಮಾಡಿದರು.

ಬಳಿಕ ನಲ್ಲಚೇರುವು ಪ್ರದೇಶದಲ್ಲಿ ಒತ್ತುವರಿಯಾಗಿದ್ದ 5.5 ಎಕರೆ ಜಮೀನು ಸರ್ಕಾರದ ಸ್ವತ್ತು ಎಂದು ನಾಮಫಲಕ ನೆಡಲಾಯಿತು. ನಂತರ ಭತ್ರಿ ಕಾಲೋನಿಯ ಈಶ್ವರ ದೇವಸ್ಥಾನದ ಬಳಿ ಸರ್ಕಾರಿ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿದ್ದ ಶೆಡ್ ಮತ್ತು ಮನೆ ತೆರವು ಕಾರ್ಯಾಚರಣೆ ಮಾಡಲಾಯಿತು. ಕಾರ್ಯಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ ಸೇರಿದಂತೆ ಡಿಡಿಎಲ್ಆರ್, ಎಡಿಎಲ್ಆರ್ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಇತರರು ಪಾಲ್ಗೊಂಡಿದ್ದರು.

# ಮೇ 9ರಂದು ಡಯಾಬಿಟೀಸ್ ರೋಗಿಗಳಿಗಾಗಿ ಮಾರ್ಗದರ್ಶನ

ಬಳ್ಳಾರಿ







ಶ್ರೀ ಶ್ರೀ ಜಗದ್ಗುರು ಶಂಕರಾಚಾರ್ಯ ಮಹಾಸಂಸ್ಥಾನಂ ದಕ್ಷಿಣಾಮ್ನಾಯ ಶೃಂಗೇರಿ ಶ್ರೀ ಶಾರದಾ ಪೀಠಂ ಶೃಂಗೇರಿ, ಅಹಂ ಬ್ರಹ್ಮಾಸ್ಮಿ ಪ್ರತಿಷ್ಠಾನ, ಶಾಂಕರ ತತ್ವ ಪ್ರಸಾರ ಅಭಿಯಾನ, ಶೃಂಗೇರಿ ಹಾಗೂ ಶ್ರೀ ಶೃಂಗೇರಿ ಶಂಕರಮಠ ಸಂಗನಕಲ್ಲು ರಸ್ತೆ ಹಾಗೂ ಸಭಾಪತಿ ಬೀದಿ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಮೇ 9 ರಂದು ಡಯಾಬಿಟೀಸ್ ರೋಗಿಗಳಿಗಾಗಿ ಬೃಹತ್ ಆರೋಗ್ಯ ಜಾಗೃತಿ ಹಾಗೂ ಮಾರ್ಗದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ.

1000ಕ್ಕೂ ಹೆಚ್ಚು ಡಯಾಬಿಟಿಸ್ ರೋಗಿಗಳಿಗಾಗಿ ಅಂದು ಸಂಜೆ 5 ಗಂಟೆಯಿಂದ ಸಂಗನಕಲ್ಲು ರಸ್ತೆಯ ಶ್ರೀ ಶೃಂಗೇರಿ ಶಂಕರ ಮಠದ ಶ್ರೀ ಭಾರತೀ ತೀರ್ಥ ಸಭಾಭವನದಲ್ಲಿ ಈ ಕಾರ್ಯಕ್ರಮ ನಡೆಯಲಿದೆ.

ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಭಾರತೀತೀರ್ಥ ಮಹಾಸನ್ನಿಧಾನಂಗಳವರ ಮತ್ತು ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ವಿಧುಶೇಖರ ಭಾರತೀ ಸನ್ನಿಧಾನಂಗಳವರ ಅನುಗ್ರಹಪೂರ್ವಕವಾದ ಕೃಪಾಶೀರ್ವಾದ "ಆರೋಗ್ಯದಲ್ಲಿ ಸಿಹಿ – ನೆಮ್ಮದಿಯ ಜೀವನಕ್ಕೆ ನೆನಪಿರಬೇಕಾದ ನಿಯಮಗಳು" ಎಂಬ ಶೀರ್ಷಿಕೆಯೊಂದಿಗೆ ಜನರಲ್ಲಿ ಡಯಾಬಿಟಿಸ್ ಕುರಿತು ಸರಿಯಾದ ಜಾಗೃತಿ ಮೂಡಿಸಲಾಗುತ್ತದೆ.

ಆಹಾರ ಪದ್ಧತಿ, ಯೋಗ, ಔಷಧ ಮತ್ತು ನಿಯಮಿತ ಜೀವನಶೈಲಿಯ ಮೂಲಕ ಡಯಾಬಿಟಿಸ್ ನಿಯಂತ್ರಣದಲ್ಲಿ ಇರಿಸಿಕೊಂಡು ನೆಮ್ಮದಿಯ ಮತ್ತು ಆರೋಗ್ಯಕರ ಜೀವನ ನಡೆಸಲು ಮಾರ್ಗದರ್ಶನ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಡಯಾಬಿಟಿಸ್ ಹಾಗೂ ಪ್ರೀ–ಡಯಾಬಿಟಿಸ್ ಇರುವವರು, ಕುಟುಂಬದಲ್ಲಿ ಡಯಾಬಿಟಿಸ್ ಇತಿಹಾಸ ಇರುವವರು, ಆರೋಗ್ಯದ ಬಗ್ಗೆ ಕಾಳಜಿ ಇರುವ ಸಾಮಾನ್ಯ ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದು.

ಖ್ಯಾತ ಡಯಾಬಿಟಿಸ್ ಜಾಗೃತಿ ಮಾರ್ಗದರ್ಶಕರಾದ ಡಾ. ಪರಿಮಳ ಜಗ್ಗೇಶ್, ಸಾಧನ ಯೋಗ ಮತ್ತು ಪ್ರಾಕೃತಿಕ ಚಿಕಿತ್ಸಾ ಕೇಂದ್ರದ ನಿರ್ದೇಶಕಿ ಸಿ.ರೂಪ ಅವರು ಪಾಲ್ಗೊಳ್ಳಲಿದ್ದಾರೆ. ಜೀವನಶೈಲಿ ಸಂಬಂಧಿತ ಮುನ್ನೆಚ್ಚರಿಕಾ ಹಾಗೂ ನಿಯಮಿತ ಆರೋಗ್ಯ ತಪಾಸಣೆಯನ್ನು ಡಾ.ಪ್ರವೀಣ್ ಕುಮಾರ್ ನಡೆಸಿಕೊಡಲಿದ್ದಾರೆ.

ಅಹಂ ಬ್ರಹ್ಮಾಸ್ಮಿ ಪ್ರತಿಷ್ಠಾನ, ಶೃಂಗೇರಿ ಹಾಗೂ ಶ್ರೀ ಶಾರದ ಪೀಠದ ಶಾಂಕರ ತತ್ವ ಪ್ರಸಾರ ಅಭಿಯಾನದಿಂದ ಆಯೋಜಿಸಲ್ಪಡುತಿರುವ ಈ ಸಾರ್ಥಕ ಕಾರ್ಯಕ್ರಮದಲ್ಲಿ ಸರ್ವರೂ ಪಾಲ್ಗೊಂಡು ಇದರ ಉಪಯೋಗವನ್ನು ಪಡೆಯುವಂತೆ ಶ್ರೀ ಶೃಂಗೇರಿ ಶಾರದಾ ಪೀಠದ ಆಡಳಿತಾಧಿಕಾರಿಗಳು, ಗುರುಸೇವಾ ನಿರತ ಪಿ.ಎ. ಮುರಳಿ ಅವರು ಕೋರಿದ್ದಾರೆ.

# ನಜೀರ್ ಅಹಮದ್ ನಡೆಗೆ ತಕ್ಕ ಶಾಸ್ತಿ: ಸಂತೋಷ್ ಕುಮಾರ್ ಹರ್ಷ

ಕೋಲಾರ

ಸಿ.ಎಂ.ರಾಜಕೀಯ ಕಾರ್ಯದರ್ಶಿ ಹುದ್ದೆಯಿಂದ ವಿಧಾನ ಪರಿಷತ್ ಸದಸ್ಯ ನಜೀರ್ ಅಹಮ್ಮದ್ ಅವರನ್ನು ವಜಾಗೊಳಿಸಿರುವುದು ಸರಿಯಾದ ಕ್ರಮವಾಗಿದೆ ಎಂದು ಕರ್ನಾಟಕ ಸಂರಕ್ಷಣಾ ಸೇನೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಹಾಗೂ 2018ರ ಕೋಲಾರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ದಿವಂಗತ ಸಯ್ಯದ್ ಜಮೀರ್ ಪಾಷಾ ಅವರ ಆಪ್ತ ಸಹಾಯಕರಾಗಿ ಕಾರ್ಯನಿರ್ವಹಿಸಿದ್ದ ಸಂತೋಷ್ ಕುಮಾರ್ ಎಂ ಅಭಿಪ್ರಾಯಪಟ್ಟಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, 2018ರ ಕೋಲಾರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಯ್ಯದ್ ಜಮೀರ್ ಪಾಷ ಅವರ ಪರವಾಗಿ ಕೆಲಸ ಮಾಡಿದ್ದರೋ ಇಲ್ಲವೋ ಎಂಬುದು ಸಹ ಅನುಮನವಾಗಿದೆ. ದಾವಣಗೆರೆಯಲ್ಲಿ ಪ್ರಚಾರಕ್ಕೆ ಹೋಗದೆ ಅಲ್ಲಿನ ಕಾಂಗ್ರೆಸ್ ಅಭ್ಯರ್ಥಿ ಸೋಲುವ ಭೀತಿಗೆ ಕಾರಣಕರ್ತರಾದ ನಜೀರ್ ಅಹಮದ್ ಅವರ ನಡೆಗೆ ತಕ್ಕ ಶಾಸ್ತಿ ಮಾಡಿರುವ ಕಾಂಗ್ರೆಸ್ ಹೈಕಮಾಂಡ್ ಮತ್ತು ಮುಖ್ಯಮಂತ್ರಿಗಳ ನಡೆ ಪ್ರಶಂಸನೀಯ ನಾನು ಪ್ರಶ್ನಿಸುವ ಅಂಶಗಳ ಹಾಗೂ ತಮ್ಮ ಪ್ರಗತಿಯ ಬಗ್ಗೆ ವಿವರಣೆ ನೀಡಿ, ವಜಾ ಗೊಳಿಸಿರುವ ಬಗ್ಗೆ ಪ್ರಶ್ನಿಸಲಿ, ತಪ್ಪೊಪ್ಪಿಗೆ ಆದರೇ ಸಾರ್ವಜನಿಕವಾಗಿ, ತಾರ್ಕಿಕ ವಸ್ತು ನಿಷ್ಠೆ ಹಾಗೂ ಸಮರ್ಥನೆಗಾಗಿ ಪ್ರತಿಬಿಂಬ ಹಾಗೂ ಸಾಧನೆ ಬಗ್ಗೆ ವಿವರಿಸಲಿ ಎಂದು ಸವಾಲು ಹಾಕಿದ್ದಾರೆ.

ಎಂ.ಎಲ್.ಸಿ ನಜೀರ್ ಅಹಮದ್ ರವರಿಗೆ ಮುಖ್ಯಮಂತ್ರಿಗಳ ಕಾರ್ಯದರ್ಶಿ ಸ್ಥಾನಕ್ಕೆ ಸೂಕ್ತವಾದ ವ್ಯಕ್ತಿಯಲ್ಲ. ತಮ್ಮ ಸ್ಥಾನದ ಗೌರವವನ್ನು ಕಾಪಾಡಿಕೊಳ್ಳದ ಇಂತಹ ವ್ಯಕ್ತಿಗಳಿಂದ ಪಕ್ಷಕ್ಕೆ ಏನನ್ನೂ ನಿರೀಕ್ಷಿಸಲಾಗದು. ಇದನ್ನು ಮನಗಂಡ ಕಾಂಗ್ರೆಸ್ ಪಕ್ಷ ಕಾರ್ಯದರ್ಶಿ ಹುದ್ದೆಯಿಂದ ವಿಧಾನ ಪರಿಷತ್ ಸದಸ್ಯ ನಜೀರ್ ಅಹಮದ್ ಅವರನ್ನು ವಜಾಗೊಳಿಸಿರುವುದನ್ನು ಸ್ವಾಗತಿಸುತ್ತೇನೆ.

ಈ ಕುರಿತು ಚರ್ಚಿಸಲು ತಾವು ಯಾವ ದಿನಾಂಕ, ಯಾವ ಸ್ಥಳದಲ್ಲಿ ನಿಗಧಿಸಿಪಡಿಸಿದರು ಸಹ ತಾನು ಚರ್ಚೆಗೆ ಹಾಜರಾಗುತ್ತೇನೆ ಎಂದು ನಜೀರ್ ಅಹಮದ್ ಅವರಲ್ಲಿ ಕೋರಿದ್ದಾರೆ. ನಿವೃತ್ತಿ ನಂತರ ದಿವಂಗತ ಸೈಯದ್ ಜಮೀರ್ ಪಾಷ ಅವರು ಕಾಂಗ್ರೆಸ್ ಪಕ್ಷದ ಹೈ ಕಮಾಂಡ್ ಸೂಚನೆ ಮೇರೆಗೆ ಅನೇಕ ಚುನಾವಣಾ ವೀಕ್ಷಕರಾಗಿ ಕಾರ್ಯ ನಿರ್ವಹಿಸಿರುವುದನ್ನು ಇಲ್ಲಿ ನೆನೆಪಿಸಿಕೊಳ್ಳಬಹುದು.

## ಮೋದಿಗೆ ರಾಜ್ಯದ ಬೇಡಿಕೆಗಳ ಪಟ್ಟಿ ಸಲ್ಲಿಸಿದ ಸಿಎಂ

ಬೆಂಗಳೂರು



ಮಂಡ್ಯ ಜಿಲ್ಲೆಯ ಆದಿಚುಂಚನಗಿರಿ ಕ್ಷೇತ್ರದಲ್ಲಿ ಗುರು ಬೈರವೈಕ್ಯ ಮಂದಿರದ ಉದ್ಘಾಟನೆಗಾಗಿ ಬುಧವಾರ ಬೆಳಗ್ಗೆ ವಿಶೇಷ ವಿಮಾನದ ಮೂಲಕ ಹೆಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಬಂದಿಳಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬರಮಾಡಿಕೊಂಡರು. ಇದೇ ಸಂದರ್ಭದಲ್ಲಿ ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದ 14 ಪ್ರಮುಖ ಬೇಡಿಕೆಗಳನ್ನೊಳಗೊಂಡ ಸವಿಸ್ತಾರ ಮನವಿಯನ್ನು ಸಲ್ಲಿಸಿದ ಮುಖ್ಯಮಂತ್ರಿಗಳು, ಕೇಂದ್ರದಿಂದ ಆಗಬೇಕಾದ ತುರ್ತು ಮಂಜೂರಾತಿಗಳ ಬಗ್ಗೆ ಒತ್ತಾಯಿಸಿದರು.

ಪ್ರಧಾನಿಯವರಿಗೆ ಸಲ್ಲಿಸಿದ ಪತ್ರದಲ್ಲಿ ಕರ್ನಾಟಕದ ಆರ್ಥಿಕ ಮತ್ತು ಸಾಮಾಜಿಕ ಕೊಡುಗೆಯನ್ನು ಸ್ಮರಿಸಿದ ಸಿದ್ದರಾಮಯ್ಯ, "ದೇಶದ ಬೊಕ್ಕಸಕ್ಕೆ ಕರ್ನಾಟಕ ದೊಡ್ಡ ಕೊಡುಗೆ ನೀಡುತ್ತಿದೆ. ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಲು ಮತ್ತು ರಾಜ್ಯದ ಪ್ರಗತಿಗೆ ವೇಗ ನೀಡಲು ಬಾಕಿ ಇರುವ ಯೋಜನೆಗಳಿಗೆ ತಕ್ಷಣ ಮಂಜೂರಾತಿ ನೀಡಬೇಕು" ಎಂದು ಕೋರಿದರು.

ಮನವಿಯಲ್ಲಿನ ಪ್ರಮುಖ 14 ಅಂಶಗಳು:

ಮುಖ್ಯಮಂತ್ರಿಗಳು ಸಲ್ಲಿಸಿದ ಪತ್ರದಲ್ಲಿ ರಾಜ್ಯದ ಹಿತದೃಷ್ಟಿಯಿಂದ ಈ ಕೆಳಗಿನ ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಲಾಗಿದೆ.

ನೀರಾವರಿ ಯೋಜನೆಗಳು: ಮೇಕೆದಾಟು ಮತ್ತು ಮಹದಾಯಿ ಯೋಜನೆಗೆ ತಕ್ಷಣದ ಪರಿಸರ ಅನುಮತಿ ಹಾಗೂ ಅಪ್ಪರ್ ಭದ್ರಾ ಯೋಜನೆಗೆ ಕೇಂದ್ರ ಘೋಷಿಸಿದ್ದ 5,300 ಕೋಟಿ ರೂ. ಅನುದಾನ ಬಿಡುಗಡೆ.

ಕೃಷ್ಣಾ ಮೇಲ್ದಂಡೆ: ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸುವುದು ಹಾಗೂ ಕೃಷ್ಣಾ ನ್ಯಾಯಮಂಡಳಿ ಆದೇಶದ ಗೆಜೆಟ್ ನೋಟಿಫಿಕೇಷನ್ ಹೊರಡಿಸುವುದು.

ರೈಲ್ವೆ ಯೋಜನೆಗಳು: ಕೋಲಾರದಲ್ಲಿ ನೆನೆಗುದಿಗೆ ಬಿದ್ದಿರುವ ರೈಲ್ವೆ ಕೋಚ್ ಕಾರ್ಖಾನೆ ಸ್ಥಾಪನೆ (ಇದಕ್ಕೆ 123 ಎಕರೆ ಭೂಮಿ ನೀಡಲು ರಾಜ್ಯ ಸಿದ್ಧವಿದೆ) ಹಾಗೂ ಬೆಂಗಳೂರು–ಮೈಸೂರು ನಡುವೆ ಹೈಸ್ಪೀಡ್ ರೈಲ್ವೆ ಕಾರಿಡಾರ್ ನಿರ್ಮಾಣ.

ಅನುದಾನ ಬಿಡುಗಡೆ: ಜಲ್‌ಜೀವನ್ ಮಿಷನ್ ಅಡಿ ಬಾಕಿ ಇರುವ 15,554 ಕೋಟಿ ರೂ., 15ನೇ ಹಣಕಾಸು ಆಯೋಗದ ಗ್ರಾಮ ಪಂಚಾಯಿತಿ ಅನುದಾನ 2,860 ಕೋಟಿ ರೂ. ಮತ್ತು ಬೆಂಗಳೂರು ಅಭಿವೃದ್ಧಿಗೆ ವಿಶೇಷ 6,000 ಕೋಟಿ ರೂ. ಬಿಡುಗಡೆ.

ಮೀಸಲಾತಿ: ಎಸ್‌ಸಿ/ಎಸ್‌ಟಿ ಮತ್ತು ಹಿಂದುಳಿದ ವರ್ಗಗಳಿಗೆ ಶೇ. 50ರಷ್ಟು ಮೀಸಲಾತಿ ನೀಡುವ ರಾಜ್ಯದ ತೀರ್ಮಾನವನ್ನು ಸಂವಿಧಾನದ 9ನೇ ಶೆಡ್ಯೂಲ್ ಪ್ರಕಾರ ಜಾರಿಗೊಳಿಸುವುದು.

ಇದಕ್ಕೂ ಮೊದಲು ವಿಮಾನ ನಿಲ್ದಾಣದಲ್ಲಿ ಪ್ರಧಾನಿ ಮೋದಿಯವರನ್ನು ಮುಖ್ಯಮಂತ್ರಿಗಳು ಶಾಲು ಹೊದಿಸಿ, ಮೈಸೂರು ಪೇಟ ತೊಡಿಸಿ ಹಾಗೂ ಹಾರ ಹಾಕುವ ಮೂಲಕ ಆತ್ಮೀಯವಾಗಿ ಬರಮಾಡಿಕೊಂಡರು. ರಾಜ್ಯದ ಸಾಂಸ್ಕೃತಿಕ ಮತ್ತು ಆರ್ಥಿಕ ಪ್ರಗತಿಯಲ್ಲಿ ಕರ್ನಾಟಕದ ಪಾತ್ರವನ್ನು ವಿವರಿಸಿದ ಅವರು, ನದಿ ಜೋಡಣೆ ಮತ್ತು ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಬಗ್ಗೆಯೂ ಚರ್ಚಿಸಿದರು.

# ಗ್ರೇಡಿಂಗ್ ಪ್ರಶ್ನಿಸಿದ್ದ ಅರ್ಜಿ ವಜಾ

ಕೊಪ್ಪಳ



ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿ ತೃತೀಯ ಭಾಷೆಗೆ ಅಂಕಗಳ ಬದಲಿಗೆ ಗ್ರೇಡಿಂಗ್ ನೀಡಲು ಮುಂದಾಗಿರುವ ಸರ್ಕಾರದ ಪ್ರಸ್ತಾವನೆ ಪ್ರಶ್ನಿಸಿದ್ದ ಅರ್ಜಿ ವಜಾಗೊಳಿಸಿ ಉಚ್ಚ ನ್ಯಾಯಾಲಯವು ಅರ್ಜಿದಾರರಿಗೆ ಒಂದು ಲಕ್ಷ ರೂಪಾಯಿ ದಂಡ ವಿಧಿಸಿರುವ ತೀರ್ಪನ್ನು ಹೆಚ್.ಕರ್ನಾಟಕ ರಕ್ಷಣಾ ವೇದಿಕೆ ಸ್ವಾಗತಿಸುತ್ತದೆ ಎಂದು ಕರವೇ ಜಿಲ್ಲಾಧ್ಯಕ್ಷ ಶಿವರಾಜ ಉಳ್ಳಾಗಡ್ಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹಿಂದಿ ಹೇರಿಕೆ ಪರವಾಗಿ ವಾದ ಮಾಡುತ್ತಿದ್ದವರಿಗೆ ಉಚ್ಚ ನ್ಯಾಯಾಲಯ ನೇರವಾಗಿ ಛೀಮಾರಿ ಹಾಕಿದೆ. ಮಾಧ್ಯಮಗಳಲ್ಲಿ ಸಂಪೂರ್ಣ ಹಿಂದಿಯನ್ನು ಕಡೆಗಣಿಸಲಾಗಿದೆ ಎಂಬ ಹೇಳಿಕೆ ಎಲ್ಲೂ ಪ್ರಕಟವಾಗಿಲ್ಲ. ಹೀಗಿದ್ದರೂ ಪೂರ್ವಾಗ್ರಹ ಪೀಡಿತರಾಗಿ ನ್ಯಾಯಾಲಯದಲ್ಲಿ ಅರ್ಜಿದಾರ ಅರ್ಜಿ ಸಲ್ಲಿಸಲಾಗಿದೆ ಎಂದು ಮುಖ್ಯ ನ್ಯಾಯಮೂರ್ತಿ ನೇತೃತ್ವದ ವಿಭಾಗೀಯ ಪೀಠ ಕಿಡಿ ಕಾರಿದ್ದಾರೆ. ಪತ್ರಿಕಾ ಹೇಳಿಕೆ ನೋಡಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದೀರಾ? ಎಂದು ಅರ್ಜಿದಾರರನ್ನು ಪ್ರಶ್ನೆ ಮಾಡಿರುವುದು ಸಮಂಜಸವಾಗಿದೆ ಎಂದು ಶಿವರಾಜ ಉಳ್ಳಾಗಡ್ಡಿ ಹೇಳಿದ್ದಾರೆ.

ತೃತೀಯ ಭಾಷೆ ಗ್ರೇಡಿಂಗ್ ವ್ಯವಸ್ಥೆಯನ್ನು ಹಲವು ಪಟ್ಟಭದ್ರ ಹಿತಾಸಕ್ತಿಗಳು ತಮ್ಮ ಮನಸ್ಸಿಗೆ ಬಂದಂತೆ ವ್ಯಾಖ್ಯಾನಿಸಿ ಗೊಂದಲ ಉಂಟು ಮಾಡಿದ್ದರು. ಹಿಂದಿ ಭಾಷೆಯೂ ಸೇರಿ ಮೂರನೆಯ ಭಾಷೆ ಕಲಿಕೆಯನ್ನು ರಾಜ್ಯ ಸರ್ಕಾರ ಹಿಂದೆ ಪಡೆದಿರಲಿಲ್ಲ. ಆದರೆ ಅದನ್ನೇ ತಪ್ಪಾಗಿ ಬಿಂಬಿಸಲಾಗಿತ್ತು ಮತ್ತು ಈ ವಿಷಯವನ್ನು ಉಚ್ಚ ನ್ಯಾಯಾಲಯದವರೆಗೂ ತೆಗೆದುಕೊಂಡು ಹೋಗಲಾಗಿತ್ತು. ಅರ್ಜಿದಾರರಿಗೆ ಮೊದಲು 50 ಸಾವಿರ ರೂಪಾಯಿಯ ದಂಡ ವಿಧಿಸಿದ್ದ ನ್ಯಾಯಾಲಯ ನಂತರ ಅದನ್ನು 1 ಲಕ್ಷ ರೂಪಾಯಿಗೆ ಏರಿಸಲಾಯಿತು. ಸರ್ಕಾರ ಈ ಕೂಡಲೇ ನಿಯಮಾನುಸಾರ ನಿಯಮಾವಳಿಗಳನ್ನು ರೂಪಿಸಿ ಗ್ರೇಡಿಂಗ್ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ತಿಳಿಸಿದ್ದಾರೆ.

ಒಟ್ಟಿನಲ್ಲಿ, ಹಿಂದಿ ಸಾಮ್ರಾಜ್ಯ ಶಾಹಿಗಳ ಹುನ್ನಾರಗಳಿಗೆ ಕರ್ನಾಟಕ ಸರ್ಕಾರ ಮಣೆ ಹಾಕಬಾರದು. ಕರುನಾಡಿನ ಮಕ್ಕಳ ಹಿತಾಸಕ್ತಿ ಕಾಪಾಡಬೇಕು ಎಂದು ಕೊಪ್ಪಳ ಜಿಲ್ಲೆಯ ಕರವೇ ಜಿಲ್ಲಾಧ್ಯಕ್ಷರಾದ ಶಿವರಾಜ ಉಳ್ಳಾಗಡ್ಡಿ ಅವರು ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

# ವಿದ್ಯಾರ್ಥಿಗಳೇ ಮೊಬೈಲ್ ಬಿಡಿ, ಯೋಗದತ್ತ ಗಮನ ಕೊಡಿ: ಪ್ರಮೀಳಾ

ಚಿಕ್ಕಬಳ್ಳಾಪುರ

"ಶಾಂತ ಮನಸ್ಸಿನಿಂದ ಯೋಗ ಶಿಬಿರಗಳಲ್ಲಿ ಪಾಲ್ಗೊಂಡು ಉಸಿರಾಟದ ಕ್ರಿಯೆ ಹಾಗೂ ಧ್ಯಾನದ ಅಭ್ಯಾಸ ಮಾಡುವುದರಿಂದ ಮನಸ್ಸಿನ ಒತ್ತಡವನ್ನು ಕಡಿಮೆ ಮಾಡಿಕೊಳ್ಳಲು ಸಾಧ್ಯ" ಎಂದು ಮಂಚೇನಹಳ್ಳಿಯ ಪ್ರಜಾಪಿತ ಬ್ರಹ್ಮಾಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ರಾಜಯೋಗಿನಿ ಬಿ.ಕೆ. ಪ್ರಮೀಳಾ ತಿಳಿಸಿದರು.

ತಾಲೂಕಿನ ಪೋಶೆಟ್ಟಿಹಳ್ಳಿ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಶ್ರೀ ಪತಂಜಲಿ ಸಂಸ್ಥೆಯ ವತಿಯಿಂದ ಆಯೋಜಿಸಿದ್ದ 'ಮಕ್ಕಳ ವಸಂತ ಯೋಗ ಶಿಬಿರ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.



ಯೋಗದ ಪೂರ್ಣ ಲಾಭ ಪಡೆಯಲು ಮುಂಜಾನೆ ಬೇಗ ಎದ್ದು ಸರಳ ಆಸನಗಳೊಂದಿಗೆ ಪ್ರಾಣಾಯಾಮಕ್ಕೆ ಒತ್ತು ನೀಡಬೇಕು. ಅತಿಯಾದ ಒತ್ತಡ ಹೇರದೆ ನುರಿತ ಶಿಕ್ಷಕರ ಮಾರ್ಗದರ್ಶನದಲ್ಲಿ ನಿರಂತರವಾಗಿ ಅಭ್ಯಾಸ ಮಾಡುವುದು ಶೈಕ್ಷಣಿಕ ಪ್ರಗತಿಗೆ ಸಹಕಾರಿ. ವಿದ್ಯಾರ್ಥಿಗಳು ಕಲಿಕಾ ಹಂತದಲ್ಲಿ ಮೊಬೈಲ್ ಹಾವಳಿಯಿಂದ ದೂರವಿದ್ದು, ಆರೋಗ್ಯಕರ ಆಹಾರ ಸೇವನೆಯತ್ತ ಗಮನಹರಿಸಬೇಕು ಎಂದು ಅವರು ಸಲಹೆ ನೀಡಿದರು. ಶಿಕ್ಷಕಿ ಹಾಗೂ ಪತಂಜಲಿ ಸಂಸ್ಥೆಯ ನಾಗವೇಣಿ ಮಾತನಾಡಿ, "ಸರಿಯಾದ ಭಂಗಿಯಲ್ಲಿ ಯೋಗಾಸನ ಮಾಡುವುದರಿಂದ ದೇಹದ ಮೇಲೆ ಯಾವುದೇ ಅಡ್ಡಪರಿಣಾಮ ಬೀರದು.

ದೇಹದ ಸಾಮರ್ಥ್ಯಕ್ಕೆ ಅನುಗುಣವಾಗಿ ಆಸನಗಳನ್ನು ಮಾಡಬೇಕು. ಶಿಬಿರದ ಅವಧಿಯಲ್ಲಿ ಸಾತ್ವಿಕ ಮತ್ತು ಲಘು ಆಹಾರ ಸೇವಿಸುವುದು ಹೆಚ್ಚು ಪರಿಣಾಮಕಾರಿ" ಎಂದರು. ಈ ಉಚಿತ ಶಿಬಿರದ ಮೂಲಕ ಮಕ್ಕಳಿಗೆ ಯೋಗದ ಜೊತೆಗೆ ಅಧ್ಯಾತ್ಮಿಕ ಚಿಂತನೆ, ಭಜನೆ, ಸ್ವಾಧ್ಯಾಯ ಮತ್ತು ಜೀವನದ ಗುರಿಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಶಿಬಿರದಲ್ಲಿ ಪೋಶೆಟ್ಟಿಹಳ್ಳಿ ಹಾಗೂ ಸುತ್ತಮುತ್ತಲ ಗ್ರಾಮಗಳ ಸುಮಾರು 30ಕ್ಕೂ ಹೆಚ್ಚು ವಿದ್ಯಾರ್ಥಿ– ವಿದ್ಯಾರ್ಥಿನಿಯರು ಉತ್ಸಾಹದಿಂದ ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy